ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 155 ಸಂಚಿಕೆ- 155 | PAGE-8 ಪುಟ-8 | ಬುಧುವಾರ 30.07.2025 | RS.2/- ಬೆಲೆ 2/-




## ಶಿಕ್ಷಕನಿಗೆ ಚಪ್ಪಲಿ ಏಟು ಕೊಟ್ಟ ಶಿಕ್ಷಕಿ ಅಮಾನತ್ತು!

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.29-ತನ್ನಸಹಪಾಠಿ ಶಿಕ್ಷಕರೊಬ್ಬರಿಗೆ ಚಪ್ಪಲಿಯಿಂದ ಹೊಡೆದಿದ್ದ ಜಿಲ್ಲೆಯ ಇಳಕಲ್ಲ ಪಟ್ಟಣದ ಸರ್ಕಾರಿ ಉರ್ದು ಪ್ರಾಥಮಿಕ ಶಾಲೆಯ ಶಿಕ್ಷಕಿ ಅಮೀನಾ ಕೋಳೂರ ಅವರನ್ನು ಅಮಾನತ್ತುಗೊಳಿಸಲಾಗಿದೆ. ಸ್ವಾತಂತ್ರ್ಯೋತ್ಸವ ಕಾರ್ಯಕ್ರಮದ ನಿಮಿತ್ತ ಮಕ್ಕಳಿಗೆ ನಾಟಕ, ನೃತ್ಯ ಕಲಿಸುವ ವಿಷಯಕ್ಕೆ ಸಂಬಂಧಿಸಿ ಶಿಕ್ಷಕಿ ಅಮೀನಾ ಕೋಳೂರ ವಿದ್ಯಾರ್ಥಿಗಳ ಎದುರೇ ಶಿಕ್ಷಕ ಅಂದಾನಯ್ಯ ವಸ್ತ್ರದ ಅವರಿಗೆ ಚಪ್ಪಲಿಯಿಂದ ಹೊಡೆದಿದ್ದರು. ಈ ಘಟನೆ ರಾಜ್ಯಾದ್ಯಂತ ಗಮನ ಸೆಳೆದಿತ್ತು.

ಈ ಘಟನೆ ಖಂಡಿಸಿ ಶಿಕ್ಷಕ ವಸ್ತ್ರದ ಅವರ ಪರವಾಗಿ ಜಂಗಮ ಸಮಾಜ ಹುನಗುಂದ ಪಟ್ಟಣದಲ್ಲಿ


(2ನೇ ಪುಟ ನೋಡಿ)

## ಚಿನ್ನದಂಗಡಿ ದರೋಡೆ : ಮತ್ತಿಬ್ಬರ ಬಂಧನ









ಮಲ್ಲಮ್ಮನುಡಿ ವಾರ್ತೆ ಕಲಬುರಗಿ: ಜು.29: ನಗರದ ಸೂಪರ್ ಮಾರ್ಕೆಟ್‌ನ ಸರಾಫ್ ಬಜಾರ್‌ನಲ್ಲಿ ಚಿನ್ನದಂಗಡಿ ದರೋಡೆ ಪ್ರಕರಣ-ಕ್ಕೆ ಸಂಬಂಧಿಸಿದಂತೆ ಪೋಲಿಸರು ಮತ್ತಿಬ್ಬರು ಆರೋಪಿಗಳನ್ನು ಬಂಧಿಸಿ, ಅವರಿಂದ ಪಿಸ್ತೂಲ್ ಮತ್ತು ಮಚ್ಚು (ಮಾರಕಾಸ್ತ್ರ) ವಶಪಡಿಸಿಕೊಂಡಿದ್ದಾರೆ.

ಪ್ರಕರಣದಲ್ಲಿ ಬಂಧಿತರ ಸಂಖ್ಯೆ ಐದಕ್ಕೆ ಹೆಚ್ಚಳವಾಗಿದೆ.

ಬಂಧಿತರನ್ನು ಮಹಾರಾಷ್ಟ್ರದ ಮುಂಬಯಿ ನಗರದ ಮಾನಪೂರದ ಎಸ್‌ಪಿಟಿಎಲ್ ನ್ಯೂ ಎಕ್ತಾ ಬಿಲ್ಡಿಂಗ್

(2ನೇ ಪುಟ ನೋಡಿ)

# ವಿಶ್ವದ ಯಾವ ನಾಯಕನೂ

## ಆಪರೇಷನ್ ಸಿಂಧೂರ ನಿಲ್ಲಿಸಲು ಹೇಳಿಲ್ಲ: ಮೋದಿ



ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಜು.29:ಭಾರತ-ಪಾಕ್ ನಡುವಿನ ಕದನ ವಿರಾಮ ವಿಚಾರವಾಗಿ ಟ್ರಂಪ್ ಮಾತು ಹಾಗೂ ವಿಪಕ್ಷಗಳ ಆರೋಪಕ್ಕೆ ಪ್ರಧಾನಿ ಮೋದಿ ತಿರುಗೇಟು ಕೊಟ್ಟಿದ್ದಾರೆ. ವಿಶ್ವದ ಯಾವ ನಾಯಕನೂ ಆಪರೇಷನ್ ಸಿಂಧೂರ ನಿಲ್ಲಿಸಲು ಹೇಳಲಿಲ್ಲ ಎಂದು ಸ್ಪಷ್ಟಪಡಿಸಿದರು.

ಆಪರೇಷನ್ ಸಿಂಧೂರ ಚರ್ಚೆಗೆ ಲೋಕಸಭೆಯಲ್ಲಿ ಉತ್ತರಿಸಿದ ಅವರು, ವಿಶ್ವದ ಯಾವ ನಾಯಕನೂ ಆಪರೇಷನ್ ನಿಲ್ಲಿಸಲು ಹೇಳಲಿಲ್ಲ. ಅಮೆರಿಕ ಉಪಾಧ್ಯಕ್ಷ, ಪಾಕ್ ದೊಡ್ಡ ದಾಳಿ ಮಾಡಲಿದೆ ಎಂದಿದ್ದರು.

ಪಾಕ್ ದಾಳಿ ಮಾಡಿದರೆ ನಾವು ತಕ್ಕ ಉತ್ತರ ನೀಡುತ್ತೇವೆ ಎಂದು ಹೇಳಿದ್ದೆ. ಅಮೆರಿಕ ಉಪಾಧ್ಯಕ್ಷ ನನ್ನ ಜೊತೆಗೆ ಮಾತನಾಡಲು ಪ್ರಯತ್ನಿಸಿದರು. ಸೇನೆಯ ಜೊತೆಗೆ ಮಾತನಾಡುತ್ತಿದ್ದೆ, ಸಾಧ್ಯವಾಗಲಿಲ್ಲ. ಆಮೇಲೆ ವಾಪಸ್ ಫೋನ್ ಮಾಡಿ ಅವರ ಜೊತೆಗೆ ಮಾತನಾಡಿದೆ. ಪಾಕಿಸ್ತಾನ ದೊಡ್ಡ ದಾಳಿ ಮಾಡುವುದಿದೆ ಎಂದು ಎಚ್ಚರಿಕೆ ನೀಡಿದರು. ಅವರ ಉದ್ದೇಶ ದಾಳಿಯಾಗಿದ್ದರೆ, ಅದು ಅವರಿಗೆ ದುಬಾರಿಯಾಗಲಿದೆ ಎಂದು ಉತ್ತರಿಸಿದೆ. ನಾವು ಅದಕ್ಕಿಂತ ದೊಡ್ಡ ದಾಳಿ ನಡೆಸಿ ಉತ್ತರ ಕೊಡುತ್ತೇವೆ. ಗುಂಡಿನ ಉತ್ತರ ಗುಂಡಿನಿಂದಲೇ ಕೊಡುತ್ತೇವೆ ಎಂದು ಹೇಳಿದ್ದೆ ಎಂದು ಮೋದಿ ತಿಳಿಸಿದರು.

ಪೆಹಲ್ಗಾಮ್‌ನಲ್ಲಿ ಧರ್ಮ ಕೇಳಿ ಗುಂಡು ಹಾರಿಸಲಾಯಿತು. ಇದು ಕ್ರೂರತೆಯ ಪರಾಕಾಷ್ಠೆಯಾಗಿತ್ತು. ಭಾರತವನ್ನು ಹಿಂಸೆಯ ಬೆಂಕಿಯಲ್ಲಿ ಹಾಕುವುದು, ದಂಗೆ ಎಬ್ಬಿಸುವುದು ಇದರ ಉದ್ದೇಶವಾಗಿತ್ತು. ಈ ಉದ್ದೇಶವನ್ನು ದೇಶದ ಜನರು ಸುಳ್ಳು ಮಾಡಿದರು. ಅದಕ್ಕೆ ನಾನು ದೇಶದ ಜನರಿಗೆ ಧನ್ಯವಾದ ಹೇಳುತ್ತೇನೆ. ನಾವು ಭಯೋತ್ಪಾದಕರನ್ನು ಮಣ್ಣಲ್ಲಿ ಮಣ್ಣಾಗಿಸುತ್ತೇವೆ.

ಕಲ್ಪನೆಗೂ ಮೀರಿದ ಶಿಕ್ಷೆಯಾಗಲಿದೆ. ದಾಳಿ ನಡೆದ ದಿನ ನಾನು ವಿದೇಶದಲ್ಲಿದ್ದೆ, ವಾಪಸ್ ಬಂದೆ. ಬಂದ ತಕ್ಷಣ ಸಭೆ ಕರೆದು, ಭಯೋತ್ಪಾದನೆ ವಿರುದ್ಧ ಕಠಿಣ ಉತ್ತರ ಕೊಡ ಬೇಕು ಎಂದು ಸೂಚನೆ ನೀಡಿದೆ ಎಂದರು. ಇದು ನಮ್ಮ ರಾಷ್ಟ್ರೀಯ ಸಂಕಲ್ಪವಾಗಿತ್ತು. ನಮ್ಮ ಸೇನೆಯ ಮೇಲೆ ವಿಶ್ವಾಸ ಮತ್ತು ಭರವಸೆ ಇದೆ. ಸೇನೆಗೆ ಸಂಪೂರ್ಣ ಸ್ವಾತಂತ್ರ್ಯ ನೀಡಲಾಯಿತು. ಸೇನೆ ಎಲ್ಲಿ ಹೇಗೆ ಬೇಕಾದರೂ ದಾಳಿ ಮಾಡಬಹುದು ಎನ್ನುವ ಸ್ವಾತಂತ್ರ್ಯವೂ ನೀಡಲಾಯಿತು. ನಮ್ಮ ಸೇನೆ ಭಯೋತ್ಪಾದಕರಿಗೆ ಶಿಕ್ಷೆ ನೀಡಿದೆ. ಆ ಶಿಕ್ಷೆ ಭಯೋತ್ಪಾದಕರ ನಿದ್ದೆಯನ್ನು ಇಂದಿಗೂ ಕಸಿದಿದೆ ಎಂದು ಹೇಳಿದ್ದಾರೆ.

ಪೆಹಲ್ಗಾಮ್ ದಾಳಿ ಬಳಿಕ ಪಾಕಿಸ್ತಾನಕ್ಕೆ ಭಾರತದ ಪ್ರತಿದಾಳಿ ಬಗ್ಗೆ ಗೊತ್ತಿತ್ತು. ಹೀಗಾಗಿ ಪರಮಾಣು ದಾಳಿಯ ಬೆದರಿಕೆ ಬರಲು ಆರಂಭಿಸಿದ್ದವು. ನಾವು ಅಂದುಕೊಂಡಂತೆ ದಾಳಿ ನಡೆಸಿದೆವು. ಪಾಕಿಸ್ತಾನ ಏನು ಮಾಡಲು ಸಾಧ್ಯವಾಗಲಿಲ್ಲ. ಪೆಹಲ್ಗಾಮ್ ದಾಳಿಗೆ ಸೇನೆ ಪ್ರತಿಕಾರ ತೀರಿಸಿಕೊಂಡಿತು. ಈ ಮೊದಲು ನಾವು ಎಲ್ಲಿ ಹೋಗಲು ಸಾಧ್ಯವಾಗಿರಲಿಲ್ಲ, ಅಲ್ಲಿಗೆ ನಾವು ಹೋದೆವು. ಭಯೋತ್ಪಾದಕ ನೆಲೆಗಳನ್ನು ಹುಡುಕಿ ಹೊಡೆದು ಬೂದಿ ಮಾಡಿದೆವು. ಪಾಕ್ ಪರಮಾಣು ಬೆದರಿಕೆ ಸುಳ್ಳೆಂದು ಸಾಬೀತು ಮಾಡಿದೆವು. ಪರಮಾಣು ಬೆದರಿಕೆ ನಡೆಯುವುದಿಲ್ಲ, ಇದಕ್ಕೆ ಭಾರತ ಬಗ್ಗಲ್ಲ ಎನ್ನುವ ಸಂದೇಶ ರವಾನಿಸಿದ್ದೇವೆ ಎಂದು ಮೋದಿ ಮಾತನಾಡಿದ್ದಾರೆ. ನಮ್ಮ ದಾಳಿಯಿಂದ ಪಾಕ್ ಏರ್‌ಬೇಸ್ ಐಸಿಯು ನಲ್ಲಿವೆ. ಆಪರೇಷನ್ ಸಿಂಧೂರದಲ್ಲಿ ಸಫಲತೆ ಸಿಕ್ಕಿದೆ. ತಂತ್ರಜ್ಞಾನದ ಯುದ್ಧದಲ್ಲಿ ಎಷ್ಟು ನಷ್ಟವಾಗಬಹುದಿತ್ತು. ನಾವು ಅದನ್ನು ಯಶಸ್ವಿಯಾಗಿ ನಿಭಾಯಿಸಿದ್ದೇವೆ. ಮೊದಲ ಬಾರಿಗೆ ಆತ್ಮನಿರ್ಭರ ಭಾರತ್ ತಾಕತ್ತನ್ನು ವಿಶ್ವ ನೋಡಿದೆ. ಮೇಡ್ ಇನ್ ಇಂಡಿಯಾ ಡ್ರೋನ್, ಮಿಸೈಲ್ ಶಕ್ತಿ ಪ್ರದರ್ಶನವಾಯಿತು. ಈ ಆಪರೇಷನ್‌ನಲ್ಲಿ ಮೂರು ಸೇನೆ ಜಂಟಿಯಾಗಿ ಕೆಲಸ ಮಾಡಿವೆ ಎಂದು ತಿಳಿಸಿದರು. ದಾಳಿ ಬಳಿಕ ಮಾಸ್ಟರ್‌ಮೈಂಡ್‌ಗಳು ಆರಾಮವಾಗಿ ಇರುತ್ತಿದ್ದರು. ಮುಂದಿನ ದಾಳಿಗೆ ಸಂಚು ರೂಪಿಸುತ್ತಿದ್ದರು. ಈಗ ದಾಳಿ ಮಾಡಿದರೆ ಭಾರತ ಬರುತ್ತೆ, ದಾಳಿ ಮಾಡುತ್ತೆ ಎನ್ನುವ ಭಯ ಹುಟ್ಟಿಸಿದೆ. ಭಾರತದಲ್ಲಿ ದಾಳಿ ನಡೆಸಿದರೆ ಭಾರಿ ಬೆಲೆ ತೆರಬೇಕಾಗುತ್ತದೆ ಎಂದು ಸ್ಪಷ್ಟವಾಗಿದೆ. ಭಾರತದ ಮೇಲೆ ಭಯೋತ್ಪಾದಕ ದಾಳಿ ನಡೆದರೆ ನಮ್ಮದೇ ರೀತಿಯಲ್ಲಿ ನಮ್ಮ ಟೈಮ್‌ನಲ್ಲಿ ಉತ್ತರ ಕೊಡುತ್ತೇವೆ. ಪರಮಾಣು ಬೆದರಿಕೆಗೆ ಭಾರತ ಬಗ್ಗುವುದಿಲ್ಲ. ನಾವು ಭಯೋತ್ಪಾದಕ ಪೋಷಿತ ಸರ್ಕಾರ ಮತ್ತು ಸಂಘಟನೆಯನ್ನು ಬೇರೆಯಾಗಿ ನೋಡುವುದಿಲ್ಲ ಎಂದು ಪಾಕ್‌ಗೆ ಖಡಕ್ ಸಂದೇಶ ಕೊಟ್ಟರು.

## ರಸ್ತೆ ಅಭಿವೃದ್ಧಿಪಡಿಸುವ 6.90 ಕೋಟಿ ರೂ. ಕಾಮಗಾರಿಗೆ ಸಚಿವರಿಂದ ಭೂಮಿಪೂಜೆ




ಮಲ್ಲಮ್ಮ ನುಡಿ ವಾರ್ತೆ ಬೀದರ, ಜು.29 : ಭಾಲ್ಕಿ ತಾಲೂಕಿನ ಹರಣಾಳ-ಡಾವರಗಾವ್ ಮಾರ್ಗವಾಗಿ ಕುರುಬ ಖೇಳ್ಗಿ ಗ್ರಾಮದವರೆಗೆ ಸುಮಾರು ?6.90 ಕೋಟಿ ರೂ. ವೆಚ್ಚದಲ್ಲಿ ರಸ್ತೆಯನ್ನು ಅಭಿವೃದ್ಧಿಪಡಿಸುವ ಕಾಮಗಾರಿಗೆ ಇಂದು ಅರಣ್ಯ, ಪರಿಸರ ಹಾಗೂ ಜೀವಿಶಾಸ್ತ್ರ ಸಚಿವರು ಹಾಗೂ ಬಿದರ್ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ. ಖಂಡ್ರೆ ಅವರು ಭೂಮಿಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, "ಗ್ರಾಮೀಣ ಭಾಗದ ಜನಜೀವನ ಸುಲಭವಾಗಬೇಕಾದರೆ ಉತ್ತಮ ರಸ್ತೆಗಳ ಅಗತ್ಯವಿದೆ. ಈ ರಸ್ತೆ ಅಭಿವೃದ್ಧಿಯಿಂದ ಈ ಭಾಗದ ಜನರಿಗೆ ಉತ್ತಮ ಸಂಪರ್ಕ ಸೌಲಭ್ಯ ಒದಗಲಿದ್ದು, ಇದು ಶಿಕ್ಷಣ, ಆರೋಗ್ಯ ಹಾಗೂ ಆರ್ಥಿಕ ಚಟುವಟಿಕೆಗಳ ಪ್ರಗತಿಗೆ ಸಹಕಾರಿಯಾಗಲಿದೆ," ಎಂದು ಹೇಳಿದರು.

"ಭಾಲ್ಕಿ ತಾಲೂಕಿನಲ್ಲಿ ರಸ್ತೆ ಅಭಿವೃದ್ಧಿ ಕಾರ್ಯದಲ್ಲಿ ನಿರಂತರ ಬದಲಾವಣೆ ಆಗುತ್ತಿದ್ದು, ಇದನ್ನು ಮತ್ತಷ್ಟು ವೇಗವಾಗಿ ಮುಂದುವರೆಸಲಾಗುವುದು. ಗ್ರಾಮೀಣ ಪ್ರದೇಶಗಳ ಸಂಪರ್ಕ ಸುಧಾರಣೆ ನಮ್ಮ ಪ್ರಾಥಮಿಕ ಗುರಿಯಾಗಿದ್ದು, ಇದಕ್ಕಾಗಿ ಸರ್ಕಾರ ಬದ್ಧವಾಗಿದೆ," ಎಂದರು.

ಈ ಕಾರ್ಯಕ್ರಮದಲ್ಲಿ ಸ್ಥಳೀಯ ಜನಪ್ರತಿನಿಧಿಗಳು, ಅಧಿಕಾರಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

## ಖರ್ಗೆ ಕ್ಷಮೆಯಾಚಿಸಿದ ನಡ್ಡಾ



ಮಲ್ಲಮ್ಮನುಡಿವಾರ್ತೆನವದೆಹಲಿ:ಜು.29: ರಾಜ್ಯಸಭೆಯಲ್ಲಿ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ವಿರುದ್ಧ ಸದನದ ನಾಯಕ ಜೆ.ಪಿ. ನಡ್ಡಾ ಅವರು ಆಕ್ಷೇಪಾರ್ಹ ಹೇಳಿಕೆ ನೀಡಿದರು. ಇದು ವಿರೋಧ ಪಕ್ಷದ ಸದಸ್ಯರು ಮತ್ತು ಆಡಳಿತ ಪಕ್ಷದ ಸದಸ್ಯರ ನಡುವೆ ತೀವ್ರ ವಾಗ್ವಾದಕ್ಕೆ ಕಾರಣವಾಯಿತು. ತೀವ್ರ ಕೋಲಾಹಲದ ನಂತರ ಕೇಂದ್ರ ಸಚಿವ ಜೆಪಿ ನಡ್ಡಾ ಅವರು ತಮ್ಮ ಹೇಳಿಕೆ ವಾಪಸ್ ಪಡೆದು ಖರ್ಗೆ ಕ್ಷಮೆಯಾಚಿಸಿದರು.

ಆಪರೇಷನ್ ಸಿಂಧೂರ್ ಮತ್ತು ಪಹಲ್ಗಾಮ್ ಭಯೋತ್ಪಾದಕ ದಾಳಿಯ ಕುರಿತ ಚರ್ಚೆಯ ಸಂದರ್ಭದಲ್ಲಿ ಮಲ್ಲಿಕಾರ್ಜುನ ಖರ್ಗೆ ಅವರು ಒಂದು ಗಂಟೆಗೂ ಹೆಚ್ಚು ಕಾಲ ಮಾತನಾಡಿದರು. ಈ ವೇಳೆ ಖರ್ಗೆ ಅವರು ಪ್ರಧಾನಿ ನರೇಂದ್ರ ಮೋದಿ ವಿರುದ್ಧ ತೀವ್ರವಾಗ್ದಾಳಿ ನಡೆಸಿದರು. ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ನಡ್ಡಾ ಅವರು, ಎದ್ದುನಿಂತು, ಖರ್ಗೆ ಅವರು ಮಾನಸಿಕ ಸ್ಥಿಮಿತ ಕಳೆದುಕೊಂಡಿದ್ದಾರೆ ಎಂದು ಹೇಳಿಕೆ ನೀಡಿದರು.

ನಡ್ಡಾ ಹೇಳಿಕೆಯಿಂದ ಆಕ್ರೋಶಗೊಂಡ ಪ್ರತಿಪಕ್ಷಗಳು ಖರ್ಗೆಯವರಂಥ ಹಿರಿಯರಿಗೆ ಅಂಥ ಪದ ಬಳಸಬಾರದು. ಕೂಡಲೇ ಅವರು ತಮ್ಮ ಹೇಳಿಕೆ ಹಿಂಪಡೆಯಬೇಕು ಎಂದು ಆಗ್ರಹಿಸಿದರು. ವಿಪಕ್ಷಗಳೆಲ್ಲವೂ ಪಕ್ಷಭೇದ ಮರೆದು ಖರ್ಗೆಯವರ ಬೆಂಬಲಕ್ಕೆ ನಿಂತವು. ಇದರಿಂದ ಎಚ್ಚೆತ್ತ ನಡ್ಡಾ ಅವರು, ನಾನು ಬಳಸಿದ ಪದಗಳನ್ನು ಹಿಂದಕ್ಕೆ


(2ನೇ ಪುಟ ನೋಡಿ)

## ಕೃಷಿ ಅಧಿಕಾರಿ ಮನೆ ಬೀಗ ಮುರಿದು 26 ಲಕ್ಷ ರೂ.ನಗ ನಾಣ್ಯ ಕಳವು

ಮಲ್ಲಮ್ಮನುಡಿ ವಾರ್ತೆ ಬೀದರ್: ಜು.29:ಮನೆಯಲ್ಲಿ ಯಾರೂ ಇಲ್ಲದ ವೇಳೆ ಬೀಗ ಮುರಿದು 26 ಲಕ್ಷ ರೂ.ಗಳ ಮೌಲ್ಯದ ಚಿನ್ನಾಭರಣ ಕದ್ದು ಪರಾರಿಯಾಗಿರುವ ಘಟನೆ ನಗರದ ಗುರುನಗರ ಕಾಲೋನಿಯಲ್ಲಿ ನಡೆದಿದೆ.

ಔರಾದ್(ಬಿ) ತಾಲ್ಲೂಕಿನ ಕೃಷಿ ಇಲಾಖೆಯ ಅಧಿಕಾರಿಯಾಗಿದ್ದ ದೂಳಪ್ಪ ಹೊಸಳ್ಳಿ ಅವರ ಮನೆಯಲ್ಲಿ ಕಳ್ಳತನ ನಡೆದಿದೆ

ಘಟನೆ ನಡೆದ ದಿನದಂದು ದಂಪತಿ ಶಿರಡಿ ಸಾಯಿಬಾಬಾ ದರ್ಶನಕ್ಕೆ ಹೋಗಿದ್ದರು. ಮನೆಯಲ್ಲಿ ಯಾರು ಇಲ್ಲದೇ ಇರುವುದನ್ನು ಗಮನಿಸಿದ ಖದೀಮರು ಮನೆ ಬೀಗ ಮುರಿದು ಒಳನುಗ್ಗಿದ್ದಾರೆ. ಈ ವೇಳೆ ಮನೆಯಲ್ಲಿದ್ದ 310 ಗ್ರಾಂ ಚಿನ್ನಾಭರಣ, 2 ಲಕ್ಷ ನಗದು ಸೇರಿದಂತೆ ಒಟ್ಟು 26 ಲಕ್ಷ ರೂ.ಗಳಿಗೂ ಅಧಿಕ ಮೌಲ್ಯದ ವಸ್ತುಗಳನ್ನು ಕಳವು ಮಾಡಿದ್ದಾರೆ. ದಂಪತಿ ಮನೆಗೆ ಮರಳಿದಾಗ



ಕಳ್ಳತನವಾಗಿರುವುದು ಬೆಳಕಿಗೆ ಬಂದಿದೆ. ಸದ್ಯ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲನೆ ನಡೆಸಿದ್ದಾರೆ. ಈ ಕುರಿತು ನ್ಯೂಟೌನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಕೈಗೊಂಡಿದ್ದಾರೆ.

## ಪೂಜ್ಯ ಶರಣಬಸವಪ್ಪ ಅಪ್ಪಾಜಿ ಅವರ ಆರೋಗ್ಯ ವಿಚಾರಿಸಿದ ಸಚಿವದ್ವಯರು



ಮಲ್ಲಮ್ಮನುಡಿವಾರ್ತೆಕಲಬುರಗಿ:ಜು.29: ಶರಣಬಸವೇಶ್ವರ ಸಂಸ್ಥಾನದ 8ನೇ ಮಹಾದಾಸೋಹ ಪೀಠಾಧಿಪತಿ ಪೂಜ್ಯ ಡಾ. ಶರಣಬಸವಪ್ಪ ಅಪ್ಪಾಜಿ ಅವರ ಆರೋಗ್ಯಸ್ಥಿತಿ ಸಾಮಾನ್ಯವಾಗಿದ್ದು, ಕೆಲವು ದಿನಗಳ ಹಿಂದೆ ಉಸಿರಾಟದ ಸೋಂಕಿನ ದೂರುಗಳಿಂದಾಗಿ ಅವರು ದಾಖಲಾಗಿದ್ದ ಖಾಸಗಿ ಆಸ್ಪತ್ರೆಯಿಂದ ಅವರನ್ನು ಬಿಡುಗಡೆ ಮಾಡುವ ಸಾಧ್ಯತೆಯಿದೆ ಎಂದು ಅವರನ್ನು ಪರೀಕ್ಷಿಸಿದ ವೈದ್ಯರು ತಿಳಿಸಿದ್ದಾರೆ.

ಮಂಗಳವಾರದಂದು ಗ್ರಾಮೀಣಾಭಿವೃದ್ಧಿ ಸಚಿವ ಶ್ರೀ ಪ್ರಿಯಾಂಕ್ ಖರ್ಗೆ ಮತ್ತು ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ್ ಪಾಟೀಲ್, ಗುಲಬರ್ಗಾ ದಕ್ಷಿಣ ಮತಕ್ಷೇತ್ರದ ಶಾಸಕ ಶ್ರೀ ಅಲ್ಲಮಪ್ರಭು ಪಾಟೀಲ್, ಎಂಎಲ್‌ಸಿ ಶ್ರೀ ತಿಪ್ಪಣ್ಣ ಕಮಕನೂರ್ ಮತ್ತು ಕಾಂಗ್ರೆಸ್ ಪಕ್ಷದ ಇತರ ಹಿರಿಯ ನಾಯಕರು ಖಾಸಗಿ ಆಸ್ಪತ್ರೆಗೆ ಭೇಟಿ ನೀಡಿ ಪೂಜ್ಯ ಡಾ. ಶರಣಬಸವಪ್ಪ ಅಪ್ಪಾಜಿ ಅವರನ್ನು ಭೇಟಿ ಮಾಡಿ ವೈದ್ಯರು ಮತ್ತು ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಚೇರ್‌ಪರ್ಸನ್ ಮಾತೋಶ್ರೀ ಪೂಜ್ಯ ಡಾ. ದಾಕ್ಷಾಯಿಣಿ ಅವ್ವಾಜಿ ಮತ್ತು ಸಂಘದ ಕಾರ್ಯದರ್ಶಿ ಶ್ರೀ ಬಸವರಾಜ ದೇಶಮುಖ ಅವರೊಂದಿಗೆ ಅವರ ಆರೋಗ್ಯ ಸ್ಥಿತಿಯ ಬಗ್ಗೆ ವಿಚಾರಿಸಿದರು. ಇಬ್ಬರೂ ಸಚಿವರು ಡಾ. ಅಪ್ಪಾಜಿ ಮತ್ತು ಮಾತೋಶ್ರೀ ಡಾ. ಅವ್ವಾಜಿ ಅವರೊಂದಿಗೆ 10 ನಿಮಿಷಗಳಿಗೂ

(2ನೇ ಪುಟ ನೋಡಿ)

## ಗ್ಯಾರಂಟಿ ಯೋಜನೆಗಳಿಂದ ರಾಜ್ಯದಲ್ಲಿ ಮಹಿಳಾ ಸಬಲೀಕರಣ: ಸಚಿವ ಪ್ರಿಯಾಂಕ್ ಖರ್ಗೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಜು.29:ಕಾಂಗ್ರೆಸ್ ಪಕ್ಷ ನೀಡಿದ ಭರವಸೆಯಂತೆ ಅಧಿಕಾರಕ್ಕೆ ಬಂದ ನಂತರ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದು ತನ್ನ ಮಾತನ್ನು ಉಳಿಸಿಕೊಂಡಿದೆ. ಗ್ಯಾರಂಟಿ ಯೋಜನೆಗಳಿಂದಾಗಿ ರಾಜ್ಯದಲ್ಲಿ ಮಹಿಳಾ ಸಬಲೀಕರಣವಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ಅಭಿಪ್ರಾಯಪಟ್ಟರು.

ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಏರ್ಪಡಿಸಿದ್ದ ಮಹಿಳಾ ಘಟಕದ ನೂತನ ಜಿಲ್ಲಾಧ್ಯಕ್ಷೆ ರೇಣುಕಾ ಸಿಂಗೆ ಅವರ ಪದಗ್ರಹಣ ಸಮಾರಂಭ ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ಗ್ಯಾರಂಟಿ ಯೋಜನೆಗಳಿಂದಾಗಿ ಬಡ ಹಾಗೂ ಮಧ್ಯಮ ವರ್ಗದ ಜನರ ಆರ್ಥಿಕ ಸ್ಥಿತಿಗತಿ ಸುಧಾರಿಸಿದೆ. ಇದು




ನಮ್ಮ ಸರ್ಕಾರದ ಬದ್ಧತೆಯಾಗಿದೆ ಎಂದ ಪ್ರಿಯಾಂಕ್ ಖರ್ಗೆ, ಸರ್ಕಾರದ ಸಾಧನೆಗಳ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಿ ಎಂದು ಮಹಿಳಾ ಘಟಕದ ಸದಸ್ಯರಿಗೆ ಕರೆ ನೀಡಿದರು.

ಮಹಿಳಾ ಘಟಕದ ರಾಜ್ಯಾಧ್ಯಕ್ಷೆ ಸೌಮ್ಯಾರೆಡ್ಡಿ ಅವರ ತಂದೆ ಸಚಿವ ರಾಮಲಿಂಗಾರೆಡ್ಡಿ ಅವರಂತೆ ಹೋರಾಟ ಸ್ವಭಾವದವರಾಗಿದ್ದು ನಮ್ಮಗೆಲ್ಲ ಸ್ಫೂರ್ತಿದಾಯಕರಾಗಿದ್ದಾರೆ. ನಾವು ವಿಧಾನಸಭೆಯ ಅಧಿವೇಶನದಲ್ಲಿ ಮಾತನಾಡುತ್ತಿರುವುದಕ್ಕೆ ಅವರ ಸ್ಫೂರ್ತಿದಾಯಕ ಮಾತುಗಳು ಕೂಡಾ ಕಾರಣವಾಗಿವೆ. ಅವರ ನೇತೃತ್ವದಲ್ಲಿ ಕಾಂಗ್ರೆಸ್ ಪಕ್ಷ ಮತ್ತಷ್ಟು ಬಲಿಷ್ಠವಾಗಲಿದೆ ಎಂದರು.

ನೂತನವಾಗಿ ಅಧ್ಯಕ್ಷೆ ಯಾಗಿ

(2ನೇ ಪುಟ ನೋಡಿ)

## ಒಂದನೇ ಪುಟದಿಂದ

### ಆರೋಗ್ಯ ವಿಚಾರಿಸಿದ ಸಚಿವದ್ವಯರು

ಹೆಚ್ಚು ಸಮಯ ಕಳೆದರು ಮತ್ತು ಪೂಜ್ಯ ಡಾ. ಅಪ್ಪಾಜಿ ಅವರ ಆರೋಗ್ಯ ಚೇತರಿಕೆಯ ಬಗ್ಗೆ ತಿಳಿದು ತಮ್ಮ ಸಂತೋಷವನ್ನು ವ್ಯಕ್ತಪಡಿಸಿದರು.

ಅದೇ ಸಮಯದಲ್ಲಿ, ಎಐಸಿಸಿ ಅಧ್ಯಕ್ಷರಾದ ಡಾ. ಮಲ್ಲಿಕಾರ್ಜುನ ಖರ್ಗೆ ಅವರು ದೂರವಾಣಿಯ ಮುಖಾಂತರ ಸಚಿವ ಪ್ರಿಯಾಂಕ್ ಖರ್ಗೆ ಅವರೊಂದಿಗೆ ಮಾತನಾಡಿ ಪೂಜ್ಯ ಡಾ. ಅಪ್ಪಾಜಿಯವರ ಆರೋಗ್ಯದ ಬಗ್ಗೆ ವಿಚಾರಿಸಿ, ಅವರ ಚೇತರಿಕೆಯ ಬಗ್ಗೆ ತಿಳಿದು ಹರ್ಷ ವ್ಯಕ್ತಪಡಿಸಿದರು.

ಪೂಜ್ಯ ಡಾ. ಅಪ್ಪಾಜಿ ಅವರನ್ನು ಉಸಿರಾಟದ ಸೋಂಕಿನ ದೂರುಗಳೊಂದಿಗೆ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಈಗ ಚಿಕಿತ್ಸೆಗೆ ಉತ್ತಮವಾಗಿ ಪ್ರತಿಕ್ರಿಯಿಸುತ್ತಿದ್ದಾರೆ. ಅವರ ಆರೋಗ್ಯ ಸ್ಥಿತಿ 24 ಗಂಟೆಗಳ ಒಳಗೆ ಸಾಮಾನ್ಯ ಸ್ಥಿತಿಗೆ ಮರಳಿದೆ. ಆಸ್ಪತ್ರೆಯ ತೀವ್ರ ನಿಗಾ ಘಟಕದಲ್ಲಿ ಇರಿಸಲಾಗಿದ್ದು ಬುಧವಾರ ಆಸ್ಪತ್ರೆಯಿಂದ ಬಿಡುಗಡೆ ಮಾಡುವ ಸಾಧ್ಯತೆಯಿದೆ.

ಕಲಬುರಗಿ ನಗರ ಪೊಲೀಸ್ ಆಯುಕ್ತ ಡಾ. ಶರಣಪ್ಪ ಎಸ್. ಡಿ. ಕೂಡ ಆಸ್ಪತ್ರೆಗೆ ಭೇಟಿ ನೀಡಿ ಪೂಜ್ಯ ಡಾ. ಅಪ್ಪಾಜಿ ಅವರನ್ನು ಭೇಟಿ ಮಾಡಿ ಮಾತೋಶ್ರೀ ಪೂಜ್ಯ ಡಾ. ದಾಕ್ಷಾಯಿಣಿ ಅವ್ವಾಜಿ ಅವರೊಂದಿಗೆ ಅವರ ಆರೋಗ್ಯ ಸ್ಥಿತಿಯ ಬಗ್ಗೆ ವಿಚಾರಿಸಿದರು. ಈ ಸಂದರ್ಭದಲ್ಲಿ ಡಾ. ಉಮಾದೇವಿ ದೇಶಮುಖ, ಶರಣಬಸವ ವಿಶ್ವವಿದ್ಯಾಲಯದ ಉಪಕುಲಪತಿ ಪ್ರೊ. ಅನಿಲಕುಮಾರ ಬಿಡವೆ, ಡೀನ್ ಡಾ. ಲಕ್ಷ್ಮೀ ಪಾಟೀಲ್ ಮಾಕಾ, ಹಣಕಾಸು ಅಧಿಕಾರಿ ಡಾ. ಕಿರಣ್ ಮಾಕಾ, ಶರಣಬಸವೇಶ್ವರ ಕಲಾ ಕಾಲೇಜಿನ ಪ್ರಾಂಶುಪಾಲ ಪ್ರೊ. ಸುರೇಶ್ ನಂದಗಾಂವ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

### ಮಹಿಳಾ ಸಬಲೀಕರಣ: ಸಚಿವ ಪ್ರಿಯಾಂಕ್ ಖರ್ಗೆ

ಪದಗ್ರಹಣ ಮಾಡಿದ ರೇಣುಕಾ ಸಿಂಗೆ ಪಕ್ಷದ ಎಲ್ಲ ಮಹಿಳಾ ಕಾರ್ಯಕರ್ತರೊಂದಿಗೆ ಒಗ್ಗಟ್ಟಿನಿಂದ ಜೊತೆ–ಗೂಡಿ ಪಕ್ಷದ ಹಾಗೂ ಸರ್ಕಾರದ ಪರವಾಗಿ ಕೆಲಸ ಮಾಡಬೇಕು ಎಂದು ಸಚಿವರು ಕಿವಿ ಮಾತು ಹೇಳಿದರು.

ಮಹಿಳಾ ಘಟಕದ ರಾಜ್ಯಾಧ್ಯಕ್ಷೆ ಸೌಮ್ಯಾರೆಡ್ಡಿ ಮಾತನಾಡಿ ಈ ಭಾಗದ ಧೀಮಂತ ನಾಯಕ ರಾಜ್ಯಸಭೆ ವಿರೋಧ ಪಕ್ಷದ ನಾಯಕರಾದ ಮಲ್ಲಿಕಾರ್ಜುನ ಖರ್ಗೆ ಅವರ ಮಾರ್ಗದರ್ಶನದಲ್ಲಿ ಹಾಗೂ ಸಿಎಂ ಸಿದ್ಧರಾಮಯ್ಯ ಅವರ ನೇತೃತ್ವದಲ್ಲಿ ರಾಜ್ಯ ಸರ್ಕಾರ ತನ್ನ ಜನಪರ ಯೋಜನೆಗಳೊಂದಿಗೆ ಯಶಸ್ವಿ ಆಡಳಿತ ನಡೆಸುತ್ತಿದೆ ಎಂದರು.

ಗ್ಯಾರಂಟಿ ಯೋಜನೆಗಳ ಮೂಲಕ ಸರ್ಕಾರ ಮಹಿಳಾ ಸಬಲೀಕರಣ ಜೊತೆಗೆ ಲಕ್ಷಾಂತರ ಕುಟುಂಬಗಳ ಆರ್ಥಿಕ ಸ್ಥಿತಿ ಗಣನೀಯವಾಗಿ ಸುಧಾರಣೆ ಮಾಡಿದೆ.

ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ಖರ್ಗೆ ಸಾಹೇಬರ ಒತ್ತಾಸೆ ಹಾಗೂ ದೂರದೃಷ್ಟಿಯಿಂದಾಗಿ ಸಂವಿಧಾನದ ಕಲಂ 371 ಕ್ಕೆ ತಿದ್ದುಪಡಿ ತರಲಾಗಿದೆ. ಇದರಿಂದಾಗಿ ಈ ಭಾಗದ ಸಮಗ್ರ ಅಭಿವೃದ್ಧಿಗೆ ಅನುಕೂಲವಾಗಿದೆ ಎಂದರು.

ಪದಗ್ರಹಣ ಮಾಡಿದ ರೇಣುಕಾ ಸಿಂಗೆ ಮಾತನಾಡಿ, ನಮ್ಮ ನಾಯಕರಾದ ಮಲ್ಲಿಕಾರ್ಜುನ ಖರ್ಗೆ, ರಾಧಾಕೃಷ್ಣ ದೊಡ್ಡಮನಿ, ಡಾ ಶರಣಪ್ರಕಾಶ ಪಾಟೀಲ್, ಪ್ರಿಯಾಂಕ್ ಖರ್ಗೆ, ಹಾಗೂ ಸೌಮ್ಯಾರೆಡ್ಡಿ ಅವರ ಮಾರ್ಗದರ್ಶನದಲ್ಲಿ ಪಕ್ಷವನ್ನು ಬಲಪಡಿಸುವ ಕೆಲಸ ಮಾಡುವುದರ ಜೊತೆಗೆ ಪಕ್ಷದ ಎಲ್ಲ ಮಹಿಳಾ ಕಾರ್ಯಕರ್ತರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಮುಂದುವರೆಯುವುದಾಗಿ ಹೇಳಿದರು.

ಈ ಸಂದರ್ಭದಲ್ಲಿ ಸೌಮ್ಯಾರೆಡ್ಡಿ ಪಕ್ಷದ ಧ್ವಜವನ್ನು ರೇಣುಕಾಸಿಂಗೆ ಅವರಿಗೆ ಹಸ್ತಾಂತರಿಸಿದರು.

ವೇದಿಕೆಯ ಮೇಲೆ ಸಚಿವರಾದ ಡಾ ಶರಣಪ್ರಕಾಶ್ ಪಾಟೀಲ್, ಶಾಸಕರಾದ ಅಲ್ಲಮಪ್ರಭು ಪಾಟೀಲ್, ಎಂಎಲ್ ಸಿ ತಿಪ್ಪಣ್ಣಪ್ಪ ಕಮಕನೂರು, ಕುಡಾ ಅಧ್ಯಕ್ಷ ಮಜರ್ ಆಲಂ ಖಾನ್ ಸೇರಿದಂತೆ ಇತರರಿದ್ದರು.

## ಕೊಟ್ಟ ಶಿಕ್ಷಕಿ ಅಮಾನತ್ತು!

ಪ್ರತಿಭಟನೆ ನಡೆಸಿ, ಶಿಕ್ಷಕಿಯ ಅಮಾನತ್ತಿಗೆ ಒತ್ತಾಯಿಸಿತ್ತು. ಈ ಹಿನ್ನೆಲೆಯಲ್ಲಿ ಈಗ ಶಿಕ್ಷಕಿ ಅಮೀನಾ ಕೋಳೂರ ಅವರನ್ನು ಜಿಲ್ಲೆಯ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಚ್.ಜಿ.ಮಿರ್ಜಿ ಅಮಾನತ್ತುಗೊಳಿಸಿದ್ದಾರೆ.

ಶಿಕ್ಷಕನಿಗೆ ಚಪ್ಪಲಿಯಿಂದ ಹೊಡೆದ ಆರೋಪವಲ್ಲದೇ ಶಿಕ್ಷಕಿ ಅಮೀನಾ ವಿರುದ್ಧ ಇನ್ನೂ ಅನೇಕ ಆಪಾದನೆಗಳು ಇರುವುದರಿಂದ ಅವರನ್ನು ಅಮಾನತ್ತುಗೊಳಿಸಲಾಗಿದೆ ಎಂದು ಇಲಾಖೆ ತಿಳಿಸಿದೆ.

## ದರೋಡೆ : ಮತ್ತಿಬ್ಬರ ಬಂಧನ

ನಂಬರ್ 11ರ ನಿವಾಸಿ ಅರ್ಬಾಜ್ ತಂದೆ ಬಶೀರ್ ಶೇಖ್ (22) ಹಾಗೂ ಮೊಹ್ಮದ್ ಸಾಜಿದ್ ತಂದೆ ನಜರೂಲ್ ಮಂಡಲ್ (25) ಎಂದು ಗುರುತಿಸಲಾಗಿದೆ. ಬಂಧಿತರನ್ನು ನ್ಯಾಯಾಂಗ ವಶಕ್ಕೆ ಒಪ್ಪಿಸಲಾಗಿದೆ. ದರೋಡೆ ಪ್ರಕರಣಕ್ಕೆ ಸಂಬಂಧಿಸಿದಂತೆ ಬಂಧಿತರ ಸಂಖ್ಯೆ ಈಗ ಐದಕ್ಕೆ ಹೆಚ್ಚಳವಾಗಿದೆ.

ನಗರದ ಸೂಪರ್ ಮಾರ್ಕೆಟ್‌ನ ಸರಾಫ್ ಬಜಾರ್‌ನಲ್ಲಿ ಕಳೆದ 11ರಂದು

ಹಾಡಹಗಲೇ ಮಹ್ಮದ್ ಸಬ್ಬಾತುಲ್ಲಾ ಮಲ್ಲಿಕ್ ತಂದೆ ಮಹ್ಮ ಕಿಬಾರಿಯಾ ಮುಲ್ಲಿಕ್ ಅವರ ಒಡೆತನಕ್ಕೆ ಸೇರಿದ ಚಿನ್ನದ ಅಂಗಡಿಯಲ್ಲಿ ಮೂರು ಕೋಟಿ ರೂ.ಗಳಿಗಿಂತಲೂ ಹೆಚ್ಚು ಮೌಲ್ಯದ ಚಿನ್ನಾಭರಣಗಳನ್ನು ದೋಚಿ ಪರಾರಿಯಾದ ಪ್ರಕರಣಕ್ಕೆ ಸಂಬಂಧಿಸಿದಂತೆ ಮೂವರು ಕುಖ್ಯಾತ ಅಂತರರಾಜ್ಯ ಆರೋಪಿಗಳನ್ನು ಬಂಧಿಸಿ, ಸುಮಾರು 2.10 ಕೋಟಿ ರೂ.ಗಳ ಮೌಲ್ಯದ ಚಿನ್ನಾಭರಣಗಳು ಹಾಗೂ ಅವರಿಂದ ಸುಮಾರು 4.80 ಲಕ್ಷ ರೂ.ಗಳ ನಗದು ಸೇರಿ ಒಟ್ಟು 2,14,80,000ರೂ.ಗಳ ಮೌಲ್ಯದ ಸ್ವತು ವಶಪಡಿಸಿಕೊಳ್ಳಲಾಗಿತ್ತು.

ಮೂಲತ: ಪಶ್ಚಿಮಬಂಗಾಳದ ಪರಗಣ ಜಿಲ್ಲೆಯ ಕನಸೋನಾ

ಗ್ರಾಮದ, ಹಾಲಿ ವಸ್ತಿ ಮುಂಬಯಿಯ ಮನಕುರ್ದ ವೆಸ್ಟ್‌ನ ಪಿಎಂಜಿ ಕಾಲೋನಿ ನಿವಾಸಿ ಹಾಗೂ ಬಟ್ಟೆ ವ್ಯಾಪಾರಿ ಅಯೋದ್ಯಾ ಪ್ರಸಾದ್ ಚವ್ಹಾಣ್ ತಂದೆ ಸೀತಾರಾಮ್ ಚವ್ಹಾಣ್ (48), ಪಶ್ಚಿಮಬಂಗಾಳ್ ಜಿಲ್ಲೆಯ ಹೂಗ್ಲಿ ಜಿಲ್ಲೆಯ ಶಥಿತನ ಗ್ರಾಮದ ಚಿನ್ನದ ವ್ಯಾಪಾರಿ ಫಾರೂಕ್ ಅಹೆಮದ್ ಮುಲ್ಲಿಕ್ ತಂದೆ ಅಬ್ದುಲ್ ವಾಹಬ್ ಮುಲ್ಲಿಕ್ (40) ಮತ್ತು ಮಹಾರಾಷ್ಟ್ರದ ಮುಂಬಯಿ ನಗರದ ಪತ್ರಾಚಾಳ ಮಾನ್ ಕೂರ್ದನ ಟೇಲರ್ ಸೋಹೆಲ್ ಶೇಕ್ ಅಲಿಯಾಸ್ ಬಾದಶಾ ತಂದೆ ಮೊಹ್ಮದ್ ಇಸ್ಮಾಯಿಲ್ ಶೇಕ್ (30) ಅವರನ್ನು ಬಂಧಿಸಲಾಗಿತ್ತು.

ಬಂಧಿತರಿಂದ ಸುಮಾರು 2.10 ಕೋಟಿ ರೂ.ಗಳ ಮೌಲ್ಯದ ಚಿನ್ನಾಭರಣಗಳು ಜಾಗೂ ನಗದು 4.80 ಲಕ್ಷ ರೂ.ಗಳನ್ನು ವಶಪಡಿಸಿಕೊಳ್ಳಲಾಗಿದೆ. ದರೋಡೆಕೋರರ ಪತ್ತೆಗಾಗಿ

ಐದು ವಿಶೇಷ ತಂಡಗಳನ್ನು ರಚಿಸಲಾಗಿತ್ತು. ಹೀಗಾಗಿ ಆ ತಂಡಗಳು ಕರ್ನಾಟಕ, ಮಹಾರಾಷ್ಟ್ರ, ಉತ್ತರ ಪ್ರದೇಶ, ಪಶ್ಚಿಮಬಂಗಾಳ್, ತೆಲಂಗಾಣ್ ರಾಜ್ಯಗಳಲ್ಲಿ ಕಾರ್ಯಾಚರಣೆ ಕೈಗೊಂಡಿತ್ತು. ಈಗ ಮತ್ತಿಬ್ಬರನ್ನು ಬಂಧಿಸಿ, ಅವರಿಂದ ಪಿಸ್ತೂಲ್ ಮತ್ತು ಮಚ್ಚು ವಶಪಡಿಸಿಕೊಂಡಿದ್ದು, ಕಾರ್ಯಾಚರಣೆಯನ್ನು ನಗರ ಪೋಲಿಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ., ಅವರು ಶ್ಲಾಘಿಸಿದ್ದಾರೆ.

## ಕ್ಷಮೆಯಾಚಿಸಿದ ನಡ್ಡಾ

ಪಡೆಯುತ್ತೇನೆ. ಮಾತಿನ ಭರದಲ್ಲಿ ಹಾಗೆ ಹೇಳಿದ್ದಷ್ಟೇ. ವೈಯಕ್ತಿಕವಾಗಿ ನಾನು ಖರ್ಗೆಯವರನ್ನು ಗೌರವಿಸುತ್ತೇನೆ. ನನ್ನ ದುಡುಕಿಗಾಗಿ ಖರ್ಗೆಯವರಲ್ಲಿ ನಾನು ಕ್ಷಮೆ ಕೋರುತ್ತೇನೆ ಎಂದು ನಡ್ಡಾ ಹೇಳಿದರು. ಆಗ ವಿವಾದ ತಣ್ಣಗಾಯಿತು.

2015 ರಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಅನಿರೀಕ್ಷಿತ ಪಾಕಿಸ್ತಾನ ಭೇಟಿಯನ್ನು ಕಾಂಗ್ರೆಸ್ ಅಧ್ಯಕ್ಷರು ಟೀಕಿಸಿದರು ಮತ್ತು ವಿದೇಶಾಂಗ ನೀತಿಯು 'ಈವೆಂಟ್–ಬಾಜಿ' ಅಲ್ಲ ಎಂದು ಹೇಳಿದರು. ಅಲ್ಲದೆ ಪಾಕಿಸ್ತಾನ ವಿಚಾರದಲ್ಲಿ ಸರ್ಕಾರ ಸರಿಯಾದ ನೀತಿಯನ್ನು ರೂಪಿಸಬೇಕು ಎಂದು ಒತ್ತಾಯಿಸಿದರು.

"ಇಲ್ಲಿ ನಾವು(ಕಾಂಗ್ರೆಸ್) ಪಾಕಿಸ್ತಾನವನ್ನು ಟೀಕಿಸುತ್ತೇವೆ ಮತ್ತು ಅಲ್ಲಿ ನೀವು ಅವರ ದಾವತ್‌ಗೆ ಹೋಗಿ ಅವರನ್ನು ಅಪ್ಪಿಕೊಳ್ಳುತ್ತೀರಿ" ಎಂದು ಖರ್ಗೆ ಅವರು, ಪ್ರಧಾನಿ ಮೋದಿ ಹೆಸರು ಪ್ರಸ್ತಾಪದೆ "ವಿಶ್ವ ಗುರು" ಎಂಬ ಪದ ಬಳಸಿ ಟೀಕಿಸಿದರು.

## ಇಂದು ಪತ್ರಿಕಾ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಔರಾದ್: ಜು.29: ಪಟ್ಟಣದ ತಾಲೂಕು ಪಂಚಾಯತ ಸಭಾಂಗಣದಲ್ಲಿ ಜುಲೈ 30 ಬುಧುವಾರ ಬೆಳೆಗ್ಗೆ 11 ಗಂಟೆಗೆ ಕರ್ನಾಟಕ ಮೀಡಿಯಾ ಜರ್ನಲಿಸ್ಟ ಯುನಿಯನ್ ತಾಲೂಕು ಘಟಕದಿಂದಪತ್ರಿಕಾ ದಿನಾಚರಣೆ ಹಮ್ಮಿಕೊಳ್ಳಲಾಗಿದೆ ಎಂದು ಸಂಘದ ತಾಲೂಕು ಅಧ್ಯಕ್ಷ ಸಂತೋಷ ಚಾಂಡೇಶ್ವರೆ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ಹೊರಡಿಸಿದ ಅವರು, ಪ್ರತಿ ವರ್ಷದಂತೆ ಈ ಬಾರಿಯು ಪತ್ರಿಕಾ ದಿನಾಚರಣೆ ಆಚರಣೆ ಮಾಡಲಾಗುತ್ತಿದ್ದು ಭಾಲ್ಕಿ



ಹಿರೇಮಠಸಂಸ್ಥಾನದಪಿಠಾಧಿಪತಿ ಗುರುಬಸವ ಪಟ್ಟದ್ದೇವರು ಕಾರ್ಯಕ್ರಮದ ದಿವ್ಯಸಾನಿಧ್ಯ ವಹಿಸಲಿದ್ದಾರೆ. ಶಾಸಕ ಪ್ರಭು ಚವ್ಹಾಣ ಕಾರ್ಯಕ್ರಮ ಉದ್ಘಾಟಿಸುವರು. ಸಾಹಿತಿ ಡಾ. ಶಿವಲಿಂಗ ಹೆಡೆ ಉಪನ್ಯಾಸ ನೀಡುವರು. ಪಪಂ ಅದ್ಯಕ್ಷೆ ಸರೂಬಾಯಿ ಘೂಳೆ,

ತಹಸೀಲ್ದಾರಮಹೇಶಪಾಟೀಲ್, ತಾಪಂ ಇಒ ಶಿವಕುಮಾರ ಘಾಟೆ, ಸಿಪಿಐರಘುವೀರಸಿಂಗ್ ಠಾಕೂರ್, ಅನೀಲಕುಮಾರ ದೇಶಮುಖ, ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರು ಬಾಲಾಜಿ ಅಮರವಾಡಿ, ಮುಖ್ಯಅತಿಥಿ–ಯಾಗಿ ಭಾಗವಹಿಸಲಿದ್ದಾರೆ. ಪತ್ರಕರ್ತ ಅಮರ ಮೋಕ್ತೆದಾರ ಪ್ರಾಸ್ತಾವಿಕನುಡಿ ಹಾಗೂ ನಿರುಪಣೆ ಮಾಡಲಿದ್ದಾರೆ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯ ಸಂಘ–ಸಂಸ್ಥೆಗಳ ಪದಾಧಿಕಾರಿಗಳು, ಮುಖಂಡರು ಹಾಗೂ ಜಬರು ಭಾಗವಹಿಸುವಂತೆ ಸಂಘದ ತಾಲೂಧ್ಯಕ್ಷಸಂತೋಷಚಾಂಡೇಶ್ವರೆ ಮನವಿ ಮಾಡಿದ್ದಾರೆ.

## ಮೌಢ್ಯತೆ ಅಳಿದು ನವ ಸಮಾಜ ನಿರ್ಮಾಣವಾಗಲಿ: ಗುರುಬಸವ ಪಟ್ಟದ್ದೇವರು



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜು.29:ಸಮಾಜದಲ್ಲಿಯ ಮೌಢ್ಯತೆ ಅಳಿದು, ಸತ್ಚಾ ರಿತ್ರ ದ ಸಮಾಜ ನಿರ್ಮಾಣವಾಗಬೇಕು ಎಂದು ಹಿರೇಮಠ ಸಂಸ್ಥಾನದ ಪೀಠಾಧಿಪತಿ ಶ್ರೀ ಗುರುಬಸವ ಪಟ್ಟದ್ದೇವರು ಹೇಳಿದರು.

ಪಟ್ಟಣದ ದೊಂಬರಾಟದ ಬುರುಬುರು ಪೋಚಮ್ಮಾ ಓಣಿಯಲ್ಲಿ ಮಂಗಳವಾರ ಬಸವ ಪಂಚಮಿ ನಿಮಿತ್ಯ ಆಯೋಜಿಸಿದ್ದ ಹಾಲು ಉಣಿಸುವ ಹಬ್ಬದ ಸಾನಿಧ್ಯ ವಹಿಸಿ ಅವರು ಮಾತನಾಡಿದರು. ಆಧುನಿಕ ಜಗತ್ತಿನಲ್ಲಿ ಆದಿಮಾನವರ ತರಹ ಬದುಕುವ ಜನರಿದ್ದಾರೆ ಎನ್ನುವುದು ಈ ಮಕ್ಕಳನ್ನು ನೋಡಿದರೆ ತಿಳಿತಾ ಇದೆ.

ಇಂತಹ ದೊಂಬರಾಟದ ಬುರಬುರ ಪೋಚಮ್ಮಾ ಓಣಿಯಲ್ಲಿಯ ಜನರ ಮಕ್ಕಳು ಬಿಕ್ಷೆ ಬೇಡಿ ತಿನ್ನುವುದನ್ನು ಅರಿತ ಹಿರೇಮಠದ ಹಿರಿಯ ಸ್ವಾಮೀಜಿ ನಾಡೋಜ ಡಾ। ಬಸವಲಿಂಗ ಪಟ್ಟದ್ದೇವರು, ಅವರಿಗೆ ಹಿರೇಮಠ ಸಂಸ್ಥಾನದ ಅಡಿಯಲ್ಲಿ ನಡೆಯುತ್ತಿರುವ ಸಂಗಮೇಶ್ವರ ಶಾಲೆಗೆ ಸೇರಿಸಿ, ಅವರನ್ನು ಸ್ವಚ್ಛಗೊಳಿಸಿ, ಸಮಾಜದ ಮುಖ್ಯವಾಹಿನಿಗೆ ತರುವ ಕಾರ್ಯ ಮಾಡಿದ್ದಾರೆ. ಪ್ರತಿವರ್ಷ ನಾಗಪಂಚಮಿ ಹಬ್ಬವನ್ನು ಬಸವ ಪಂಚಮಿ ಹಬ್ಬವಾಗಿ ಆಚರಿಸಿ, ಬಡ, ನಿರ್ಗತಿಕ ಮಕ್ಕಳಿಗೆ ಹಾಲು ಕುಡಿಸಿ, ಊಟ ಬಡಿಸಿ ಸಮಾಜದಲ್ಲಿಯ ಮೌಢ್ಯತೆ ಅಳಿಸುವ ಕಾರ್ಯ ಮಾಡಲಾಗುತ್ತಿದೆ. ಇಂತಹ ಬಡ ಮಕ್ಕಳು ಹೊಟ್ಟೆ ತುಂಬಾ ಊಟ ಮಾಡಿದರೆ ನಾವು ನಾಗಪಂಚಮಿ ಹಬ್ಬ ಆಚರಿಸಿದ್ದಕ್ಕೂ ಸಾರ್ಥಕವಾಗುವುದು ಎಂದು ಹೇಳಿದರು. ನಂತರ ದೊಂಬರಾಟದ ಬುರುಬುರು ಪೋಚಮ್ಮಾ ಓಣಿಯ ಮಕ್ಕಳಿಗೆ ಹಿರೇಮಠದ ಪೀಠಾಧಿಪತಿ ಶ್ರೀ ಗುರುಬಸವ ಪಟ್ಟದ್ದೇವರು ಊಟ ಬಡಿಸಿ ಸಂತಸ ಪಟ್ಟರು.

ಖಡಕೇಶ್ವರ ಪ್ರೌಢಶಾಲೆಯ ಮುಖ್ಯ ಶಿಕ್ಷಕ ಆನಂದ ಕಲ್ಯಾಣೆ ವಿಶೇಷ ಉಪನ್ಯಾಸ ಮಂಡಿಸಿದರು. ಪುರಸಭೆ ಸದಸ್ಯ ಅಶೋಕ ಗಾಯಕವಾಡ ಹಿರೇಮಠ ಸಂಸ್ಥಾನದ ಕಾರ್ಯಗಳ ಬಗ್ಗೆ ಮೆಲುಕು ಹಾಕಿದರು. ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಜಯರಾಜ ದಾಬಶೆಟ್ಟಿ ಅಧ್ಯಕ್ಷತೆ ವಹಿಸಿದ್ದರು. ಪ್ರವಚನ ಸೇವಾ ಸಮಿತಿಯ ಅಧ್ಯಕ್ಷ ಗುಂಡಪ್ಪ ಸಂಗಮಕರ ಬಸವಗುರುಪೂಜೆ ನೆರವೇರಿಸಿದರು. ಇದೇವೇಳೆ ಓಣಿಯ ಮಕ್ಕಳು ಊಟದ ಆಸೆಗಾಗಿ ತಟ್ಟೆಯೊಂದಿಗೆ ಹಾಜರಾಗಿ ಪೂಜ್ಯರ ಪ್ರವಚನ ಕೇಳಿದರು.

ಕಾರ್ಯಕ್ರಮದಲ್ಲಿ ಮಹಾರಾಷ್ಟ್ರ ಬಸವ ಪರಿಷತ್‌ನ ಶಿವಾನಂದ ಹೈಬತಪೂರೆ, ಹಿರೇಮಠದ ಸಾಹಿತಿ ರಾಜು ಜುಬರೆ, ಪುರಸಭೆ ಉಪಾಧ್ಯಕ್ಷ ವಿಜಯಕುಮಾರ ರಾಜಭವನ, ಬಾಬುರಾವ ಹುಣಜೆ, ಗಣಪತಿ ಬಾವುಗೆ, ಶಾಂತಯ್ಯಾಸ್ವಾಮಿ, ಶಿವಪುತ್ರ ದಾಬಶೆಟ್ಟಿ, ಸಾಹಿತಿ ಮಲ್ಲಮ್ಮಾ ಆರ್ ಪಾಟೀಲ, ಮಲ್ಲಮ್ಮ ನಾಗನಕೇರೆ, ಮಹಾನಂದಾ ಮಾಶೆಟ್ಟೆ ಉಪಸ್ಥಿತರಿದ್ದರು.

ಮಲ್ಲಮ್ಮಾ ನಾಗನಕೆರೆ ಸ್ವಾಗತಿಸಿದರು. ಹಾಸ್ಯ ಕಲಾವಿದ ನವಲಿಂಗ ಪಾಟೀಲ ನಿರೂಪಿಸಿದರು. ಪ್ರಶಾಂತ ರೆಡ್ಡಿ ವಂದಿಸಿದರು.

> ನಾಗಪಂಚಮಿಯಂದು ನಾಗರಿಕರು ಕಲ್ಲು ನಾಗರಕ್ಕೆ ಹಾಲೆರೆಯುವ ಬದಲು, ಜೀವಂತ ಮಕ್ಕಳಿಗೆ ಹಾಲುಣಿಸಬೇಕು. ಮಕ್ಕಳ ಆಶೀರ್ವಾದ ಭವಿಷದ ಭದ್ರ ಬುನಾದಿಗೆ ನಾಂದಿಯಾಗುತ್ತದೆ. ಇದು ಹನ್ನೆರಡನೇ ಶತಮಾನದ ಬಸವಣ್ಣನವರ ಆಶಯವಾಗಿತ್ತು.
>
> –ಗುರುಬಸವ ಪಟ್ಟದ್ದೇವರು, ಹಿರೇಮಠ ಸಂಸ್ಥಾನ ಭಾಲ್ಕಿ.

## ಮಡಿವಾಳ ಸಮಾಜ ಶಿಕ್ಷಣಕ್ಕೆ ಆದ್ಯತೆ ನೀಡಲಿ

ಮಲ್ಲಮ್ಮ ನುಡಿ ವಾರ್ತೆ

ಬೀದರ.ಜು.29:ಮಡಿವಾಳ ಸಮಾಜದವರು ತಮ್ಮ ಮಕ್ಕಳ ಶಿಕ್ಷಣಕ್ಕೆ ಆದ್ಯತೆ ನೀಡಬೇಕು ಎಂದು ಚಿತ್ರದುರ್ಗದ ಮಾಚಿದೇವ ಮಹಾ ಸಂಸ್ಥಾನ ಮಠದ ಡಾ. ಬಸವ ಮಾಚಿದೇವ ಸ್ವಾಮೀಜಿ ಹೇಳಿದರು.

ಜಿಲ್ಲಾ ಮಡಿವಾಳ ಸಮಾಜದ ವತಿಯಿಂದ ಶ್ರಾವಣ ಮಾಸದ ನಿಮಿತ್ತ ನಗರದ ಕಾಜಿ ಫಂಕ್ಷನ್ ಹಾಲ್‌ನಲ್ಲಿ ಸೋಮವಾರ ಆಯೋಜಿಸಿದ್ದ ಮನೆ ಮನೆಗೆ ಮಾಚಿದೇವ ಕಾರ್ಯಕ್ರಮದ ಸಾನಿಧ್ಯ ವಹಿಸಿ ಅವರು ಮಾತನಾಡಿದರು.



ಶಿಕ್ಷಣದಿಂದಲೇ ಸಮಾಜದ ಉನ್ನತಿ ಸಾಧ್ಯವಿದೆ ಎಂದು ತಿಳಿಸಿದರು.

ಶಿಕ್ಷಣದ ಜತೆಗೆ ಮಕ್ಕಳಿಗೆ ಉತ್ತಮ ಸಂಸ್ಕಾರ ಕಲಿಸಬೇಕು. ತಂದೆ–ತಾಯಿ, ಗುರು– ಹಿರಿಯರಿಗೆ ಗೌರವ ಕೊಡುವುದನ್ನು ಹೇಳಿಕೊಡಬೇಕು ಎಂದು ಹೇಳಿದರು. ಸಮಾಜದವರು ಮಾಚಿದೇವರ ಆದರ್ಶಗಳನ್ನು ಪಾಲಿಸಬೇಕು. ಸತ್ಯಶುದ್ಧ ಕಾಯಕದ ಮೂಲಕ ಉತ್ತಮ ಬದುಕು ಕಟ್ಟಿಕೊಳ್ಳಲು ಪ್ರಯತ್ನಿಸಬೇಕು. ದುಶ್ಚಟಗಳಿಂದ ದೂರ ಇರಬೇಕು ಎಂದು ತಿಳಿಸಿದರು.

ಚಿಂತಕ ಶಿವಶರಣಪ್ಪ ಹುಗ್ಗಿ ಪಾಟೀಲ ವಿಶೇಷ ಉಪನ್ಯಾಸ ನೀಡಿದರು. ಜಿಲ್ಲಾ ಮಡಿವಾಳ ಸಮಾಜದ ಅಧ್ಯಕ್ಷ ಸುಭಾಷ್ ಮಡಿವಾಳ ಅಧ್ಯಕ್ಷತೆ, ಗೌರವಾಧ್ಯಕ್ಷ ದಿಗಂಬರ ಮಡಿವಾಳ ನೇತೃತ್ವ ವಹಿಸಿದ್ದರು. ಪಿಎ???ಐಗಂಗಮ್ಮ ಮಡಿವಾಳ ಉಪಸ್ಥಿತರಿದ್ದರು.

ಸಮಾಜದ ಪ್ರಮುಖರಾದ ಧನರಾಜ ಮಡಿವಾಳ, ನಾಗರಾಜ ಮಡಿವಾಳ, ಶಿವಕುಮಾರ ಚೌದ್ರಿ, ಶಿವಕುಮಾರ ಪರಿಟ್, ಶಿವಕುಮಾರ ಮಡಿವಾಳ, ಬಸವರಾಜ ಟಿಪ್ ಟಾಪ್, ಭೀಮಣ್ಣ ಮಡಿವಾಳ, ಮನೋಹರ ಮಡಿವಾಳ, ರಾಮಣ್ಣ ಮಡಿವಾಳ, ಗೋವಿಂದ ಮಡಿವಾಳ, ಸಂಗಮೇಶ ಮಡಿವಾಳ ಮೈಲೂರ, ತಿಪ್ಪಣ್ಣ ಮಡಿವಾಳ, ಲಲಿತಮ್ಮ ಚಟ್ನಳ್ಳಿ ಮತ್ತಿತರರು ಉಪಸ್ಥಿತರಿದ್ದರು.

ಮಲ್ಲಿಕಾರ್ಜುನ ಮಡಿವಾಳ ಕಪಲಾಪುರ ಸ್ವಾಗತಿಸಿದರು. ಮಹೇಶ ಮಡಿವಾಳ ನಿರೂಪಿಸಿದರು.

ಮಡಿವಾಳ ಸಮಾಜ ತಾಲ್ಲೂಕು ಘಟಕಕ್ಕೆ ಆಯ್ಕೆ ಕಾರ್ಯಕ್ರಮದಲ್ಲಿ ಮಡಿವಾಳ ಸಮಾಜದ ಬೀದರ್ ತಾಲ್ಲೂಕು ಘಟಕದ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು.

ಪದಾಧಿಕಾರಿಗಳ ಹೆಸರು ಹೀಗಿವೆ. ಮಲ್ಲಿಕಾರ್ಜುನ ಮಡಿವಾಳ ಕಪಲಾಪುರ (ಅಧ್ಯಕ್ಷ), ನಿಲೇಶ್ ಮಡಿವಾಳ, ಸಂಜು ಕೋಟೆ (ಉಪಾಧ್ಯಕ್ಷ), ಗೋಪಾಲ್ ಮಡಿವಾಳ (ಪ್ರಧಾನ ಕಾರ್ಯದರ್ಶಿ), ಸಂದೀಪ್ ಮಡಿವಾಳ (ಸಂಘಟನಾ ಕಾರ್ಯದರ್ಶಿ), ಸಿದ್ದು ಮಡಿವಾಳ (ಸಹ ಕಾರ್ಯದರ್ಶಿ), ಪ್ರವೀಣ್ ಮಡಿವಾಳ (ಖಜಾಂಚಿ), ಶಿವ ಮಡಿವಾಳ, ಗುರುನಾಥ ಮಡಿವಾಳ, ಮಹೇಶ ಮಡಿವಾಳ ಆಣದೂರ ಹಾಗೂ ಷಣ್ಮುಖ ಮಡಿವಾಳ (ಸದಸ್ಯರು).

## ವಿಜೃಂಭಣೆಯ ಗಣೇಶ ಉತ್ಸವಕ್ಕೆ ನಿರ್ಧಾರ: ಗೌರವ ಅಧ್ಯಕ್ಷರಾಗಿ ಖಂಡ್ರೆ ಆಯ್ಕೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು. 29 : ವರ್ಷದಂತೆ ಈ ವರ್ಷವೂ ಗಣೇಶ ಉತ್ಸವವನ್ನು ವಿಜೃಂಭಣೆಯಿಂದ ಆಚರಿಸಲು ನಗರದ ರಾಮ ಮಂದಿರದಲ್ಲಿ ಭಾನುವಾರ ನಡೆದ ಗಣೇಶ ಮಹಾಮಂಡಳ ಸಭೆಯಲ್ಲಿ ಸರ್ವಾನುಮತದ ತೀರ್ಮಾನ ಕೈಗೊಳ್ಳಲಾಯಿತು.



ಸಭೆಯಲ್ಲಿ ವಿವಿಧ ಗಣೇಶ ಮಂಡಳಿಯ ಪದಾಧಿಕಾರಿಗಳಿಗೆ ಜವಾಬ್ದಾರಿ ಹಂಚಿಕೆ ಮಾಡಲಾಯಿತು.

ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಅವರನ್ನು ಗಣೇಶ ಉತ್ಸವದ ಗೌರವ ಅಧ್ಯಕ್ಷರಾಗಿ, ನಗರಸಭೆ ಸದಸ್ಯ ಚಂದ್ರಶೇಖರ ಪಾಟೀಲ ಗಾದಗಿ ಅವರನ್ನು ಅಧ್ಯಕ್ಷರಾಗಿ ಹಾಗೂ ಬಿಜೆಪಿ ಮುಖಂಡ ಬಾಬುವಾಲಿ ಅವರನ್ನು ಪ್ರಧಾನ ಕಾರ್ಯದರ್ಶಿಯಾಗಿ, ರಜನೀಶ ವಾಲಿ ಅವರನ್ನು ಖಜಾಂಚಿ ಆಗಿ ಆಯ್ಕೆ ಮಾಡಲಾಯಿತು. ವಿವಿಧ ಸಮಿತಿಗಳ ಪದಾಧಿಕಾರಿಗಳ ವಿವರ ಹೀಗಿದೆ: ಈಶ್ವರ ಸಿಂಗ್ ಠಾಕೂರ್, ರೇವಣಸಿದ್ದಪ್ಪ ಜಲಾದೆ, ದೀಪಕ್ ವಾಲಿ, ರಾಜು ಚಿದ್ರಿ, ಮಹೇಶ ಪಾಲಂ, ಬಸವರಾಜ ಪವಾರ, ಸತೀಶ ಮೊಟ್ಟಿ, ಸುನೀಲ್ ದಳವೆ, ಮನೋಹರ ದಂಡೆ, ನರೇಶ ಗೌಳಿ, ಗೋರಖನಾಥ ಗೌಳಿ (ಉಪಾಧ್ಯಕ್ಷರು), ಸುಭಾಷ ಮಡಿವಾಳ, ವೀರಶೆಟ್ಟಿ ಪಾಟೀಲ ನೌಬಾದ್, ಭರತ ಶೆಟಕಾರ, ಅರುಣ್ ಬಸವನಗರ, ಮಹೇಶ್ವರ ಸ್ವಾಮಿ, ನಿಲೇಶ ರಕ್ಶ್ಯಾಳ, ವೀರೇಶ ಸ್ವಾಮಿ, ಸುನೀಲ ದಳವೆ, ಶ್ರೀಮಂತ ಸಪಾಟೆ, ನವೀನ್ ರೋಷನ್ ವರ್ಮಾ, ಗಣೇಶ ಭೋಸ್ಲೆ, ಮುನ್ನಾ ಆರ್ಯ, ರಾಜಾರಾಮ ಚಿಟ್ಟಾ, ದೇವೇಂದ್ರ ಎಮ್ಮೆಕರ್, ಸನ್ನಿ ಪಾಟೀಲ(ಕಾರ್ಯದರ್ಶಿಗಳು). ಸ್ವಾಗತ ಸಮಿತಿಗೆ ನಂದಕಿಶೋರ್ ವರ್ಮಾ (ಅಧ್ಯಕ್ಷ), ಸುಭಾಷ ಚೋಳಕರ್, ಚಂದ್ರಶೇಖರ ಗಾದಾ (ಕಾರ್ಯದರ್ಶಿಗಳು). ನಗರ ಅಲಂಕಾರ ಸಮಿತಿಗೆ ಹಣಮಂತ ಬುಳ್ಳಾ (ಅಧ್ಯಕ್ಷ), ಮೆರವಣಿಗೆ ಸಮಿತಿಗೆ ಸೂರ್ಯಕಾಂತ ಶೆಟಕಾರ (ಗೌರವ ಅಧ್ಯಕ್ಷ), ಸೋಮಶೇಖರ ಪಾಟೀಲ ಗಾದಗಿ (ಅಧ್ಯಕ್ಷ), ಶಶಿಧರ ಹೊಸಳ್ಳಿ (ಪ್ರಧಾನ ಕಾರ್ಯದರ್ಶಿ), ನವೀನ ಚಿಟ್ಟಾ, ಆನಂದ ಘಂಟೆ, ಕೈಲಾಶ ಕಾಜಿ, ಸಂಜು ಜೀರ್ಗೆ, ನಾಗರಾಜ ಹುಲಿ, ಕಲ್ಯಾಣರಾವ್ ಬಿರಾದಾರ (ಕಾರ್ಯದರ್ಶಿಗಳು).


## "ನಾಗರ ಪಂಚಮಿ" ಹಬ್ಬ ಮಹಿಳೆಯರಿಂದ ಅದ್ದೂರಿ ಆಚರಣೆ.!

ಮಲ್ಲಮ್ಮ ನುಡಿ ವಾರ್ತೆ

ಸುರಪುರ :ತಾಲೂಕಿನ

ಕೆಂಭಾವಿ ಪಟ್ಟಣದಲ್ಲಿ ಈ ವರ್ಷದ ನಾಗರ ಪಂಚಮಿ ಹಬ್ಬವನ್ನು ಭಕ್ತಿಭಾವದೊಂದಿಗೆ ಹಾಗೂ ವಿಜೃಂಭಣೆಯಿಂದ ಆಚರಿಸಲಾಯಿತು. ಪಟ್ಟಣದ ವಿವಿಧಭಾಗಗಳಲ್ಲಿ ನಾಗದೇವರಿಗೆ ವಿಶೇಷಪೂಜೆ ಸಲ್ಲಿಸಲಾಯಿತು. ಮಹಿಳೆಯರು ಪರಂಪರೆಯಂತೆ ಹಬ್ಬದ ವಿಶೇಷ ಆಚರಣೆಯಲ್ಲಿ ಭಾಗವಹಿಸಿ, ನಾಗದೇವರ ಆರಾಧನೆ ಮೂಲಕ ಕುಟುಂಬದ ಕ್ಷೇಮ–ಕಲ್ಯಾಣಕ್ಕಾಗಿ ಪ್ರಾರ್ಥಿಸಿದರು.

ಈ ಸಂದರ್ಭದಲ್ಲಿ ಹಬ್ಬವನ್ನು ಆಚರಿಸಿದ್ದ. ಭಾಗ್ಯ ನೆಲ್ಲಗಿ ಅವರು ಮಾತನಾಡುತ್ತಾ, "ಇದು ನಮ್ಮ ಸಂಸ್ಕೃತಿ ಮತ್ತು ನಂಬಿಕೆಯನ್ನು ಪ್ರತಿಬಿಂಬಿಸುವ ವಿಶೇಷದಿನ. ಮಕ್ಕಳು, ಹಿರಿಯರು ಎಲ್ಲರೂ ಸೇರಿ ಈ ಹಬ್ಬವನ್ನು ಆಚರಿಸುವುದು ಒಂದು ಒಳ್ಳೆಯ ಸಂಸ್ಕೃತಿಯ ಸಂಕೇತ," ಎಂದು ಅಭಿಪ್ರಾಯಪಟ್ಟರು.



ಹಾಗೇ, ಸುನೀತಾ ಟಕ್ಕಳಕಿಯವರು, ಮಲ್ಲಮ್ಮ ನುಡಿಪತ್ರಿಕೆ ಜೊತೆ ಮಾತನಾಡುತ್ತಾ,

"ನಾಗರ ಪಂಚಮಿಯು ಪ್ರಾಚೀನ ಕಾಲದಿಂದಲೂ ಮಹಿಳೆಯರ ಪಾಲಿಗೆ ಶ್ರದ್ಧಾ ಹಾಗೂ ಗೌರವದ ಹಬ್ಬ. ನಮ್ಮ ಸಂಸ್ಕೃತಿ, ನೈತಿಕ ಮೌಲ್ಯಗಳು ಮತ್ತು ಪ್ರಕೃತಿಯ ಪ್ರತಿ ಕೃತಜ್ಞತೆಯ ಸಂಕೇತವಾಗಿ ಈ ಹಬ್ಬವನ್ನು ನಾವು ಆಚರಿಸುತ್ತೇವೆ," ಎಂದು ಹೇಳಿದರು.

ಪೂಜಾ ಕಾರ್ಯಗಳ ಜೊತೆಗೆ, ಮಕ್ಕಳಿಗೆ ಹಬ್ಬದ ಮಹತ್ವವನ್ನು ತಿಳಿಸುವ ಕಾರ್ಯಕ್ರಮಗಳು ಹಾಗೂ

ನುಡಿನಮನಗಳೂ ನಡೆದವು. ನಾಗದೇವರಿಗೆ ಹಾಲು, ಅಕ್ಷತೆ, ನೈವೇದ್ಯ ಇತ್ಯಾದಿಗಳನ್ನು ಸಮರ್ಪಿಸಿ ಜನರು ಪೂರ್ಣ ಶ್ರದ್ಧೆಯಿಂದ ಹಬ್ಬವನ್ನು ಆಚರಿಸಿದರು..!

## ಇಂದು ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಫ್ರೀಡಂ ಪಾರ್ಕ್ ನಲ್ಲಿ ಒಂದು ದಿನದ ಉಪವಾಸ ಸತ್ಯಾಗ್ರಹ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಬೆಂಗಳೂರಿನ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಬೀದರ್ ವಿಭಾಗ ದಲ್ಲಿ ಜಂಟಿ ಕ್ರಿಯಾ ಸಮಿತಿ ವತಿಯಿಂದ ಜನವರಿ 1-2024 ರಿಂದ ಹೊಸ ವೇತನ ಪರಿಷ್ಕರಣೆ, 38 ತಿಂಗಳ ವೇತನ ಪರಿಷ್ಕರಣೆ ಹಿಂಬಾಕಿ ಮೊತ್ತ ಪಾವತಿಸುವುದು, ಕಳೆದಮುಷ್ಕರದಲ್ಲಿ ವಜಾಗೊಂಡ ನೌಕರರನ್ನು ಸೇವೆಗೆತೆಗೆದುಕೊಳ್ಳುವಂತೆ ಮತ್ತು ಇತರೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಡಳಿತ ಮಂಡಳಿಗೆ ಹಾಗೂ ಸರಕಾರಕ್ಕೆ ಜಂಟಿಸಮಿತಿಯು ನಿರಂತರವಾಗಿ ಸಾಕಷ್ಟು ಬಾರಿ ಮನವಿ ಮಾಡಿಕೊಳ್ಳಲಾಗಿರುತ್ತದೆ. ಆದರೆ ಇಲ್ಲಿವರೆಗೆ ಯಾವುದೇ ನಮ್ಮ ಬೇಡಿಕೆಗಳನ್ನು ಈಡೇರಿಸದ ಕಾರಣ ಜಂಟಿ ಕ್ರಿಯಾ ಸಮಿತಿ ವತಿಯಿಂದ ನಾಳೆ ಬೆಂಗಳೂರಿನ ಫ್ರೀಡಂ ಪಾರ್ಕ್ ನಲ್ಲಿ ಒಂದು ದಿನದ ಉಪವಾಸ ಸತ್ಯಾಗ್ರಹದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸರಕಾರಕ್ಕೆ ಎಚ್ಚರಿಕೆ ಸಂದೇಶ ರವಾನಿಸಲು ಅಲ್ಲದೆ ದಿನಾಂಕ 05-08-2025 ರಂದು ಹಮ್ಮಿಕೊಂಡಿರುವ ಸಾರಿಗೆ ನೌಕರರ ಅನಿರ್ದಿಷ್ಟವಾದ ಅವಧಿ ಮುಷ್ಕರಕ್ಕೆ ಕರೆ ಕೊಟ್ಟಿರುವ ಪ್ರಯುಕ್ತ ಡಿಪೋಗಳು, ವಿಭಾಗೀಯ ಕಾರ್ಯಗಾರ, ವಿಭಾಗೀಯ ಕಚೇರಿ ಎಲ್ಲ ನೌಕರರಿಗೆ ಕರೆ ಪತ್ರದ ಮೂಲಕ ಮುಷ್ಕರಕ್ಕೆ ಬೆಂಬಲಿಸುವಂತೆ ಸೂಚಿಸಲಾಯಿತು, ಈಸಂದರ್ಭದಲ್ಲಿ ವಿಶೇಷವಾಗಿ ಅಧಿಕಾರಿಗಳಿಗೂ ಸಹ ಸಹಕರಿಸುವಂತೆ ಜಂಟಿ ಸಮಿತಿಯು ಕೋರಲಾಗಿದೆ. ಈ ಸಮಯದಲ್ಲಿ ಜಂಟಿ ಕ್ರಿಯಾ ಸಮಿತಿಯ ಮುಖಂಡರಾದ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ನೌಕರರ ಸಂಘದ ವಲಯ ಅಧ್ಯಕ್ಷರು ಶ್ರೀ ಸೂರ್ಯಕಾಂತ್ ಟೈಗರ್ ವಲಯ ಪ್ರಧಾನ ಕಾರ್ಯದರ್ಶಿ ಪ್ರಕಾಶ್ ಸುಲೇಪೇಟಕರ್, ಬೀದರ್ ಜಂಟಿ ಕ್ರಿಯಾ ಸಮಿತಿ ಅಧ್ಯಕ್ಷರು ಜೀವನ, ಸದಸ್ಯರುಗಳಾದ ಕಲ್ಲಪ್ಪ, ಸೋಮನಾಥ ಧಾಮಾ, ಎಂ. ಎ. ಖಾಲಿದ, ನಾಗಶೆಟ್ಟಿ ಚನ್ನಮಲ್ಲ, ಪರಮೇಶ್ವರ್ ವಾಘಮಾರೆ, ಅವಿನಾಶ್, ರಾಜಕುಮಾರ ಬೋರಗೆ, ಸಾಗರ್, ರಾಚಪ್ಪ, ಮೋಸಾ ಇತರೆ ಮುಖಂಡರು ಉಪಸ್ಥಿತರಿದ್ದರು.

## ವಿಶ್ವ ಹಿಂದೂ ಪರಿಷತ್ ಬಜರಂಗದಳದ ವತಿಯಿಂದ ನಾಗದೇವತೆಗೆ ಪೂಜೆ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:- ಜು 29 ನಗರದ ಕಾಳಿಗಲ್ಲಿಯ ಪಕ್ಕದ ಬಸ್ ನಿಲ್ದಾಣದ ದಾರಿಯಲ್ಲಿರುವ ಸಮಾರು ವರ್ಷಗಳ ಇತಿಹಾಸವುಳ್ಳ ನಾಗದೇವತೆಯ ಮೂರ್ತಿ (ನಾಗಣ್ಣಾ ಕಟ್ಟಿ) ಇದ್ದು, ಕಾಳಿ ಗಲ್ಲಿಯ ಓಣಿಯ ತಾಯಂದಿರು, ಯುವಕರ ಬಳಗ ಹಾಗೂ ಸದ್ಭಕ್ತರೆಲ್ಲರು ಸೇರಿ ನಾಗರ ಪಂಚಮಿ ಹಬ್ಬದ ನಿಮಿತ್ಯ ಅಲ್ಲಿರುವ ಸುತ್ತಲಿನ ಕಸ ಕಡ್ಡಿಗಳಿಂದ ಕೂಡಿದ ಪರಿಸರವನ್ನು ಶುಚಿಗೊಳಿಸಿ ಮಂಗಳವಾರ ಬೆಳಗ್ಗೆ 8 ಗಂಟೆ ಸುಮಾರಿಗೆ ಮಾತೃಶಕ್ತಿರವರಿಂದ ಪೂಜೆಯನ್ನು ನೆರವೆರಿಸಲಾಯಿತು.

ಈ ಸಂಧರ್ಭದಲ್ಲಿ ನಗರದ ಕಾಳಿನಲ್ಲಿ ನಿವಾಸಿಗಳಾದ ಗಂಗೋತ್ರಿ ವಾತಡೆ. ಸಂಗೀತಾ ವಾತಡೆ, ಲಕ್ಷ್ಮೀ ಗಣಚಾರಿ, ವಿಶ್ವ ಹಿಂದೂ ಪರಿಷತ್ ತಾಲೂಕು ಅಧ್ಯಕ್ಷರಾದ ಶ್ರೀಶೈಲ್ ವಾತಡೆ. ಪ್ರಧಾನ ಬಜರಂಗದಳ ಸಂಯೋಕಜರಾದ ರವಿ ನಾವದ್ಗೇಕರ್, ಸಹ ಸಂಯೋಜಕರಾದ ಶ್ರೀನಿವಾಸ ಬಿರಾದಾರ, ಗೋರಕ್ಷಾ ಪ್ರಮುಖರಾದ ವಿನೋದ ಬಡಗೇಕರ, ಅಜಯ ಗೌಳಿ, ಸುರಕ್ಷಾ ಪ್ರಮುಖರಾದ ಸಚಿನ ಸೂರ್ಯವಂಶಿ, ಬಾಬು ಮಲೋದೆ, ಸುಭಾಷ ಖರುಣೆ, ಸಂಜುಕುಮಾರ ಮೇತ್ರೆ, ಸುಭಾಷ ಬುಡಗೆ, ಅಮೂಲ ಮಲೋದೆ, ಶೇಖರ ಸಾಂಡೆ, ಪವನ ಚಾಮಾಲೆ, ಸಾಹಿಲ ಜಾಧವ, ನಾಗರಾಜ ಭಂಡಾರಿ, ಚಿನ್ಮಯ, ರಾಜು ಬುಯ್ಕೆ, ಸಂದೀಪ ಮೈಲಾರೆ, ಗುರು ಪವಾಡೆ, ಮಲ್ಲಯ್ಯಾ ಶಾನಭೋಗಿಮಠ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಮನುಷ್ಯನಿಗೆ ಧರ್ಮದ ಮಾರ್ಗ ಬಹಳ ಮುಖ್ಯ: ಡಾ.ಅಭಿನವ ಶ್ರೀ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :ಜು 29 ಮನುಷ್ಯನಿಗೆ ಧರ್ಮದ ಮಾರ್ಗ ಬಹಳ ಮುಖ್ಯ ಎಂದು ನಗರದ ಸಂಸ್ಥಾನ ಗವಿಮಠದ ಪೂಜ್ಯಶ್ರೀ ಷ.ಬ್ರ.ಡಾ. ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು ನುಡಿದರು.

ಪವಿತ್ರ ಶ್ರಾವಣ ಮಾಸ ನಿಮಿತ್ಯ ಪ್ರತಿವರ್ಷದಂತೆ ಈ ವರ್ಷವೂ ಕೂಡ ನಗರದ ಇತಿಹಾಸ ಪ್ರಸಿದ್ಧ ಶ್ರೀ ಜಗದ್ಗುರು ಘನಲಿಂಗ ರುದ್ರಮುನಿ ಶಿವಾಚಾರ್ಯ ಸಂಸ್ಥಾನ ಗವಿಮಠದಲ್ಲಿ ಸಿದ್ಧಾಂತ ಶಿಖಾಮಣಿ ಹಾಗೂ ವಚನ ಸಾಹಿತ್ಯ ಕುರಿತು ವಿಶೇಷ ಉಪನ್ಯಾಸ ಮಾಲೆಯ ಮೊದಲನೇ ಸೋಮವಾರದಂದು ನಡೆದ ಸಮಾರಂಭದ ದಿವ್ಯ ಸಾನಿಧ್ಯ ವಹಿಸಿದ್ದ ಪೂಜ್ಯರು ಆಶೀರ್ವಚನ ನೀಡಿದರು ಧರ್ಮೇಣ: ಹೀನ: ಪಶುಭಿ: ಸಮಾನ: ಧರ್ಮಾಚರಣೆಯನ್ನು ಮಾಡದಿರುವ ಮನುಷ್ಯನು ಆಕಾರದಲ್ಲಿ ಮನುಷ್ಯನಂತೆ ತೋರುತ್ತಿದ್ದರು ಆತನನ್ನು ಪಶುವೆಂದೇ ಭಾವಿಸಬೇಕು. ಮನುಷ್ಯನು ಇಹಲೋಕ ಯಾತ್ರೆಯನ್ನು ಮುಗಿಸಿ ಪರಲೋಕಕ್ಕೆ ತೆರಳುವಾಗ ಅವನ ಜೊತೆಗೆ ಹೋಗುವಂತದ್ದೆಂದರೆ ಅವನು ಸಂಪಾದಿಸಿದ ಧರ್ಮವೊಂದೇ ಎಂದರು.

ಅಧ್ಯಕ್ಷತೆ ವಹಿಸಿದ್ದ ನಿವೃತ್ತ ಕೃಷಿ ಅಧಿಕಾರಿಗಳಾದ ಬಸವಂತಪ್ಪ ಲವಾರೆ ಅವರು ಮಾತನಾಡಿ ಕುಟುಂಬದಲ್ಲಿ ತಂದೆ ತಾಯಿಗಳ ಪಾತ್ರ, ಗುರುವಿನ ಮಹತ್ವ, ಇಲ್ಲದಂತೆ ಆಗಿದೆ ಇದಕ್ಕೆ ತಂದೆ-ತಾಯಿಯರಲ್ಲಿ ಸಂಸ್ಕಾರವಿಲ್ಲದೆ ಅನೇಕ ಕುಟುಂಬಗಳು ವಾಮ ಮಾರ್ಗಕ್ಕೆ ಹೋಗುತ್ತಿವೆ ಎಂದು ದುಃಖ ವ್ಯಕ್ತಪಡಿಸಿದರು.

ವಿಶೇಷ ಸನ್ಮಾನ ಸ್ವೀಕರಿಸಿದ ಭಾರತೀಯ ಸೈನ್ಯದಲ್ಲಿ ಸೇವೆಯನ್ನು ಸಲ್ಲಿಸಿ ಆಪರೇಷನ್ ಸಿಂಧೂರ್ ಯುದ್ಧದಲ್ಲಿ ಭಾಗವಹಿಸಿ ಸಾಹಸ ಮೆರೆದು ಪರಮ ಪೂಜ್ಯರಿಂದ ವಿಶೇಷ ಸನ್ಮಾನ ಸ್ವೀಕರಿಸಿ ಮಾತನಾಡಿದ ವೀರ ಯೋಧ ಮಲ್ಲಪ್ಪ ಬರಗಾಲೆ ಯದಲಾಪೂರ ಮಾತನಾಡಿ ಪೂಜ್ಯರ ಸನ್ಮಾನದಿಂದ ನನಗೆ ದೇಶದ ಸೇವೆಯನ್ನು ಮಾಡಲಿಕ್ಕೆ ಮತ್ತಷ್ಟು ಶಕ್ತಿ ಬಂದಿದೆ ಎಂದು ಸಂತಸದಿಂದ ನುಡಿದರು.

ಮುಖ್ಯ ಅತಿಥಿಯಾಗಿ ಓಂಕಾರ್ ಪಾಟೀಲ ಗಾರಂಪಲ್ಲಿ ಭಾಗವಹಿಸಿದ್ದರು. ಅತಿಥಿ-ಯಾಗಿ ಸತೀಶ ನೀಲಮಠ . ಯದಲಾಪುರ ಸದ್ಭಕ್ತರಿಂದ ಭಜನೆ ಸೇವೆ ನಡೆಯಿತು.

ಈಸಂದರ್ಭದಲ್ಲಿ ವಿಮಲಾಬಾಯಿ ಮಾಣಿಕಪ್ಪ ಬಿರಾದಾರ, ಸವಿತಾ ರಮೇಶ ಸ್ವಾಮಿ, ರಾಕೇಶ ಪುರವಂತ, ವಿಜಯಕುಮಾರ ಪಾಟೀಲ ಸುಂಠಾನ, ಬಾಬುರಾವ ಚಳಕಾಪುರೆ, ಶ್ರೀಮತಿ ಸರಸ್ವತಿ ಬೆಂಬಳ್ಗೆ, ಸಂತೋಷ ಬಿರಾದಾರ, ರುದ್ರಮುನಿ ಹಿರೇಮಠ, ಸಾಗರ ಮಾಲಗರ, ವೀರಶೇಟ್ಟಿ ಪಾಟೀಲ, ಗೊವಿಂದ ರೆಡ್ಡಿ ಕೊತಂಪಲ್ಲಿ, ವಿಠ್ಠಲ ರಾಯಪ್ಪನೋರ, ರಮೇಶ ತೊಗರಖೇಡೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಶಿಕ್ಷಕರಾದ ಮಲ್ಲಿಕಾರ್ಜುನ ಆಲಗೂಡೆ ಸಂಚಾಲನೆ. ವಿವೇಕ ವಸ್ತ್ರದ ಪ್ರಾರ್ಥನೆ ಗೀತೆ. ಕಲ್ಪನಾ ದಯಾನಂದ ಶೀಲವಂತ ಸ್ವಾಗತಿಸಿದರು. ಯದಲಾಪುರ ಸದ್ಭಕ್ತರಿಂದ ಭಜನೆ ಸೇವೆ ನಡೆಯಿತು.

## ಆಪ್ಪಿ ಆಟೋ; ಬೈಕ್ ಡಿಕ್ಕಿ ಯುವಕ ಗಂಭೀರ ಗಾಯ





ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಪಟ್ಟಣದ ಕೆಇಬಿ ಕಛೇರಿ, ಹತ್ತಿರವಿರುವ ದಲಿತರ ರುದ್ರಭೂಮಿಯ ರಸ್ತೆ ಬದಿಯಲ್ಲಿ ದ್ವಿಚಕ್ರ ವಾಹನ ಹಾಗೂ ಆಪ್ಪಿ ಆಟೋ ನಡುವೆ ಅಪಘಾತ ನಡೆದ ಪರಿಣಾಮ ಬೈಕ್ ಸವಾರ ಗಂಭೀರವಾಗಿ ಗಾಯಗೊಂಡ ಘಟನೆ ಸೋಮವಾರ ರಾತ್ರಿ 9:30 ಗಂಟೆ ಸುಮಾರಿಗೆ ಈ ದುರ್ಘಟನೆ ಸಂಭವಿಸಿದೆ. ಸ್ಥಳಕ್ಕೆ ಸಂಚಾರಿ ಪೊಲೀಸರು ಭೇಟಿ ನೀಡಿ, ಪರಿಶೀಲಿಸಿದರು.

ಬೈಕ್ ಸವಾರ ಮಹ್ಮದ್ ಸಮೀರ ತಂದೆ ಮಹ್ಮದ್ ಮೌಲನ ಸಾಬ್, (24) ಶಿವಪುರ ಬಡಾವಣೆ ನಿವಾಸಿ ಎಂದು ಗುರುತಿಸಲಾಗಿದೆ. ಇತನನ್ನು ಹಮನಾಬಾದ ಪಟ್ಟಣದ ಸಾರ್ವಜನಿಕ ಆಸ್ಪತ್ರೆಗೆ ಸಾಗಿಸಲಾಗಿತ್ತು.

ವೈದ್ಯರು ಹೆಚ್ಚಿನ ಚಿಕಿತ್ಸೆಗಾಗಿ ಶೀಘ್ರವೇ ಕಲ್ಬುರ್ಗಿಯ ಏಷಿಯನ್ ಮಲ್ಟಿ ಸ್ಪೆಷಲಿಟಿ ಆಸ್ಪತ್ರೆಗೆ ಕಳುಹಿಸಲಾಯಿತು. ಇತನು ಆಸ್ಪತ್ರೆಯಲ್ಲಿ ಹೆಚ್ಚಿನ ಚಿಕಿತ್ಸೆ ಪಡೆಯುತ್ತಿದ್ದಾನೆ. ಈ ಕುರಿತು ಹುಮನಾಬಾದ ಸಂಚಾರಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಭಜನೆಯಿಂದ ಬೆಳೆಯಲಿ ಭಕ್ತಿಯ ಬೀಜ" ಶಿವಶರಣಪ್ಪಾ ವರಪುಲ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಸಮಾಜದಲ್ಲಿ ಭಕ್ತಿಯ ಪ್ರಚುರತೆ ಹಾಗೂ ಆಧ್ಯಾತ್ಮಿಕ ಜೀವನ ಶುದ್ಧಗೊಳಿಸಲು ಭಜನೆ ಪ್ರಮುಖ ಪಾತ್ರವಹಿಸಿದೆ. ಗ್ರಾಮೀಣ ಭಾಗದಿಂದ ನಗರ ಪ್ರದೇಶದವರೆಗೆ ಭಜನೆಯ ಅಭ್ಯಾಸ ಪುನರ್ಜೀವನಗೊಂಡಿದ್ದು, "ಭಜನೆಯಿಂದ ಬೆಳೆಯಲಿ ಭಕ್ತಿಯ ಬೀಜ "ಆದ್ದರಿಂದ ಜನ ಸಾಮಾನ್ಯರ ಜೀವನದಲ್ಲಿ ಧಾರ್ಮಿಕ ಸಂವೇದನೆಗೆ ದಾರಿ ಮಾಡಿಕೊಡುತ್ತಿದೆ ಎಂದು ನಿವೃತ್ತ ಶಿಕ್ಷಕ ಶಿವಶರಣಪ್ಪಾ ವರಪುಲ ನುಡಿದರು. ತಾಲೂಕಿನ ಕರಕನಳ್ಳಿಯ ಶ್ರೀ ಗುರು ಗಂಗಾಧರ ಭಕ್ತ ಪ್ರಭು ದೇವಾಲಯದಲ್ಲಿ ನಡೆದ ಶ್ರಾವಣ ಮಾಸದ ನಿಮಿತ್ಯ ಭಜನೆ ಕಾರ್ಯಕ್ರಮ ಜನರ ಗಮನ ಸೆಳೆಯಿತು. ವಿವಿಧ ಭಾಗಗಳಿಂದ ಭಕ್ತರು ಸೇರಿಕೊಂಡು, ಸಂಜೆ ಭಜನೆಯಲ್ಲಿ ಪಾಲ್ಗೊಂಡರು. ಹಾರ್ಮೋನಿಯಂ, ತಬಲಾ, ಮತ್ತು ಮೃದಂಗದ ನಾದದಲ್ಲಿ ನಡೆದ ದೇವರ ಕೀರ್ತನೆ, ಭಕ್ತರಿಗೆ ಆಧ್ಯಾತ್ಮಿಕ ಅನುಭವ ನೀಡಿತು. ಸ್ಥಳೀಯ ಭಜನೆ ಬಳಗದ ಅಧ್ಯಕ್ಷರಾದ ಬಸವರಾಜ ಗಾದಗಿ ಮಾತನಾಡುತ್ತಾ, "ಭಜನೆ ಕೇವಲ ಹಾಡು ಅಲ್ಲ. ಅದು ಭಗವಂತನ ಪ್ರಾರ್ಥನೆ, ಆತ್ಮಶುದ್ಧಿಯ ಮಾರ್ಗ. ನಮ್ಮ ಸಂಸ್ಕೃತಿಯ ಅಂಶ" ಎಂದು ಹೇಳಿದರು. ಪಾಲ್ಗೊಂಡ ಮಹಿಳಾ ಬಳಗಗಳು, ಮಕ್ಕಳ ಸಹಭಾಗಿತ್ವ, ಹಾಗೂ ಯುವ ಜನರ ಉತ್ಸಾಹದಿಂದ ಕಾರ್ಯಕ್ರಮಕ್ಕೆ ವಿಶಿಷ್ಟಮಾದರಿಯ ರೂಪ ಸಿಕ್ಕಿತು. ಈ ಕಾರ್ಯಕ್ರಮದ ಮೂಲಕ ದೇವರ ನಾಮಸ್ಮರಣೆ ಹಾಗೂ ನೈತಿಕ ಮೌಲ್ಯಗಳ ಕುರಿತು ಜನರಲ್ಲಿ ಅರಿವು ಮೂಡಿಸಲಾಯಿತು. ಕಲಾವಿದರಾದ ಮಲ್ಲಿಕಾರ್ಜುನ ಮರಪಳ್ಳಿ, ವಿಶ್ವನಾಥ ಐನೊಳ್ಳಿ, ಸಂಗೀತ ಭಜನೆ ಕಾರ್ಯಕ್ರಮ ನಡೆಸಿಕೊಟ್ಟರು. ಪ್ರಮುಖರಾದ ಜಗನ್ನಾಥ ರೆಡ್ಡಿ ಮಟಾಟಿ, ಗುರುಲಿಂಗಯ್ಯ ಸ್ವಾಮಿ, ಬಕ್ಕಯ್ಯ ಸ್ವಾಮಿ, ಶಿವಯ್ಯ ಸ್ವಾಮಿ, ಮಲ್ಲಿನಾಥ ಕಲ್ಲೂರ, ಚಂದ್ರಪ್ಪಾ ಹೂಗೊಂಡ, ಈಶ್ವರ ಭೈರಿ, ಪಾಂಡುರಂಗ ರೆಡ್ಡಿ, ಪ್ರಭು ಘಾಟೊಳ್ಳಿ, ಬಾಬುರಾವ ಕಲ್ಲೂರ, ಪ್ರಭು ಹೂಗಾರ, ಗಂಗಾಧರ ಸ್ವಾಮಿ, ಬಸವರಾಜ ಭೈರಿ, ಶಿವರಾಜ ಸೂರಿ, ಜಗನ್ನಾಥ ಗಾರಿ ಕಲಾವತಿ ಕಲ್ಲೂರ, ಈಶ್ವರಮ್ಮ ಪೂಜಾರಿ, ನೀಲಮ್ಮ ಹೂಗೊಂಡ, ಜಗಮ್ಮ ಇದಲಾಯಿ, ರಾಜಮ್ಮ, ನಾಗಮ್ಮ ಗಾದಗಿ, ಸುತ್ತಮುತ್ತಲಿನ ಭಕ್ತರು ಭಾಗವಹಿಸಿದ್ದರು. ಶ್ರಾವಣ ಮಾಸದ ಅಂಗವಾಗಿ ಶ್ರೀ ಬಕ್ಕಪ್ರಭುವಿಗೆ ವಿಶೇಷ ಪೂಜೆ ಹೂವಿನ ಅಲಂಕಾರ ಮಾಡಲಾಗಿತ್ತು. ಅನ್ನಸಂತರ್ಪಣೆ ರಾಜ್ಯ ನೆರೆ ರಾಜ್ಯಗಳಿಂದ ಭಕ್ತರು ಆಗಮಿಸಿ ಭಕ್ತಿ ಸಮರ್ಪಿಸಿದರು.

## ಪತ್ರಕರ್ತರು ಹಾಗೂ ಪೊಲೀಸರು ಸಮಾಜದ ಎರಡು ಕಣ್ಣುಗಳಿದ್ದಂತೆ : ಡಿ.ವೈ. ಎಸ್ಪಿ ಜೆ ಎಸ್ ನ್ಯಾಮೆಗೌಡರ್.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಜು 29 ಪತ್ರಕರ್ತರು ಹಾಗೂ ಪೊಲೀಸರು ಸಮಾಜದ ಎರಡು ಕಣ್ಣುಗಳಿದ್ದಂತೆ. ಸಮಾಜ ನಿರ್ಮಾಣಕ್ಕಾಗಿ ಇಬ್ಬರು ಕೂಡಿ ಶ್ರಮಿಸಿದಾಗ ಮಾತ್ರ ಸಮಾಜದಲ್ಲಿ ಶಾಂತಿ ಸುವ್ಯವಸ್ಥೆ ಕಾಪಾಡಲು ಸಾಧ್ಯ ಎಂದು ಹುಮನಾಬಾದಿನ ಡಿ . ವೈ. ಎಸ್ಪಿ. ಜೆ. ಎಸ್. ನ್ಯಾಮೆಗೌಡರ್ ಹೇಳಿದರು. ಇಲ್ಲಿನ ಸಿಪಿಐ ಕಛೇರಿಯಲ್ಲಿ ಪೊಲೀಸ್ ಇಲಾಖೆಯಿಂದ ಅಯೋಜಿಸಿದ ಪತ್ರಿಕಾ ದಿನಾಚರಣೆ ಹಾಗೂ ಪತ್ರಕರ್ತರಿಗೆ ಸನ್ಮಾನ ಸಮಾರಂಭದಲ್ಲಿ ಅವರು ಮಾತನಾಡಿದರು ಸಮಾಜದಲ್ಲಿ ಶಾಂತಿ ಸುವ್ಯವಸ್ಥೆ ಕಾಪಾಡುವಲಿ ಪೋಲಿಸ್ ಇಲಾಖೆಗೆ ಪತ್ರಕರ್ತರ ಸಹಕಾರ ಅವಶ್ಯಕತೆ ಇದೆ ಎಂದರು. ನಗರ ಪೊಲೀಸ್ ಠಾಣೆಯ ಸಿ. ಪಿ. ಐ. ಅಲಿಸಾಬ್ ಮಾತನಾಡಿ ಸಮಾಜದಲ್ಲಿ ನ್ಯಾಯಸಿಗದಿದ್ದರೆ ಮೊದಲು ಪತ್ರಿಕಾ ರಂಗಕ್ಕೆ ಹೋಗುತ್ತೆವೆ ಪತ್ರಿಕಾ ರಂಗವು ಸಮಾಜದಲ್ಲಿನ ಅಂಕು ಡೂಂಕುಗಳನ್ನು ತಿದ್ದುವ ಮೂಲಕ ಸರಿದಾರಿಗೆ ತರುವಂತ ಮಹತ್ವದ ಕೆಲಸ ಪತ್ರಕರ್ತರು ಮಾಡುತ್ತಿದ್ದಾರೆ ಎಂದು ಹೇಳಿದರು. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕಾ ಅಧ್ಯಕ್ಷರಾದ ಮಾರ್ಥಂಡ್ ಜೋಶಿ ಮಾತನಾಡಿ ಹಲವು ಒತ್ತಡಗಳ ಮಧ್ಯ ಕೆಲಸ ಮಾಡುವ ಪತ್ರಕರ್ತರಿಗೆ ಪೋಲಿಸ್ ಇಲಾಖೆಯಿಂದ ಸಹಕಾರ ಅವಶ್ಯಕವಾಗಿದ್ದು ಎಂದರು. ಹಿರಿಯ ಪತ್ರಕರ್ತರಾದ ಗುರುನಾಥ ಗಡ್ಡೆ ಮಾತನಾಡಿದರು. ನಗರ ಪೊಲೀಸ್ ಠಾಣೆಯ ಪಿ. ಎಸ್. ಐ. ಅಂಬರೀಶ ವಾಗ್ಮೊಡೆ ಸ್ವಾಗತಿಸಿದರು. ಕ್ರೈಂ ಪಿ. ಎಸ್. ಐ. ಸುರೇಶ ಹಜರಗಿ. ಸಂಚಾರಿ ಪೊಲೀಸ್ ಠಾಣೆ-ಯ ಪಿ. ಎಸ್. ಐ. ಸಿದ್ದೇಶ್ವರ. ಪ್ರೋಬೇಷನರಿ ಪಿ. ಎಸ್. ಐ. ಪುರುಷೋತ್ತಮ. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕಾ ಉಪಾಧ್ಯಕ್ಷರಾದ ಡಿ. ಕೆ. ಪ್ರಹ್ಲಾದ. ಪ್ರಧಾನ ಕಾರ್ಯದರ್ಶಿ ಉದಯಕುಮಾರ್ ಮೂಳೆ. ಪ್ರವಿಣ ವಿಸಾಜಿ. ವಿರಶೇಟ್ಟಿ ಮಲಶೇಟ್ಟಿ. ನೈಮೂದಿನ ಚಾಬುಕ ಸವಾರ. ಕಲ್ಯಾಣರಾವ ಮದರಗಾಂವ ಧನರಾಜ ರಾಜೋಳೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## 22 ಜನ ಪ್ರಯಾಣಿಕರ ಪ್ರಾಣ ಉಳಿಸಿದ : ಡ್ರೈವರ್ ಮೈಹೇಬೂಬ್



ಮಲ್ಲಮ್ಮ ನುಡಿ ವಾರ್ತೆ

ನಾರಾಯಣಪುರ : ಲಿಂಗಸಗುರ ಘಟಕದ ಕೆ.ಎಸ್.ಆರ್.ಟಿ.ಸಿ.ಬಸ್ ಲಿಂಗಸಗೂರನಿಂದ ಮುದ್ದೇಬಿಹಾಳ ಹೋಗುವಾಗ ನಾರಾಯಣಪುರ ಸಮೀಪ ದೊಡ್ಡ ಅನಾಹುತ ತಪ್ಪಿಸಿದ್ದಾರೆ ಡ್ಯೆವರ್ ಮೈಹೇಬೂಬ್

ಲಿಂಗಸಗುರನಿಂದ ಮುದ್ದೇಬಿಹಾಳ ಸುಮಾರು 22 ಜನ ಪ್ರಯಾಣಿಕರನ್ನು ಹೊತ್ತ ಎನ ಈ ಕೆ ಎಸ ಆರ್ ಟಿಸಿ ಬಸ್ಸನ ಸ್ಟೆರಿಂಗ್ ಏಕಾ ಏಕಿ ಕಟ್ಟಾಗಿದ್ದು ಚಾಲಕನ ತಕ್ಷಣಕ್ಕೆ ಬಲಕ್ಕೆ ತಿರುಗಿಸಿ ಬಾರಿ ಅನಾಹುತ ತಪ್ಪಿಸಿ ಎಲ್ಲರ ಪ್ರಾಣ ಉಳಿಸಿದ್ದಾರೆ ಮೈಹೇಬೂಬ್

ಈ ಅಪಘಾತದಲ್ಲಿ ಪ್ರಾಣ ಹಾನಿ ಆಗದೆ ಇರೋದು ಅದೃಷ್ಟ ಎಂದು ಪ್ರಯಾಣಿಕರು ನಿಟ್ಟಿಸುರು ಬಿಟ್ಟಿದ್ದಾರೆ

ಈ ಅಪಘಾತದಲ್ಲಿ ಕಂಡ್ಯಕ್ಟರ್ ಶಂಕರ್ ಗೌಡರಿಗೆ ಎಡ ಕಾಲಿನಲ್ಲಿ ಒಳಪೆಟ್ಟು ಹಾಗೂ ಒಬ್ಬ ಹಿರಿಯ ವ್ಯಕ್ತಿಯ ಎಡ ಕಣ್ಣಿನ ಮೇಲಭಾಗಕ್ಕೆ ಒಂದು ದೊಡ್ಡ ಗಾಯ ಆಗಿರೋದು ಬಿಟ್ರೆ ಏನು ಅನಾಹುತ ಆಗಿಲ್ಲಾ ಎಂದು ನಾರಾಯಣಪುರ ಠಾಣಾ ಪೋಲಿಸರಯ ಮಾಹಿತಿ ನೀಡಿದ್ದಾರೆ. ಪ್ರಯಾಣಿಕರಿಗೆ ಬೇರೆ ಬಸ್ಸನ ವ್ಯವಸ್ಥೆ ಮಾಡಿ ಕಳಿಸಿ ಕೋಡಲಾಯಿತ್ತು.

## ನಾಳೆ ಮನ್ನಾಏಖೇಳಿ ಗ್ರಾಮ ಪಂಚಾಯತನಲ್ಲಿ ಗ್ರಾಮ ಸಭೆ

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:-ಮನ್ನಾಏಖೇಳಿ ಗ್ರಾಮ ಪಂಚಾಯತನಲ್ಲಿ ಸೋಮವಾರ ಜರುಗಿದ ಸಾಮಾಜಿಕ ಲೆಕ್ಕ ಪರಿಶೋಧನೆಯಲ್ಲಿ ಗ್ರಾಮ ಪಂಚಾಯತ ಎಲ್ಲ ಸಿಬ್ಬಂದ್ದಿಗಳು ಸಹಕರಿಸಬೇಕು ಎಂದು ಸಾಮಾಜಿಕ ಲೆಕ್ಕ ಪರಿಶೋಧನೆ ಕಾರ್ಯಕ್ರಮ ವ್ಯವಸ್ಥಾಪಕ ರಾಹುಲ್ ಕೈವಾರೆ ಹೇಳಿದರು. ತಾಲೂಕಿನ ಮನ್ನಾಏಖೇಳಿ ಗ್ರಾಮ ಪಂಚಾಯತನಲ್ಲಿ ಜರುಗಿದ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಮತ್ತು 15ನೇ ಹಣಕಾಸು ಆಯೋಗದ ಹಾಗೂ ರಾಜ್ಯ ಹಣಕಾಸು ಆಯೋಗದ ಅನುದಾನದ ಸಾಮಾಜಿಕ ಲೆಕ್ಕ ಪರಿಶೋಧನೆಯ ಪೂರ್ವಭಾವಿ ಸಭೆಯಲ್ಲಿ ತಿಳಿಸಿದರು. ಜುಲೈ 28 ರಿಂದ 31ರ ವರೆಗೆ ಸಾಮಾಜಿಕ ಲೆಕ್ಕ ಪರಿಶೋಧನೆ ಜರುಗುತ್ತದೆ. ಆದ್ದರಿಂದ ಎಲ್ಲ ಕಡತಗಳು ನೀಡಬೇಕು. ಜುಲೈ 31 ರಂದು ಬೆಳಗ್ಗೆ 10 ಗಂಟೆಗೆ ಗ್ರಾಮ ಪಂಚಾಯತ ಆವಣದಲ್ಲಿ ಗ್ರಾಮ ಸಭೆ ಜರುಗಲಿದ್ದು ಗ್ರಾಮಸ್ಥರನ್ನು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಒಂದು ದಿನ ಮುಂಚಿತವಾಗಿ ಡಂಗೂರ ಸಾರಿ ಗ್ರಾಮ ಸಭೆ ಯಶಸ್ವಿಗೊಳಿಸಬೇಕು ಎಂದು ಮಾತನಾಡಿದರು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ ಅಧ್ಯಕ್ಷ ರಾಜಕುಮಾರ ಅಗಸಿ, ಅಭಿವೃದ್ಧಿ ಅಧಿಕಾರಿ ಭಾಗ್ಯಜ್ಯೋತಿ, ಐಇಸಿ ಸಂಯೋಜಕ ವಿಶ್ವನಾಥ ಗಡ್ಡಿಮನಿ, ತಾಂತ್ರಿಕ ಸಹಾಯಕ ಮೈಬೂಬ್, ಗ್ರಾಮ ಸಂಪನ್ಮೂಲ ವ್ಯಕ್ತಿಗಳು, ಗ್ರಾಮ ಪಂಚಾಯತ ಸದಸ್ಯರು ಸೇರಿದಂತೆ ಇತರರು ಉಪಸ್ಥಿತರಿದ್ದರು.



ಬಸವಕಲ್ಯಾಣ:- ತಾಲೂಕಿನ ಸುಕ್ಷೇತ್ರ ಹಾರಕೂಡ ಶ್ರೀ ಮಠದ ಆವರಣದಲ್ಲಿ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರ ಪಾವನ ಸಾನಿಧ್ಯದಲ್ಲಿ ನಾಗರ ಪಂಚಮಿ ಹಬ್ಬ ಆಚರಿಸಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ನಿವೃತ್ತ ಉಪ ಕಾರ್ಯದರ್ಶಿಗಳಾದ ಬಿ. ಕೆ. ಹಿರೇಮಠ, ಮಲ್ಲಿನಾಥ ಹಿರೇಮಠ ಹಾರಕೂಡ, ಪಂಚಾಕ್ಷರಿ ಹಿರೇಮಠ, ಡಾ. ಶಿವಶರಣಯ್ಯ ಮಠಪತಿ ಹಾಗೂ ದಾಸೋಹ ಮನೆಯ ಹೆಣ್ಣು ಮಕ್ಕಳು ಉಪಸ್ಥಿತರಿದ್ದರು. ದಾಸೋಹ ಮನೆಯ ಹೆಣ್ಣು ಮಕ್ಕಳು ಹಬ್ಬದ ನಿಮಿತ್ಯ ಬುಲಾಯಿ ಹಾಕಿ ಸಂಭ್ರಮ ಪಟ್ಟರು.

## ಇಂದು ವಿವಿಧ ಜಯಂತಿಗಳ ಪೂರ್ವಭಾವಿ ಸಭೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 29 -ಜಿಲ್ಲೆಯಲ್ಲಿ ಜಿಲ್ಲಾಡಳಿತದ ವತಿಯಿಂದ ಆಗಸ್ಟ್ 09 ರಂದು ನುಲಿಯ ಚಂದಯ್ಯ ಜಯಂತಿ ಹಾಗೂ ಆಗಸ್ಟ್ 16 ರಂದು ಶ್ರೀಕೃಷ್ಣ ಜಯಂತಿ ನಡೆಯಲಿವೆ.

ಈ ಜಯಂತಿ ಅಂಗವಾಗಿ ಜುಲೈ 30ರ ಬೆಳಿಗ್ಗೆ 11.30 ಗಂಟೆಗೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇ-ರಿಯ ಸಭಾಂಗಣದಲ್ಲಿ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆ ಹಮ್ಮಿಕೊಳ್ಳಲಾಗಿದ್ದು, ವಿವಿಧ ಸಮಾಜದ ಮುಖಂಡರು ಸಭೆಯಲ್ಲಿ ಭಾಗವಹಿಸಿ ಸೂಕ್ತ ಸಲಹೆ ಸೂಚನೆ ನೀಡಬಹುದಾಗಿದೆ.

ಅಂದು ನಡೆಯುವ ಪೂರ್ವಭಾವಿ ಸಭೆಗೆ ಸಂಬಂಧಿಸಿದ ಅಧಿಕಾರಿಗಳು ಹಾಗೂ ಜಿಲ್ಲೆಯ ವಿವಿಧ ಸಮಾಜದ ಮುಖಂಡರುಗಳು ಭಾಗವಹಿಸಿ ಸಭೆಯನ್ನು ಯಶಸ್ವಿಗೊಳಿಸಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಕಮಲನಗರ: ತಾಲೂಕಿನ ಡಿಗ್ಗಿ ಗ್ರಾಮದಲ್ಲಿ ನಾಗರ ಪಂಚಮಿ ಹಬ್ಬದ ನಿಮಿತ್ಯ ಪುಟಾಣಿ ಮಕ್ಕಳು ನಾಗ ದೇವರಿಗೆ ಹಾಲೇರದು, ಭಕ್ತಿಯಿಂದ ನಮಿಸಿದರು.

# ಬುಲಾಯಿ ಹಾಡಿ ನಾಗರ ಪಂಚಮಿ ಆಚರಣೆ



"ನಾಗರ ಪಂಚಮಿ ಹಬ್ಬ ನಾಗ ದೇವರಿಗೆ ಪೂಜೆ ಮಾಡಿ ತವರು ಮನೆಯನ್ನು ಹರಸುವ ಹಬ್ಬವಾಗಿದೆ. ಪಂಚಮಿ ಹಬ್ಬದ ನಿಮಿತ್ಯ ಬೇರೆ ಊರಿಗೆ ಮದುವೆಯಾಗಿ ಹೋದ ಹೆಣ್ಣುಮಕ್ಕಳು ಮತ್ತೆ ಎಲ್ಲರನ್ನು ಒಗ್ಗೂಡಿಸುವ ಹಬ್ಬ ಇದಾಗಿದೆ."
– ಸುಗುಣಾವತಿ ಟೋಣ್ಣೆ.

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಜು.29:ನಾಗರ ಪಂಚಮಿ ಹಬ್ಬದ ನಿಮಿತ್ಯ ತಾಲೂಕಿನ ಡಿಗ್ಗಿ ಗ್ರಾಮದಲ್ಲಿ ಮಹಿಳೆಯ ಬುಲಾಯಿ ಹಾಡುಗಳಿಗೆ ನೃತ್ಯ ಮಾಡುವ ಮೂಲಕ ಪಂಚಮಿ ಹಬ್ಬ ಸಡಗರ ಸಂಭ್ರಮದಿಂದ ಆಚರಣೆ ಮಾಡಿದರು.

ವೈಜೇನಾಥ ಪಾಟೀಲ ಅವರ ಮನೆ ಮುಂದೆ ಮಂಗಳವಾರ ಗ್ರಾಮದ ನೂರಾರು ಜನ ಮಹಿಳೆಯರು ಜಮಾಯಿಸಿ ಪಂಚಮಿ ಹಬ್ಬದ ಪರಂಪರೆಯಾಗಿ ಬಂದಿರುವ ಬುಲಾಯಿ ಹಾಡುಗಳ ಮೂಲಕ ತವರು ಊರು ಬಗ್ಗೆ, ಅಣ್ಣ ತಂಗಿ, ಹೆಣ್ಣುಮಕ್ಕಳು ಬಗ್ಗೆ ಅನೇಕ ಜನ ಪದ ಹಾಡುಗಳ ಮೂಲಕ ಕೊಂಡಾಡಿದರು.

ಈ ಸಂದರ್ಭದಲ್ಲಿ ನೀಲಮ್ಮ ಬಿರಾದಾರ,ಸುಗಣಾವತಿ ಟೋಣ್ಣೆ,ಪಾರಮ್ಮ ಚಾಂಡೇಶ್ವರೆ, ರತ್ನಬಾಯಿ ರಾಂಪುರೆ,ಮಲ್ಲಮ್ಮ ಬಿರಾದಾರ,ರತ್ತನ್ಮ ಬಿರಾದಾರ, ಚಂದ್ರಮ್ಮ ಶ್ರೀಗಿರೆ, ಸಂಗಮ್ಮ ರಾಂಪುರೆ, ಕಮಲಬಾಯಿ ಮುರ್ಕೆ,ಶಕುಂತಲಾ ಪಾಟೀಲ, ಗ್ರಾಮ ಪಂಚಾಯತ ಸದಸ್ಯೆ ಸುಗುಣಾವತಿ ಬಿರಾದಾರ, ಸೇರಿದಂತೆ ಅನೇಕರು ಇದ್ದರು.

# ನಾಳೆಯಿಂದ ಭಾತಂಬ್ರಾ ಶ್ರೀಗಳಿಂದ ಪ್ರವಚನ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜು.29:ಮಹಾರಾಷ್ಟ್ರದ ಲಾತೂರು ಜಿಲ್ಲೆಯ ನಿಲಂಗಾ ತಾಲೂಕಿನ ಔರಾದ್(ಶ)ನ ವಿರುಪಾಕ್ಷೇಶ್ವರ ವಿರಕ್ತ ಮಠದಲ್ಲಿ ಶ್ರಾವಣ ಮಾಸದ ಅಂಗವಾಗಿ ಜು.31 ರಿಂದ ಆ.24ರ ವರೆಗೆ ಭಾತಂಬ್ರಾ ನಿರಂಜನ ಸಂಸ್ಥಾನ ಮಠದ ಜಗದ್ಗುರು ಶಿವಯೋಗೀಶ್ವರ ಮಹಾಸ್ವಾಮೀಜಿ ಅವರು ಪ್ರವಚನ ನಡೆಸಿ ಕೊಡಲಿದ್ದಾರೆ. ಗುರು ಗುಹೇಶ್ವರರ ಚಾಮರಸಕವಿ ಕೃತ ಪ್ರಭುಲಿಂಗ ಲೀಲೆ ವಿಷಯದ ಮೇಲೆ ಪ್ರತಿದಿನ ಸಾಯಂಕಾಲ 5 ರಿಂದ 6ಗಂಟೆ ವರೆಗೆ ಪ್ರವಚನ ನಡೆಸಿ ಕೊಡಲಿದ್ದು, ಸದ್ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಸದುಪಯೋಗ ಪಡೆದುಕೊಳ್ಳಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಹಾವಿಗೆ ಹಾಲೆರೆದ ಮುತ್ತೈದೆಯರು



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜು.29:ಶ್ರಾವಣಮಾಸದ ಮೊದಲ ಹಬ್ಬವಾದ ನಾಗರ ಪಂಚಮಿಯಂದು ಪಟ್ಟಣದ ವಿವಿದೆಡೆ ಮುತ್ತೈದೆಯರು ಕಲ್ಲು ನಾಗರಕ್ಕೆ ಮತ್ತು ಮಣ್ಣಿನ ಹುತ್ತಿಗೆ ಹಾಲು ,ಹೂ,ಹಣ್ಣು ಎರೆದು ತಮ್ಮ ಭಕ್ತಿಭಾವ ಮೆರೆದರು. ಮಂಗಳವಾರದಂದು ಮುಂಜಾನೆ ಬಾಲಕಿಯರು,ಮಹಿಳೆಯರು ,ವೃದ್ಧರು ಹೊಸ ಬಟ್ಟೆ,ಸೀರೆ ಉಟ್ಟು,ನೈವೇದ್ಯ,ಹಾಲು,ಹಣ್ಣು,ಹೂ ಮತ್ತು ಉಂಡೆಗಳೊಂದಿಗೆ ಪಟ್ಟಣದ ಬೇರೆ ಬೇರೆ ಕಡೆಯಲ್ಲಿ ಇರುವ ಕಲ್ಲು ನಾಗರ ಮೂರ್ತಿಗೆ,ಹೊಲದಲ್ಲಿರುವ ಮಣ್ಣಿನ ಹುತ್ತಿಗೆ ಭಕ್ತಿಭಾವದಿಂದ ಪೂಜೆ ಸಲ್ಲಿಸಿ ಭಕ್ತಿಯ ಪರಾಕಾಷ್ಠೆ ಮೆರೆದರು.ಪಂಚಮಿ ಅಂದರೆ ನವವಿವಾಹಿತ ಮಹಿಳೆಯರು ಸಂಪ್ರದಾಯದಂತೆ ಖುಷಿ ಖುಷಿಯಿಂದ ತವರಿಗೆ ಬರುತ್ತಾರೆ.ಪಂಚಮಿ ಹಬ್ಬದ ಮೊದಲನೇ ರಾತ್ರಿ ಕೈ,ಕಾಲಿನ ಬೆರಳುಗಳಿಗೆ ಮದರಂಗಿ (ಮೆಹಂದಿ)ಹಚ್ಚಿಕೊಂಡು ಬೆಳಿಗ್ಗೆ ಯಾರ ಮೆಹಂದಿ ಕಲರಫುಲಯಿದೆ ಎಂದು ಉತ್ಸಾಹದಿಂದ ನೋಡುತ್ತಾರೆ. ಹೆಣ್ಮಕ್ಕಳಿಗೆ ಪಂಚಮಿ ಹಬ್ಬದಲ್ಲಿ ಗಿಡ,ಮರಕ್ಕೆ ಜೋಕಾಲಿ ಕಟ್ಟಿ ಆಡುವುದೆಂದರೆ ಎಲ್ಲಿಲ್ಲದ ಸಂಭ್ರಮ.ಪಟ್ಟಣ ಪ್ರದೇಶಕ್ಕಿಂತ ಗ್ರಾಮೀಣಭಾಗದಲ್ಲಿ ಮಹಿಳೆಯರು ಜೋಕಾಲಿ ಆಡುವುದು ಜೋರಾಗಿರುತ್ತದೆ ಹಾಗೂ ಸಾಯಂಕಾಲ ವೃತ್ತಾಕಾರದಲ್ಲಿ ಒಬ್ಬರನೊಬ್ಬರ ಕೈ ಹಿಡಿದು ಅರ್ಥಪೂರ್ಣ ಜನಪದ ಗೀತೆಯೊಂದಿಗೆ ಭೂಲಾಯಿ ಆಡಿ ಮನರಂಜಿಸುತ್ತಾರೆ.ವಿಜ್ಞಾನ,ತಂತ್ರ ಜ್ಞಾನ ಎಷ್ಟೇ ಮುಂದುವರೆದರೂ ಭಾರತದ ಕೆಲವು ಭಾಗದಲ್ಲಿ ಸಾಂಪ್ರದಾಯಿಕ ಹಬ್ಬಗಳಿಗೆ ತನ್ನದೆಯಾದ ಮೌಲ್ಯವಿದೆ ಎಂದು ಹಿರಿಯ ಅಜ್ಜಿ ಹೇಳುತ್ತಾರೆ.ಬಸವತತ್ವದ ಪ್ರಕಾರ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು,ಕಲ್ಲು ನಾಗಪ್ಪನಿಗೆ ,ಹುತ್ತಿಗೆ ಹಾಲೆರೆದರೇನು ಫಲ. ಅದೇ ಹಾಲು ಬಡ ಮಕ್ಕಳಿಗೆ ಕುಡಿಸಿರಿ ಎಂದು ಪ್ರವಚನ ಹೇಳುತ್ತಾರೆ.ಆದರೆ ಮಹಿಳೆಯರು ತಮ್ಮ ವಾಡಿಕೆ ಹಬ್ಬಗಳು ಹಾಗೇ ಆಚರಿಸಿಕೊಂಡು ಬರುತ್ತಿದ್ದಾರೆ ಎಂದು ಹೆಸರೇಳಲು ಇಚ್ಚಿಸಿದ ಮಹಿಳೆ ತಮ್ಮ ಮನದಾಳದ ಮಾತು ಹೊರಹಾಕುತ್ತಾರೆ.

# ಬಸವ ಪಂಚಮಿ: ಅಲೆಮಾರಿ ಮಕ್ಕಳಿಗೆ ಹಾಲು ವಿತರಣೆ




ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು. 29 : ಮಾನವ ಬಂಧುತ್ವ ವೇದಿಕೆ ವತಿಯಿಂದ ತಾಲ್ಲೂಕಿನ ಜನವಾಡ ಗ್ರಾಮದಲ್ಲಿ ಮಂಗಳವಾರ ನಾಗರ ಪಂಚಮಿಯನ್ನು ಬಸವ ಪಂಚಮಿಯನ್ನಾಗಿ ಆಚರಿಸಲಾಯಿತು.

ಗ್ರಾಮದ ಅಲೆಮಾರಿ ಜನಾಂಗದ ಮಕ್ಕಳಿಗೆ ಹಾಲು ವಿತರಿಸಲಾಯಿತು.

ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೋಳಿ ಅವರ ಮಾರ್ಗದರ್ಶನದಲ್ಲಿ ವೇದಿಕೆಯು ಹತ್ತು ವರ್ಷಗಳಿಂದ ಮೂಢ ಆಚರಣೆಗಳ ವಿರುದ್ಧ ಜನಜಾಗೃತಿ ಮೂಡಿಸುತ್ತ ಬಂದಿದೆ. ನಾಗರ ಪಂಚಮಿಯನ್ನು ಬಸವ ಪಂಚಮಿಯನ್ನಾಗಿ ಆಚರಿಸಲಾಗುತ್ತಿದೆ ಎಂದು ವೇದಿಕೆ ಸಂಚಾಲಕ ಗೌತಮ ಮುತ್ತಂಗಿಕರ್ ಹೇಳಿದರು.

ವೈಜ್ಞಾನಿಕವಾಗಿ ಹಾವು ಹಾಲು ಕುಡಿಯುವುದಿಲ್ಲ. ಹೀಗಾಗಿ ಹುತ್ತಿಗೆ ಎರೆದು ಹಾಲು ವ್ಯರ್ಥ ಮಾಡುವ ಬದಲು ಅಪೌಷ್ಟಿಕತೆ ಹೋಗಲಾಡಿಸಲು ಮಕ್ಕಳಿಗೆ ಹಾಲು ವಿತರಿಸಲಾಗಿದೆ ಎಂದು ತಿಳಿಸಿದರು.

ಸಂಗನಹಳ್ಳಿಯ ಸಮಾಜ ಸೇವಕ ಜಿತೇಂದ್ರ ಕವಾಲೆ, ಅಶೋಕ ಕಡಮಂಚಿ,ರಾಮು ಚೆಟ್ಟೆಪ್ಪ ಮತ್ತಿತರರು ಇದ್ದರು.

# ಹಸಿದ ಮನಕ್ಕೆ ಹಾಲೂಣಿಸಿ ಮೂಢನಂಬಿಕೆ ಅಂತ್ಯಗೊಳಿಸಿ ; ಬಸವಮಹಾಂತ ಸ್ವಾಮಿಗಳು




ಬೀದರ. ಜು. 29 : ಹಬ್ಬ ಹರಿದಿನಗಳಲ್ಲಿ ಸಾಂಸ್ಕೃತಿಕ ಪರಂಪರೆ ಸಂಭ್ರಮಾಚರಣೆ ಸಹಜ ವಾಗಿರಲಿ ಆದರೆ ಮೂಢ ನಂಬಿಕೆಯಿಂದ ವ್ಯವಸ್ಥೆಗೆ ಧಕ್ಕೆಯಾಗದಿರಲಿ ಎಂದು ರಾಜ್ಯ ವೈಜ್ಞಾನಿಕ ಪರಿಷತ್ತಿನ ಸಂಯೋಜಕರಾದ ಬಾಬು ದಾನಿ ನುಡಿದರು.

ಬಸವಕೇಂದ್ರದ ವತಿಯಿಂದ ವಿದ್ಯಾನಗರದ ನವಚೇತನ ವಿಶೇಷ ಮಕ್ಕಳ ವಸತಿಯುತ ಶಾಲೆ ಮಕ್ಕಳಿಗೆ ಹಣ್ಣು,ಹಾಲು ವಿತರಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಬಾಬು ದಾನಿ ಮಾತನಾಡುತ್ತ ಸಮಾಜದಲ್ಲಿ ನಿರ್ಗತಿಕರು,ಬಡವರು,ವಿಶೇಷ ಚೇತನ ಉಳ್ಳ ಮಕ್ಕಳಿಗೆ ಅನೇಕ ತೊಂದರೆಗಳಿವೆ. ಅವರ ಸರ್ವಾಂಗೀಣ ಬದುಕಿಗೆ ಸ್ಪಂದಿಸುವ ಹೃದಯವಂತರು ನಾವಾಗಬೇಕು. ಸಂಪ್ರದಾಯದ ಹೆಸರಲ್ಲಿ ಹಾವಿಗೆ ಹಾಲೆರೆಯುವುದು ಶುದ್ಧ ತಪ್ಪು, ಇಂದು ಸಮಾಜವನ್ನು ಜಾಗೃತಗೊಳಿಸಿ, ಮಕ್ಕಳಿಗೆ ಪೌಷ್ಟಿಕ ಆಹಾರ ನೀಡಿ ಆರೋಗ್ಯ ಕಾಪಾಡಲು ಸೂಕ್ತವಾದ ಸಲಹೆ ನೀಡಿದರು. ಕನ್ನಡ ಸಾಹಿತ್ಯ ಪರಿಷತ್ತು ಜಿಲ್ಲಾಧ್ಯಕ್ಷರಾದ ಸುರೇಶ ಚನ್ನಶೆಟ್ಟಿ ಅಧ್ಯಕ್ಷತೆ ವಹಿಸಿ, ಮಕ್ಕಳೆ ನಮಗೆ ದೇವರು, ಅವರ ಬದುಕೆ ನಮಗೊಂದು ಪ್ರೇರಣೆ. ಅರ್ಜಿ ಹಾಕಿ ಯಾರೊಬ್ಬರು ಜನ್ಮ ತಾಳೊದಿಲ್ಲ.ಬುದ್ಧಿಮಾಂದ್ಯತೆಯ ಮಕ್ಕಳಿಗೆ ಬಸವ ಪಂಚಮಿ ನಿಮಿತ್ತ ಹಣ್ಣು ಹಾಲು ವಿತರಿಸಿ ಅವರೆಲ್ಲರ ಆರೋಗ್ಯ ಕಾಪಾಡುವುದರ ಜೊತೆಗೆ ಸಂಪ್ರದಾಯಕ್ಕಿಂತ ಸತ್ಯ ಶ್ರೇಷ್ಠ ಎಂಬ ತತ್ತ್ವ ಸಿದ್ಧಾಂತ ಜನಮಾನಸದಲ್ಲಿ ನೆಲೆಯೂರಲು ಕಳೆದ ಇಪ್ಪತ್ತೈದು ವರ್ಷಗಳಿಂದ ಇಂಥ ವೈವಿಧ್ಯಮಯ ಕಾರ್ಯಕ್ರಮ ಮಾಡಲಾಗುತ್ತಿದೆ. ಇಂದು ಅನೀಲ ಬೆಲ್ದಾರ ಸರ್ ನಡೆಸುತ್ತಿರುವ ಸದರಿ ಸಂಸ್ಥೆ ಒಳ್ಳೆಯ ದಾಗಿದ್ದು, ಮಕ್ಕಳು ದಿನೇ ದಿನೇ ಸಹಜ ಸ್ಥಿತಿಗೆ ತರುತ್ತಿರುವ ಸಿಬ್ಬಂದಿಗಳ ಕಾರ್ಯ ಸ್ತುತ್ಯಾರ್ಹ ಎಂದು ತಮ್ಮ ವಿಚಾರ ವ್ಯಕ್ತಪಡಿಸಿದರು. ಕಾರ್ಯಕ್ರಮದ ಸಾನಿಧ್ಯ ವಹಿಸಿದ ಪೂಜ್ಯ ಶ್ರೀ ಬಸವಮಹಾಂತ ಸ್ವಾಮಿಗಳು ಸಿರಸಂಗಿ ಮಠ ಬೆಳಗಾವಿ ಆಶೀರ್ವಚನ ನೀಡುತ್ತ... ಇಂದು ವೈಚಾರಿಕ ವೈಜ್ಞಾನಿಕ ತತ್ತ್ವ ಜನ ಸಾಮಾನ್ಯರ ಬದುಕಿನಲ್ಲಿ ಬಂದಾಗ ತನ್ನಿಂದ ತಾನೆ ಮೂಢನಂಬಿಕೆ ಅಂಧಶ್ರದ್ಧೆ ಹೋಗಬಹುದು. ಬಸವಣ್ಣನವರ ಸಿದ್ಧಾಂತ ಒಂದು ಸಮುದಾಯಕ್ಕೆ ಸೀಮಿತವಲ್ಲ. ವಚನಗಳು ಬುದ್ಧಿ ಮಾಂದ್ಯ ಮಕ್ಕಳಿಗೆ ಕಲಿಸಿದಾಗ ಅವರ ಅಂತ ಶಕ್ತಿಯ ಜ್ಞಾನ ಹೆಚ್ಚಾಗಲು ಸಾಧ್ಯ ಎಂದರು. ಮೊದಲಿಗೆ ಮಹಿಳಾ ಬಸವ ಕೇಂದ್ರದ ಗೌರವಾಧ್ಯಕ್ಷರಾದ ಕರುಣಾ ಶೆಟಕಾರ ಪ್ರಾಸ್ತಾವಿಕವಾಗಿ ಮಾಡಿದರು. ಮೊದಲಿಗೆ ಸಿದ್ಧಾರೂಢ ಭಾಲ್ಕೆ ಸ್ವಾಗತಿಸಿದರೆ, ಆಕಾಶ ಕೋಟೆ ವಂದಿಸಿದರೆ ಶಿವಶಂಕರ ಟೋಕರೆ ನಿರೂಪಣೆ ಮಾಡಿದರು. ಹಾಲು ಹಣ್ಣುಗಳನ್ನು ನವಚೇತನ ವಿಶೇಷ ಮಕ್ಕಳಿಗೆ ವಿದ್ಯಾವತಿ ಬಲ್ಲೂರ,ಸಕಲೇಶ್ವರಿ ಚನ್ನಶೆಟ್ಟಿ,ಪಂಪಾವತಿ ಪಾಟೀಲ, ಶೀಲಾವತಿ ಶೀಲವಂತ,ಸೂಗಮ್ಮ ನಾವದಗೇರೆ, ಶರಣಯ್ಯ ಸ್ವಾಮಿ, ಅಶೋಕ ದಿಡಗೆ, ಸೂರ್ಯಕಾಂತ ಉಪಸ್ಥಿತರಿದ್ದರು.

# ಯುವಜನರಿಗೆ ಉದ್ಯೋಗ ಒದಗಿಸುವುದೇ ಮೈಸೂರು ಸಿಪೇಟ್‌ನ ಗುರಿ: ಭೀಮಾಚಾರಿ




ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು. 29 : ಎಸ್.ಎಸ್.ಎಲ್.ಸಿ ಹಾಗೂ ಪಿ.ಯು.ಸಿ ಕಲಿತ ನಿರುದ್ಯೋಗಿ ಯುವಜನರಿಗೆ ಡಿಪ್ಲೊಮಾ ತರಬೇತಿ ನೀಡಿ ಉದ್ಯೋಗ ಒದಗಿಸುವುದೇ ಮೈಸೂರು ಸಿಪೇಟ್‌ನ ಮುಖ್ಯ ಗು–ರಿಯಾಗಿದೆ ಎಂದು ಕೇಂದ್ರಿಯ ಪೆಟ್ರೋಕೆಮಿಕಲ್ಸ್ ಎಂಜಿನಿಯರಿಂಗ್ ಮತ್ತು ತಂತ್ರಜ್ಞಾನ ಸಂಸ್ಥೆಯ ತಾಂತ್ರಿಕ ಅಧಿಕಾರಿ ಭೀಮಾಚಾರಿ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಮಂಗಳವಾರ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ಮೈಸೂರಿನಲ್ಲಿರುವ ಕೇಂದ್ರೀಯ ಪೆಟ್ರೋಕೆಮಿಕಲ್ಸ್ ಎಂಜಿನಿಯರಿಂಗ್ ಮತ್ತು ತಂತ್ರಜ್ಞಾನ ಸಂಸ್ಥೆ ಮೆಟ್ರಿಕ್ ನಂತರದ ಯುವಜನರಿಗೆ ಉದ್ಯೋಗ ಒದಗಿಸುವ ಭರವಸೆಯ ಕೇಂದ್ರವಾಗಿದೆ. ಐದು ದಶಕಗಳಿಗಿಂತ ಹೆಚ್ಚಿನ ಹೆಮ್ಮೆಯ ಇತಿಹಾಸ ಹೊಂದಿರುವ ಸಿಪೆಟ್ ಸಂಸ್ಥೆಯು ಭಾರತ ಸರ್ಕಾರದ ರಸಾಯನ ಪೆಟ್ರೋರಸಾಯನ ಮತ್ತು ರಸಗೊಬ್ಬರ ಸಚಿವಾಲಯದ ಸ್ವಾಯತ್ತ ಸಂಸ್ಥೆಯಾಗಿದೆ. ಪ್ಲಾಸ್ಟಿಕ್ ಉತ್ಪನ್ನಗಳು ದೇಶದ ಪ್ರಗತಿಗೂ ತಮ್ಮದೇ ಆದ ಕೊಡುಗೆ ನೀಡುತ್ತಿವೆ. ಹಾಗಾಗಿ ಇವುಗಳ ಉತ್ಪನ್ನಗಳ ತಯಾರಿ ಉತ್ತೇಜಿಸಲು ಕೇಂದ್ರ ಸರ್ಕಾರವು ಈ ಸಂಸ್ಥೆಯನ್ನು 1968 ಸ್ಥಾಪಿಸಿದೆ. 1991ರಲ್ಲಿ ಕರ್ನಾಟಕದ ಮೈಸೂರಲ್ಲಿ ಆರಂಭವಾಯಿತು.ಪಾಲಿಮರ್/ಪ್ಲಾಸ್ಟಿಕ್ ಕೈಗಾರಿಕೆ ಕುರಿತ ಕೋರ್ಸ್‌ಗಳನ್ನು ಹೊಂದಿರುವ ಏಕೈಕ ಶಿಕ್ಷಣ ಸಂಸ್ಥೆ ಇದು. ಕೇಂದ್ರಸರ್ಕಾರದ ರಾಸಾಯನಿಕ ಮತ್ತು ರಸಗೊಬ್ಬರ ಇಲಾಖೆ ಸ್ಥಾಪಿಸಿದ ದೇಶದ 40 ಸಂಸ್ಥೆಗಳಲ್ಲಿ ಇದು ಕೂಡ ಒಂದು. ಕರ್ನಾಟಕದ ಯುವಕ ಯುವತಿಯರಿಗೆ ಇದು ಒಂದು ವರದಾನವಾಗಿದೆ.ವಿವಿಧಪರಿಕರಗಳ ಉತ್ಪಾದನೆ ಹಾಗೂ ಸಂರಕ್ಷಣಾ ಘಟಕಗಳಿಗೆ ಕೊಂಡಿಯಾಗಿ ಕಾರ್ಯನಿರ್ವಹಿಸುತ್ತಿರುವ ಸಿಪೆಟ್ ಸ್ವಾಯತ್ತ ಸಂಸ್ಥೆಯಾಗಿ ಬೆಳೆದಿದೆ ಎಂದು ವಿವರಿಸಿದರು.

ವಿಜ್ಞಾನ, ತಂತ್ರಜ್ಞಾನ, ವೈದ್ಯಕೀಯ,ಕೃಷಿ,ಆರೋಗ್ಯ, ಸಾರಿಗೆ ಹೀಗೆ ಎಲ್ಲಾ ಕ್ಷೇತ್ರಗಳಲ್ಲೂ ಪಾಲಿಮರ್/ಪ್ಲಾಸ್ಟಿಕ್ಸ್ ಆವಶ್ಯಕತೆ ಇದ್ದೇ ಇದೆ. ಇಂಥ ಪ್ಲಾಸ್ಟಿಕ್ಸ್ ಲಕ್ಷಾಂತರ ಜನರಿಗೆ ಉದ್ಯೋಗ ಸೃಷ್ಟಿಸಿ ಕೊಡಬಲ್ಲದು. ಅದ–ಕ್ಕೆ ದಾರಿ ಮಾಡಿಕೊಡುತ್ತಿದೆ ಶೈಕ್ಷಣಿಕ, ತಂತ್ರಜ್ಞಾನ ಮತ್ತು ಸಂಶೋಧನೆ ವ್ಯವಸ್ಥೆಯಲ್ಲಿ ಸ್ನಾತಕ ಡಿಪ್ಲೋಮಾ ಮತ್ತು ಡಿಪ್ಲೋಮಾ ತರಬೇತಿ ನೀಡಲಾಗುತ್ತಿದೆ. ಭಾರತದ ಕೈಗಾರಿಕಾ ಬೇಡಿಕೆಗೆ ಹಾಗೂ ಕೌಶಲ್ಯ ಬೆಳವಣಿಗೆಗೆ ಅನುಗುಣವಾಗಿ ಶೈಕ್ಷಣಿಕ ತರಬೇತಿ ನೀಡಲಾಗುತ್ತಿದೆ ಕರ್ನಾಟಕದ ವಿದ್ಯಾರ್ಥಿಗಳು ಪೆಟ್ರೋಕೆಮಿಕಲ್ಸ್ /ಪ್ಲಾಸ್ಟಿಕ್ಸ್ /ಪಾಲಿಮರ್ ಸಂಬಂಧಿತ ಕೈಗಾರಿಕಾ ವಲಯದಲ್ಲಿ ಜಾಗತಿಕವಾಗಿ ಗುರುತಿಸಲ್ಪಟ್ಟಿದ್ದಾರೆ ಎಂದರು.

ತ್ಯಾಜ್ಯ ಸಂಸ್ಕರಣೆಗೆ ಹೊಸ ತಂತ್ರಜ್ಞಾನ ಅಭಿವೃದ್ಧಿಪಡಿಸಿರುವ ಹೆಗ್ಗಳಿಕೆ ಸಿಪೆಟ್ ನಮ್ಮ. ವೇಸ್ಟ್ ಸಂಸ್ಮರಣಾ ಘಟಕ ಇದಾಗಿದೆ. ಪ್ಲಾಸ್ಟಿಕ್ ತ್ಯಾಜ್ಯ–ಕ್ಕೆ ಸಂಪೂರ್ಣ ಪರಿಹಾರ ದೊರಕಿಸಿಕೊಡುವ ನಿಟ್ಟಿನಲ್ಲಿ ಪರಿಸರಸ್ನೇಹಿ ಮಾದರಿಯಲ್ಲಿ.. ತ್ಯಾಜ್ಯ ಸಂಸ್ಕರಿಸುವ ಮತ್ತು ಮರುಬಳಕೆ ಮಾಡುವ ಕೌಶಲ್ಯ ತರಬೇತಿ ನೀಡಲಾಗುತ್ತದೆ. ಎಸ್ಸೆಸ್ಸೆಲ್ಸಿ ಪಿಯುಸಿ ಪರೀಕ್ಷೆ ಮುಗಿದ ನಂತರ ಬಹುತೇಕ ವಿದ್ಯಾರ್ಥಿಗಳನ್ನು ಕಾಡುವ ಒಂದೇ ಪ್ರಶ್ನೆ ಮುಂದೇನು ? ಎಲ್ಲರ ಚಿತ್ತವೂ ಒಳ್ಳೆಯ ಉದ್ಯೋಗ ಮಾಡುವುದೇ ಆಗಿದ್ದರೂ, ಕಣ್ಣೆದುರು ಬಂದು ನಿಲ್ಲುವುದು ಮಾತ್ರ ಪ್ರಚಲಿತದಲ್ಲಿರುವ ಕೆಲವೇ ಕೆಲವು ಕೋರ್ಸುಗಳು. ಆದರೆ ನಮ್ಮ ನಡುವೆಯೇ ಇರುವ, ಡಿಪ್ಲೋಮಾ ಕೊನೆಯ ಸೆಮಿಸ್ಟರ್ ನಲ್ಲಿ ಇಂಟರ್ನ್‌ಶಿಪ್ ಮೂಲಕ ಉದ್ಯೋಗ ದೊರಕಿಸುವ ಹಲವು ಕೋರ್ಸುಗಳು ಗಮನಕ್ಕೆ ಬಾರದೆ ಹೋಗುತ್ತಿವೆ. ಅಂಥ ಕೋರ್ಸುಗಳಲ್ಲಿ ಮೈಸೂರಿನಲ್ಲಿರುವ ಕೇಂದ್ರೀಯ ಪೆಟ್ರೋಕೆಮಿಕಲ್ಸ್ ಎಂಜಿನಿಯರಿಂಗ್ ಮತ್ತು ತಂತ್ರಜ್ಞಾನ ಸಂಸ್ಥೆ(ಸಿಪೆಟ್) ನೀಡುತ್ತಿರುವ ಡಿಪ್ಲೋಮ ಕೂಡ ಒಂದು ಎಂದು.

ಇಂದು ಪ್ಲಾಸ್ಟಿಕ್ ಮಾನವ ಜೀವನದ ಅವಿಭಾಜ್ಯ ನಿರ್ವಹಣೆಯಾಗಿದೆ. ಪ್ಲಾಸ್ಟಿಕ್ ಇಲ್ಲದೇ ಜೀವನ ಸಾಧ್ಯವಿಲ್ಲ ಎನ್ನುವಂತಾಗಿದೆ. ಲೋಹದ ಬೆಲೆ ಮತ್ತು ಕೊರತೆ ಹೆಚ್ಚಿದಂತೆಲ್ಲಾ ಪ್ರತಿ ಕ್ಷೇತ್ರದಲ್ಲೂ ಪ್ಲಾಸ್ಟಿಕ್ ನ ಬಳಕೆ ದಿನೇ ದಿನೇ ಅಧಿಕಗೊಳ್ಳುತ್ತಿದೆ, ಉತ್ತಮ ಗುಣಮಟ್ಟದ ಪ್ಲಾಸ್ಟಿಕ್ ಬಳಕೆಯಿಂದ ತೊಂದರೆಗಳಿಲ್ಲ. ಈ ಹಿನ್ನಲೆಯಲ್ಲಿ ಇಂದು ಅನೇಕ ಕ್ಷೇತ್ರಗಳಲ್ಲಿ ಪ್ಲಾಸ್ಟಿಕ್ ಬಳಕೆ ಕಾಣುತ್ತಿದ್ದೇವೆ, ಆಟೋಮೊಬೈಲ್, ಕೃಷಿ, ಆರೋಗ್ಯ, ಶಿಕ್ಷಣ, ಸಾರಿಗೆ, ವಿದ್ಯುನ್ಮಾನ ಮುಂತಾದ ಕ್ಷೇತ್ರಗಳಲ್ಲಿ ಪ್ಲಾಸ್ಟಿಕ್ ಬಳಕೆ ಅಧಿಕವಾಗಿದೆ. ಹಾಗಾಗಿ ಪ್ಲಾಸ್ಟಿಕ್ ಆಧಾರಿತ ಕೋರ್ಸ್ ಗಳಿವೆ ಎಂಬುದು ಎಷ್ಟು ಆಶ್ಚರ್ಯವೋ, ಇಂತಹ ಕೋರ್ಸ್ ಗಳು ಕೇಂದ್ರ ಸರ್ಕಾರದ ಅಂಗ ಸಂಸ್ಥೆಯಿಂದಲೇ ನಡೆಯುತ್ತಿವೆ ಎಂಬುದೂ ಸಂತಸದ ಸಂಗತಿ. ಮೈಸೂರಿನಲ್ಲಿರುವ ಕೇಂದ್ರೀಯ ಪೆಟ್ರೋಕೆಮಿಕಲ್ಸ್ ಎಂಜಿನಿಯರಿಂಗ್ ಮತ್ತು ತಂತ್ರಜ್ಞಾನ ಸಂಸ್ಥೆಯು ಇಂತಹ ಅನೇಕ ಕೋರ್ಸ್ ಗಳನ್ನು ನೀಡುವ ಮೂಲಕ ಯುವಕರಲ್ಲಿ ವೃತ್ತಿ ಕೌಶಲ್ಯ ಹೆಚ್ಚಿಸಿ ಕೈಗಾರಿಕಾ ಬೇಡಿಕೆಗೆ ಅನುಗುಣವಾಗಿ ಶಿಕ್ಷಣ ನೀಡಿ ಸ್ವಾಲಂಬಿಗಳನ್ನಾಗಿ ಮಾಡುವ ಉದ್ದೇಶ ಹೊಂದಿದೆ ಎಂದರು.

ಮೈಸೂರು ಸಿಪೇಟ್ ಸಹಾಯಕ ತಾಂತ್ರಿಕ ಅಧಿಕಾರಿ ಸದಾಶಿವಪ್ಪ ಮಾತನಾಡಿ, ಸಂಸ್ಥೆಯಲ್ಲಿ ಡಿಪ್ಲೋಮಾ ಇನ್ ಪ್ಲಾಸ್ಟಿಕ್ಸ್ ಟೆಕ್ನಾಲಜಿ ಹಾಗೂ ಡಿಪ್ಲೋಮಾ ಇನ್ ಪ್ಲಾಸ್ಟಿಕ್ಸ್ ಮೌಲ್ಡ್ ಟೆಕ್ನಾಲಜಿ ಕೋರ್ಸ್ಗಳು ಎಸ್.ಎಸ್.ಎಲ್.ಸಿ ಪಾಸಾದ ವಿದ್ಯಾರ್ಥಿಗಳಿಗೆ 3 ವರ್ಷ ಹಾಗೂ ಪಿ.ಯು.ಸಿ ಅಥವಾ ಐಟಿಐ ಪಾಸಾದ ವಿದ್ಯಾರ್ಥಿಗಳಿಗೆ 2 ವರ್ಷ ತರಬೇತಿ ನೀಡಲಾಗುತ್ತದೆ. ವಸತಿ ಸಹಿತ ತರಬೇತಿ ಇದಾಗಿದ್ದು, ತರಬೇತಿ ಮುಗಿಯುವ ವರೆಗೆ 1 ಲಕ್ಷ 40 ಸಾವಿರ ರುಪಾಯಿಯಲ್ಲಿ ವಸತಿ ಹಾಗೂ ಊಟ ಸಹಿತ ತರಬೇತಿ ನೀಡಲಾಗುವುದು. ತರಬೇತಿ ಮುಗಿದ ಬಳಿಕ ಕಡ್ಡಾಯವಾಗಿ ಉದಸ್ಯೋಗ ಒದಗಿಸುವುದು ಸಿಪೇಟ್ ಸಂಸ್ಥೆಯ ಪ್ರಥಮ ಆದ್ಯತೆ–ಯಾಗಿದೆ ಎಂದರು.

2025–26 ಸಾಲಿನ ಉದ್ಯೋಗ ಖಚಿತ ಡಿಪ್ಲೊಮಾ ಕೋರ್ಸ್ ಗಳಿಗೆ ಪ್ರವೇಶ ಪ್ರಾರಂಭಗೊಂಡಿದೆ.ಮೈಸೂರಿನ ಸಿಪೆಟ್ ನ ಕೋರ್ಸ್ ಗಳಿಗೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವಾಗ ಕರ್ನಾಟಕದವರಿಗೆ ಆದ್ಯತೆ ನೀಡಲಾಗುತ್ತದೆ. ಇಲ್ಲಿ ವ್ಯಾಸಂಗ ಮಾಡಿದ ಪ್ರತಿಯೊಬ್ಬ ವಿದ್ಯಾರ್ಥಿಗೂ ಉದ್ಯೋಗ ದೊರಕಿದೆ. ಅನೇಕರು ಸ್ವ–ಉದ್ಯೋಗ ಆರಂಭಿಸಿದ್ದಾರೆ,

ಇಲ್ಲಿ ವಿದ್ಯಾರ್ಥಿನಿಯರಿಗೆ ಹಾಗೂ ವಿದ್ಯಾರ್ಥಿಗಳಿಗೆ ಹಾಸ್ಟೆಲ್ ವ್ಯವಸ್ಥೆಯಿದೆ. ವಿದ್ಯಾರ್ಥಿ ವೇತನ ಸೌಲಭ್ಯವು ಇದೆ. ಪ್ರತಿ ಸೆಮಿಸ್ಟರ್ ಗೆ ರೂ.20 ಸಾವಿರದಷ್ಟು ಖರ್ಚು ಬರುತ್ತದೆ. ಪ್ಲಾಸ್ಟಿಕ್ ವೈವಿಧ್ಯಮಯ ಬಳಕೆ, ಪ್ಲಾಸ್ಟಿಕ್ ಮೌಲ್ಡಿಂಗ್, ಪ್ಲಾಸ್ಟಿಕ್ ಸಂಸ್ಕರಣೆ, ಪ್ಲಾಸ್ಟಿಕ್‌ನ ಗುಣಮಟ್ಟ ಪರಿಶೀಲನೆ, ಆಧುನಿಕ ವಿನ್ಯಾಸದಲ್ಲಿ ಪ್ಲಾಸ್ಟಿಕ್ ವಸ್ತುಗಳ ತಯಾರಿಕೆ, ಪ್ಲಾಸ್ಟಿಕ್ ಮರುಬಳಕೆ ವಿಧಾನ, ಪ್ಲಾಸ್ಟಿಕ್ ಪೈಪ್‌ಗಳು ಮತ್ತು ಇನ್ನಿತರೆ ವಸ್ತುಗಳ ತಯಾರಿಕೆ, ಮಾರುಕಟ್ಟೆ ಹಾಗೂ ದರ ಪರಿಷ್ಕರಣೆ ಇತ್ಯಾದಿಗಳ ಬಗ್ಗೆ ತರಬೇತಿ ನೀಡಲಾಗುವುದು. ಆಟೋಮೊಬೈಲ್ಸ್ ಕೈಗಾರಿಕೆಗಳು, ವಾಹನದ ಬಿಡಿ ಭಾಗಗಳನ್ನು ತಯಾರಿಸುವ ಉದ್ಯಮಗಳು, ಪಿ.ವಿ.ಸಿ ಪೈಪ್ ತಯಾರಿಕಾ ಕಂಪೆನಿಗಳು ಮತ್ತು ವಿದ್ಯುನ್ಮಾನ ಪ್ಲಾಸ್ಟಿಕ್ ವಸ್ತು ಉತ್ಪಾದನಾ ಕಂಪೆನಿಗಳಲ್ಲಿ, ಆಹಾರೋದ್ಯಮ ಮತ್ತು ವೈದ್ಯಕೀಯ ಕ್ಷೇತ್ರದಲ್ಲಿ, ಆಗ್ರೊ ಕೆಮಿಕಲ್ಸ್ ಅಂಡ್ ಫರ್ಟಿಲೈಸರ್ ಕ್ಷೇತ್ರ, ಎಲೆಕ್ಟ್ರಿಕಲ್ಸ್ ಎಲೆಕ್ಟ್ರಾನಿಕ್ಸ್ ಕ್ಷೇತ್ರ, ಆಹಾರೋದ್ಯಮ ಕ್ಷೇತ್ರದಲ್ಲಿ ಉದ್ಯೋಗ ಒದಗಿಸಲಾಗುತ್ತದೆ. ಆದ ಕಾರಣ ಬೀದರ್ ಜಿಲ್ಲೆಯ ಆಸಕ್ತ ಎಸ್.ಎಸ್.ಎಲ್.ಸಿ, ಪಿ.ಯು.ಸಿ ಹಾಗೂ ಐಟಿಐ ಪಾಸಾದ ವಿದ್ಯಾರ್ಥಿಗಳು ಈ ಅವಕಾಶ ತಮ್ಮದಾಗಿಸಿಕೊಳ್ಳಬೇಕು.

ಹೆಚ್ಚಿನ ಮಾಹಿತಿಗಾಗಿ 9663613275 /9483431968 /0821–2516322 ಈ ದೂರವಾಣಿಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಸದಾಶಿವಪ್ಪ ತಿಳಿಸಿದರು.

# ಸಿರುಗುಪ್ಪ ನಗರಸಭೆ: ವಿವಿಧ ಸೌಲಭ್ಯಗಳಿಗಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ

ಬಳ್ಳಾರಿ,ಜು.29–ಸಿರುಗುಪ್ಪ ನಗರಸಭೆ ವ್ಯಾಪ್ತಿಯಲ್ಲಿ 2019–20 ರಿಂದ 2025–26ನೇ ಸಾಲಿನ ಎಸ್.ಎಫ್.ಸಿ ಯೋಜನೆ ಮತ್ತು ನಗರಸಭೆ ನಿಧಿಯಡಿ ಶೇ.24.10 (ಎಸ್‌ಸಿಎಸ್‌ಪಿ,ಟಿಎಸ್‌ಪಿ),ಶೇ.7.25 ಮತ್ತು ಶೇ.5 ಅನುದಾನದಡಿ ವಿವಿಧ ಯೋಜನೆಗಳಡಿ ಸೌಲಭ್ಯಗಳಿಗಾಗಿ ಸಿರುಗುಪ್ಪ ನಗರದ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಆಗಸ್ಟ್ 25 ಕೊನೆಯ ದಿನ.

**ಸೌಲಭ್ಯಗಳು:**

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವರ್ಗದ ಕಾನೂನು ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪುಸ್ತಕ ಖರೀದಿಸಲು ಸಹಾಯಧನ ಮತ್ತು ಎಂ.ಬಿ.ಬಿ.ಎಸ್ ಹಾಗೂ ಬಿ.ಇ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ಖರೀದಿಸಲು ಸಹಾಯಧನ.

ಪರಿಶಿಷ್ಟ ಪಂಗಡ ವರ್ಗದ ಅರ್ಹರಿಗೆ ವೈಯಕ್ತಿಕ ಶೌಚಾಲಯಕ್ಕೆ ನಿರ್ಮಾಣಕ್ಕೆ ಸಹಾಯಧನ.

ಇತರೆ ಹಿಂದುಳಿದ ವರ್ಗಗಳ ಕಾನೂನು ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪುಸ್ತಕ ಖರೀದಿಸಲು ಮತ್ತು ಎಂ.ಬಿ.ಬಿ.ಎಸ್ ಹಾಗೂ ಬಿ.ಇ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ಖರೀದಿಸಲು, ಪಕ್ಕಾ ಮನೆ ನಿರ್ಮಾಣಕ್ಕೆ, ವೈಯಕ್ತಿಕ ಶೌಚಾಲಯಕ್ಕೆ ನಿರ್ಮಾಣಕ್ಕೆ ಸಹಾಯಧನ. ವಿಶೇಷ ಚೇತನರಿಗೆ ಪಕ್ಕಾ ಮನೆ ನಿರ್ಮಾಣ, ಶೌಚಾಲಯ ನಿರ್ಮಾಣ ಮತ್ತು ಹೊಸದಾಗಿ ವಾರ್ಷಿಕ ಜೀವವಿಮೆ, ಎಲೆಕ್ಟ್ರಿಕಲ್ ದ್ವಿಚಕ್ರ ಸ್ಕೂಟಿ ಪಡೆಯಲು ಸಹಾಯಧನ ನೀಡಲಾಗುವುದು.

**ಬೇಕಾದ ದಾಖಲೆ:**

ನಿಗದಿತ ಅರ್ಜಿ ನಮೂನೆ, ರೇಷನ್ ಕಾರ್ಡ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಆಧಾರ್ ಕಾರ್ಡ್, ಐ.ಡಿ ಕಾರ್ಡ್, 2 ಫೋಟೋ, ಸಮಾಜ ಕಲ್ಯಾಣ ಇಲಾಖೆಯಿಂದ ಯಾವುದೇ ಸೌಲಭ್ಯ ಪಡೆಯದೇ ಇರುವ ಬಗ್ಗೆ ದೃಢೀಕರಣ ಪತ್ರ, ವ್ಯಾಸಂಗ ಪ್ರಮಾಣ ಪತ್ರ, ಬಿ.ಇ, ಎಂ.ಬಿ.ಬಿ.ಎಸ್ ಮಾಡುತ್ತಿರುವ ಬಗ್ಗೆ ದೃಢೀಕರಣ ಪತ್ರ, ಪಕ್ಕಾ ಮನೆ/ಶೌಚಾಲಯ ನಿರ್ಮಾಣಕ್ಕಾಗಿ ಅರ್ಜಿದಾರರ ಹೆಸರಿನಲ್ಲಿರುವ ಆಸ್ತಿಯ ದಾಖಲೆಗಳು, ಅಂಗವಿಕಲತೆ ಇದ್ದಲ್ಲಿ ವೈದ್ಯಾಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ ಹಾಗೂ ಇತರೆ ದಾಖಲೆಗಳು ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಸಿರುಗುಪ್ಪ ನಗರಸಭೆ ಕಚೇರಿಗೆ ಭೇಟಿ ನೀಡಿ ಸಂಪರ್ಕಿಸಬಹುದು ಎಂದು ಸಿರುಗುಪ್ಪ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹೆಚ್ಚಿನ ಬೆಲೆಗೆ ರಸಗೊಬ್ಬರ ಮಾರಾಟ ಮಾಡುವ ಅಂಗಡಿಗಳ ಪರವಾಗಿ ರದ್ದು– ಸಚಿವ ಶಿವರಾಜ್ ಎಸ್. ತಂಗಡಗಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕೊಪ್ಪಳ ಜಿಲ್ಲೆಯಲ್ಲಿ ನಿಗದಿಪಡಿಸಿದ ದರಕ್ಕಿಂತ ಹೆಚ್ಚಿನ ಬೆಲೆಗೆ ರಸಗೊಬ್ಬರ ಮಾರಾಟ ಮಾಡುವುದು ಕಂಡು ಬಂದರೆ ಅಂತಹ ರಸಗೊಬ್ಬರ ಅಂಗಡಿಗಳ ಪರವಾನಗಿ ರದ್ದು ಪಡಿಸುವುದರ ಜೊತೆಗೆ ಕ್ರಿಮೀನಲ್ ಮೊಕದ್ದಮೆ ದಾಖಲಿಸಲಾಗುವುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ್ ಎಸ್. ತಂಗಡಗಿ ಹೇಳಿದರು.

ಅವರು ಮಂಗಳವಾರ ಕೊಪ್ಪಳ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಜಿಲ್ಲೆಯ ರಸಗೊಬ್ಬರ ಮಾರಾಟಗಾರರಿಗೆ ಕರೆದ ಸಭೆಯಲ್ಲಿ ಅಧ್ಯಕ್ಷತೆವಹಿಸಿ ಮಾತನಾಡಿದರು.

ರಸಗೊಬ್ಬರ ಮಾರಾಟಗಾರರು ಅನಧೀಕೃತವಾಗಿ ರಸಗೊಬ್ಬರವನ್ನು ಸ್ಟಾಕ ಇಟ್ಟುಕೊಂಡು ಮಾರಾಟ ಮಾಡಭಾರದು ಮತ್ತು ನಿಗದಿತ ದರಕ್ಕಿಂತ ಒಂದೇ ಒಂದು ರೂ ಹೆಚ್ಚಿನ ಬೆಲೆಗೆ ಮಾರಾಟ ಮಾಡುವುದು ಕಂಡು ಬಂದರೆ ಅಂತಹವರ ವಿರುದ್ಧ ಮುಲಾಜಿಲ್ಲದೆ ಕ್ರಮ ಜರುಗಿಸಲಾಗುವುದು. ರಸಗೊಬ್ಬರ ಅಂಗಡಿಗಳ ಮುಂದೆ ರೈತರಿಗೆ ಕ್ಯೂನಿಲ್ಲಿಸಿ ಡಿಮಾಂಡ್ ಮಾಡುವ ಕೆಲಸವನ್ನು ಮಾಡಭಾರದು ಎಂದು ಹೇಳಿದರು.

ಜಿಲ್ಲೆಯಲ್ಲಿ ರಸಗೊಬ್ಬರ ಸುಸೂತ್ರವಾಗಿ ವಿತರಣೆಯಾಗುವ ಸಂಬಂಧ ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳು.ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ನಿಗಾ ವಹಿಸಲಿದ್ದು ತಾಲ್ಲೂಕು ಮಟ್ಟದಲ್ಲಿ ತಹಶಿಲ್ದಾರರು ಹಾಗೂ ಕೃಷಿ ಇಲಾಖೆಯ ಅಧಿಕಾರಿಗಳನ್ನೊಳಗೊಂಡು ನೋಡಲ್ ಅಧಿಕಾರಿಗಳನ್ನು ನಿಯೋಜನೆ ಮಾಡಲಾಗುತ್ತಿದೆ ಎಂದು ಹೇಳಿದರು.

ಸೊಸೈಟಿಗಳ ಜೊತೆಗೆ ಎಲ್ಲಾ ಡೀಲರಗಳಿಗೆ ರಸಗೊಬ್ಬರ ಕೊಡಲು ಹೇಳಲಾಗಿದೆ. ರೈತರು ಯಾರು ಆತಂಕ ಪಡಬೇಕಾಗಿಲ್ಲ. ರೈತರು ತಮ್ಮ ಅವಶ್ಯಕತೆತಕ್ಕಂತೆ ರಸಗೊಬ್ಬರ ತೆಗೆದುಕೊಂಡು ಹೋಗಬೇಕು. ಯಾರು ಭಯಬೀತರಾಗಿ ಮುಂದೆ ಗೊಬ್ಬರ ಸಿಗುತ್ತದೆ ಇಲ್ಲ ಎಂದು ಗಾಬರಿಯಾಗಬೇಕಿಲ್ಲ. ಈ ತಿಂಗಳ 31 ತಾರೀಖಿಗೆ 800 ಮೆಟ್ರಿಕ್ ಟನ್ ಹಾಗೂ ಆಗಸ್ಟ್ 1 ಮತ್ತು 3ನೇ ತಾರೀಖಿಗೆ ತಲಾ 1200 ಮೇಟ್ರಿಕ್ ಟನ್ ರಸಗೊಬ್ಬರ ಜಿಲ್ಲೆಗೆ ಬರಲಿದೆ. ಹಾಗಾಗಿ ಈ ಮಾಹಿತಿಯನ್ನು ರೈತರಿಗೆ ತಿಳಿಸಬೇಕೆಂದು ರಸಗೊಬ್ಬರ ವಿತರಕರಿಗೆ ಸಚಿವರು ಹೇಳಿದರು.

ಜಿಲ್ಲೆಯಲ್ಲಿ ನಕಲಿ ಗೊಬ್ಬರ ಮಾರಾಟ ಮಾಡುವುದು ಕಂಡು ಬಂದರೆ ಸಹಿಸುವುದಿಲ್ಲ. ಈಗಾಗಲೇ ಒಂದು ನಕಲಿ ಗೊಬ್ಬರ ಮಾರಾಟ ಪ್ಯಾಕ್ಟರಿ ಸೀಜ್ ಮಾಡಲಾಗಿದೆ. ರೈತರಿಗೆ ಹಾನಿಯಾದರೆ ನಾವು ಸಹಿಸಿಕೊಳ್ಳುವುದಿಲ್ಲ. ರೈತರು ಯಾರು ಜಿಲ್ಲೆಯಲ್ಲಿ ಆತಂಕ ಪಡಬೇಕಿಲ್ಲ. ಆಗಸ್ಟ್ ತಿಂಗಳಲ್ಲಿ ನಮಗೆ ಸಾಕಾಗುವಷ್ಟು ರಸಗೊಬ್ಬರ ಜಿಲ್ಲೆಗೆ ಬರಲಿದೆ. ರೈತರಿಗೆ ಸರಿಯಾಗಿ ರಸಗೊಬ್ಬರ ವಿತರಣೆಯಾಗುತ್ತಿರುವ ಮಾಹಿತಿಯನ್ನು ಕೃಷಿ ಇಲಾಖೆಯ ಅಧಿಕಾರಿಗಳು ಆಗಾಗ ನನಗೆ ನೀಡಬೇಕೆಂದು ಹೇಳಿದರು.

ಸಭೆಯಲ್ಲಿ ಕೊಪ್ಪಳ ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ, ಜಿಲ್ಲಾ ಪಂಚಾಯತ್ ಮುಖ್ಯಕಾಯನಿರ್ವಾಹಕ ಅಧಿಕಾರಿ ವರ್ಣಿತ ನೇಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ಧಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಕೃಷಿ ಇಲಾಖೆ ಜಂಟಿ ನಿರ್ದೇಶಕ ರುದ್ರೇಶಪ್ಪ ಟಿ.ಎಸ್., ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ರೆಡ್ಡಿ ಶ್ರೀನಿವಾಸ, ಉಪಾಧ್ಯಕ್ಷರಾದ ಮಂಜುನಾಥ ಗೊಂಡಬಾಳ, ಕೃಷಿ ಇಲಾಖೆ ಉಪ ನಿರ್ದೇಶಕ ಎಲ್.ಸಿದ್ದೇಶ್ ಇತರೆ ಸೇರಿದಂತೆ ಇಲಾಖೆಗಳ ಅಧಿಕಾರಿಗಳು, ವಿವಿಧ ತಾಲ್ಲೂಕುಗಳ ಕೃಷಿ ಅಧಿಕಾರಿಗಳು, ರಸಗೊಬ್ಬರ ಮಾರಾಟಗಾರರು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

ಕರ್ನಾಟಕ ಸರ್ಕಾರ

(ಸಹಕಾರ ಇಲಾಖೆ)

**ಸಹಕಾರ ಸಂಘಗಳ ಉಪ ನಿಬಂಧಕರು (ನಿ.,441), ಸೌಹಾರ್ದ ಸಹಕಾರಿಗಳ ದಾವಾ ಪಂಚಾಯ್ತಿ, ನ್ಯಾಯಾಲಯ, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ.** "ಸೌಹಾರ್ದ ಸಹಕಾರ ಸೌಧ" #68, 1ನೇ ಮಹಡಿ, 17&18ನೇ ಅಡ್ಡರಸ್ತೆ ಮಧ್ಯೆ, ಮಾರ್ಗೋಸಾ ರಸ್ತೆ, ಮಲ್ಲೇಶ್ವರಂ, ಬೆಂಗಳೂರು–560055.

**ವಾದಿ:**
**ಮುಖ್ಯ ಕಾರ್ಯನಿರ್ವಾಹಕರು**
**ಶ್ರೀ ಮಾಣಿಕಪ್ರಭು ಪತ್ತಿನ ಸೌಹಾರ್ದ ಸಹಕಾರಿ ನಿ.,**
ಗಾದಾ ಕಾಂಪ್ಲೆಕ್ಸ್, ತಾ.ಹುಮನಾಬಾದ ಜಿ.ಬೀದರ–585330,
**ಪ್ರತಿವಾದಿಗಳು:**
**ವ್ಯಾಜ್ಯ ಸಂಖ್ಯೆ: ಡಿ.ಆರ್.ಡಿ/ಕ.ರಾ.ಸೌ.ಸಂ.ಸ.ನಿ.,/145/2024–25**

1. **ಶ್ರೀ ದತ್ತು ತಂದೆ ವೆಂಕಟರಾವ್ ಲಗಾದೆ.**
   ಮನೆ ಸಂ–293/03, ಓತಗಿ ಹುಮನಾಬಾದ, ಜಿ.ಬೀದರ 585330.

**ಪ್ರತಿವಾದಿಗಳಿಗೆ ಪತ್ರಿಕಾ ಪ್ರಕಟಣೆ ಮೂಲಕ ನೋಟೀಸ್**

ಈ ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ನಿಮಗೆ ತಿಳಿಯಪಡಿಸುವುದನೆಂದರೆ ಈ ಮೇಲ್ಕಂಡ ಪ್ರತಿವಾದಿಗಳ ದಾವಾ ಸಂಖ್ಯೆ: ಡಿ.ಆರ್.ಡಿ/ಕ.ರಾ.ಸೌ.ಸಂ.ಸ.ನಿ.,/145/2024–25 ರಂತೆ ಸಹಕಾರ ಸಂಘಗಳ ಜಂಟಿ ನಿಬಂಧಕರು (ನಿ..441), ಸೌಹಾರ್ದ ಸಹಕಾರಿಗಳ ದಾವಾ ಪಂಚಾಯಿತಿ ನ್ಯಾಯಾಲಯದಲ್ಲಿ ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ ರಲ್ಲಿ 39 ರಡಿಯಲ್ಲಿ ದಾವೆಯನ್ನು ಸಲ್ಲಿಸಿದ್ದು, ನೀವು ಪ್ರತಿವಾದಿಯಾಗಿರುತ್ತೀರಿ, ಆದುದರಿಂದ ಈ ಮೂಲಕ ನಿಮಗೆ ತಿಳಿಯಪಡಿಸುವುದೇನೆಂದರೆ ಈ ಮೇಲ್ಕಂಡ ನ್ಯಾಯಾಲಯದ ಮುಂದೆ ದಿನಾಂಕ:31.07.2025 ರಂದು ಬೆಳ್ಳಗ್ಗೆ 11–30 ಗಂಟೆಗೆ ಸರಿಯಾಗಿ ತಾವಾಗಲಿ, ತಮ್ಮಿಂದ ನೇಮಕಗೊಂಡ ವಕೀಲರ ಮುಖಾಂತರವಾಗಲಿ ಹಾಜರಾಗಲು ಈ ಮೂಲಕ ತಿಳಿಯಪಡಿಸುತ್ತೇವೆ. ತಪ್ಪಿದಲ್ಲಿ ನಿಮ್ಮ ಗೈರು ಹಾಜರಿಯಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ಇತ್ಯರ್ಥಪಡಿಸಲಾಗುವುದು.

ಸದರಿ ಪ್ರಕಟಣೆಯನ್ನು ದಿನಾಂಕ:15.07.2025 ರಂದು ನ್ಯಾಯಾಲಯದ ಸಹಿ ಮತ್ತು ಮೊಹರಿನೊಂದಿಗೆ ನೀಡಲಾಗಿದೆ.

**ಸಹಿ/–**
ಸಹಕಾರ ಸಂಘಗಳ ಉಪ ನಿಬಂಧಕರು (ನಿ.441)
ದಾವಾ ಪಂಚಾಯ್ತಿ ನ್ಯಾಯಾಲಯ
ಕ.ರಾ.ಸೌ.ಸಂ.ಸ.ನಿ., ಬೆಂಗಳೂರು
(ನ್ಯಾಯಾಲಯದ ಆದೇಶದ ಮೇರೆಗೆ)

## ನಾಗರ ಪಂಚಮಿ ಹಬ್ಬದ ನಿಮಿತ್ತವಾಗಿ ಜೀವನ ಜೋಕಾಲಿ ಕಾರ್ಯಕ್ರಮ.



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಭಾಗ್ಯನಗರದ ಅರುಣೋದಯ ವ್ಯಸನ ಮುಕ್ತಿ ಹಾಗೂ ಪರಿವರ್ತನಾ ಕೇಂದ್ರದಲ್ಲಿ ನಾಗರ ಪಂಚಮಿ ಹಬ್ಬದ ನಿಮಿತ್ತವಾಗಿ ಶಿಬಿರಾರ್ಥಿಗಳ ಮನಪರಿವರ್ತನೆಗಾಗಿ ಜೀವನ ಜೋಕಾಲಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಅಂತರಾಷ್ಟ್ರೀಯ ಜಾನಪದ ಕಲಾವಿದರಾದ ಗವಿಸಿದ್ದಯ್ಯ ಶ್ರೀಮತಿ ಭಾಗ್ಯಶ್ರೀ ಹಳ್ಳಿಕೇರಿಮಠರವರ 5ನೇ ವರ್ಷದ ಮದುವೆ ವಾರ್ಷಿಕೋತ್ಸವದ ಅಂಗವಾಗಿ ಮಹಿಳಾ ಧ್ವನಿ ಸಂಸ್ಥೆಯ ಸಹಕಾರದೊಂದಿಗೆ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಕಾರ್ಯಕ್ರಮವನ್ನು ಸಸಿಗೆ ನೀರುಣಿಸುವ ಮೂಲಕ ಭಾರತ ಸೇವಾದಳದ ಪ್ರಧಾನ ಕಾರ್ಯದರ್ಶಿಗಳಾದ ಸೋಮಶೇಖರ್ ಹರ್ತಿಯವರು ಉದ್ಘಾಟಿಸಿ ಮಾತನಾಡಿದರು. ನಾವೆಲ್ಲರೂ ಚಟದಿಂದ ಮುಕ್ತರಾಗಿ ಸುಂದರ ಸಂಸಾರದೊಂದಿಗೆ ಸಮಾಜಕ್ಕೆ ಮಾದರಿಯಾಗಬೇಕು. ಜೀವನದಲ್ಲಿ ನಡೆಯುವ ಮನುಷ್ಯ ಎಡವಲೇಬೇಕು. ಬದುಕಿನುದ್ದಕ್ಕೂ ಬರುವ ಸಮಸ್ಯೆ ಸವಾಲುಗಳನ್ನು ಎದುರಿಸುವ ಶಕ್ತಿ ನಮ್ಮಲ್ಲಿರಬೇಕು. ಸಮಸ್ಯೆ, ಸಹವಾಸದಿಂದ ಮತ್ತು ಮಾನಸಿಕ ಖಿನ್ನತೆಯ ನೋವಿನಲ್ಲಿ ತಾವುಗಳು ಚಟಗಳಿಗೆ ಬಲಿಯಾಗಿರಬಹುದು. ಎಲ್ಲವನ್ನೂ ಮರೆತು ಸುಖ ಸಂಸಾರದೊಂದಿಗೆ ಹೊಸ ಬದುಕು ಕಟ್ಟಿಕೊಳ್ಳಿ. ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ಕೊಡಿಸುವ ಮೂಲಕ ಸಮಾಜದಲ್ಲಿ ಪ್ರಜ್ಞಾವಂತರಾಗಿ ಬದುಕೋಣ ಶುಭ ಸಮಾರಂಭಗಳ ನೆಪದಲ್ಲಿನ ಜೀವನ ಜೋಕಾಲಿ ಕಾರ್ಯಕ್ರಮವು ಪ್ರಸ್ತುತ ಸಮಾಜಕ್ಕೆ ಮಾದರಿ ಎಂದರು.

ಜಾನಪದ ಕಲಾವಿದರಾದ ಗವಿಸಿದ್ದಯ್ಯ ಹಳ್ಳಿಕೇರಿಮಠ ಅವರು ಮಾತನಾಡಿ ಸಮಾಜದಲ್ಲಿ ನಾವು ತಲೆಎತ್ತಿ ಬದುಕಬೇಕಾದರೆ ಚಟದಿಂದ ಮುಕ್ತರಾಗಬೇಕು. ಸಮಾಜಪರ ಆಲೋಚನೆ ಸಾಮಾಜಿಕ ಕಾರ್ಯಗಳ ಮೂಲಕ ಗುರುತಿಸಿಕೊಂಡು ಕೈಲಾದಷ್ಟು ಸಮಾಜಕ್ಕೆ ಕೊಡುಗೆ ನೀಡಬೇಕು. ನಾವು ಪ್ರತಿವರ್ಷವೂ ವಿಭಿನ್ನವಾಗಿ ನಮ್ಮ ವಿವಾಹ ವಾರ್ಷಿಕೋತ್ಸವವನ್ನು ಆಚರಿಸಿಕೊಳ್ಳುತ್ತಿದ್ದೇವೆ, ಜೀವನದಲ್ಲಿ ಸೋತು ಗೆದ್ದವರೆ ಹೆಚ್ಚು. ಸಮಯ ಮತ್ತು ಕಾಯಕ ತತ್ವದಿಂದ ತಮ್ಮ ಬದುಕು ಹಸನಾಗಿಸಿಕೊಳ್ಳಿ ವ್ಯಸನಮುಕ್ತರಾಗಿ ಮನಪರಿವರ್ತನೆಗೊಂಡು ಕುಟುಂಬಕ್ಕೆ ಆಧಾರಸ್ಥಂಭವಾಗಿ ಸಮಾಜಕ್ಕೆ ಮಾದರಿ ವ್ಯಕ್ತಿಯಾಗಿ ಬದುಕಿ ಎಂದರು. ಇದೇ ವೇಳೆ ಜಾನಪದ ಗೀತೆಗಳ ಮೂಲಕ ಶಿಬಿರಾರ್ಥಿಗಳನ್ನು ರಂಜಿಸಿದರು.

ಕಾರ್ಯಕ್ರಮದಲ್ಲಿ ಭೀರಪ್ಪ ಅಂಡಗಿ, ಬಿ.ಎನ್.ಹೊರಪೇಟಿ, ಮಹಿಳಾ ಧ್ವನಿ ಸಂಸ್ಥೆಯ ಸಂಸ್ಥಾಪಕಿ ಪ್ರಿಯದರ್ಶಿನಿ ಮುಂಡರಗಿಮಠ, ಶರಣಪ್ಪ ಸಿಂಗನಾಳ, ಪ್ರತಿಭಾ ಅವರು ಅನಿಸಿಕೆಯನ್ನು ಹಂಚಿಕೊಂಡರು. ಶಿಬಿರಾರ್ಥಿಗಳು ಕೂಡ ಮುಕ್ತವಾಗಿ ಮಾತನಾಡಿ ತಪ್ಪಿನ ಅರಿವಾಗಿದೆ ವ್ಯಸನಮುಕ್ತರಾಗಿ ಬದುಕುತ್ತೇವೆ ಎಂದು ತಿಳಿಸಿದರು. ಇದೇ ವೇಳೆ ಗವಿಸಿದ್ದಯ್ಯ ದಂಪತಿಗಳಿಗೆ ಹಾಗೂ ಅತಿಥಿಗಳಿಗೆ ಸನ್ಮಾನಿಸಿ ಗೌರವಿಸಲಾಯಿತು. ಕೇಂದ್ರದ ಎಲ್ಲಾ ಶಿಬಿರಾರ್ಥಿಗಳಿಗೆ ಸಿಹಿ ಹಂಚಿ ಹಬ್ಬದ ಶುಭಾಶಯ ಕೋರಲಾಯಿತು.

ರಾಜಕುಮಾರ ಕೊರವರ, ಮೈಲಪ್ಪ ಮತ್ತಿರರು ಉಪಸ್ಥಿತಿ ಇದ್ದರು.

## ಮಳಚಾಪೂರ ಸರ್ಕಾರಿ ಶಾಲೆಯ ಮಕ್ಕಳಿಗೆ ಸುಸಜ್ಜಿತ ಕೋಣೆಗಳಲ್ಲಿ ಪಾಠ – ಬಿಇಓ ಹಳ್ಳದ್



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ತಾಲೂಕಿನ ಮಳಚಾಪೂರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸುಸಜ್ಜಿತ ಕೋಣೆಗಳಲ್ಲಿ ಮಕ್ಕಳಿಗೆ ಪಾಠ ನಡೆಸಲಾಗುತ್ತಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಜಿ.ಹಳ್ಳದ್ ತಿಳಿಸಿದ್ದಾರೆ. ಈ ಕುರಿತು ಪ್ರಕಟಣೆ ಹೊರಡಿಸಿದ ಅವರು, ಮಳಚಾಪೂರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶಿಥಿಲಾವಸ್ಥೆ ಕಟ್ಟಡದ ಸೋರುತ್ತಿರುವ ಕೋಣೆಗಳಲ್ಲಿ ಪಾಠ ಮಾಡಲಾಗುತ್ತಿದೆ ಎಂದು ಅಪ ಪ್ರಚಾರ ಮಾಡಲಾಗುತ್ತಿದೆ. ಇದು ಸತ್ಯಕ್ಕೆ ದೂರವಾಗಿದೆ. ಈಗಾಗಲೆ ಕ್ಷೇತ್ರದ ಶಾಸಕರೂ ಆದ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆಯವರು ಶಾಲೆಗೆ ಹೆಚ್ಚುವರಿ ಕೋಣೆಗಳನ್ನು ಮಂಜೂರು ಮಾಡಿದ್ದಾರೆ. ಕೆಕೆಆರ್‌ಡಿಬಿ ಅನುದಾನದ ಅಡಿಯಲ್ಲಿ ಮಳಚಾಪುರ ಶಾಲೆಗೆ ಹೊಸದಾಗಿ 4 ಕೋಣೆಗಳ ಕಾಮಗಾರಿ ನಡೆಯುತ್ತಲಿದೆ. ಪ್ರಸ್ತುತ ಶಾಲೆಯಲ್ಲಿ ಸುಸ್ಥಿರವಾದ ಕೋಣೆಗಳಲ್ಲಿಯೇ ಮಕ್ಕಳಿಗೆ ಪಾಠ ಮಾಡಲಾಗುತ್ತಿದೆ. ಹೀಗಾಗಿ ಅಪಪ್ರಚಾರಕ್ಕೆ ಯಾರೂ ಮಣೆ ಹಾಕಬಾರದು. ಅಲ್ಲದೇ ಶಾಲಾ ಶಿಕ್ಷಣ ಇಲಾಖೆಯ ಆಯುಕ್ತರ ಸುತ್ತೋಲೆಯ ಪ್ರಕಾರ ಮಳೆ ಬರುವ ಸಂದರ್ಭದಲ್ಲಿ ಶಾಲೆಗಳಲ್ಲಿ ಕೈಗೊಳ್ಳಬೇಕಾದ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳ ಮಾರ್ಗಸೂಚಿಯನ್ನು ತಾಲೂಕಿನ ಎಲ್ಲಾ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಮುಖ್ಯ ಶಿಕ್ಷಕರಿಗೆ ಅಗತ್ಯ ಕ್ರಮಕ್ಕಾಗಿ ಸೂಚನೆ ನೀಡಲಾಗಿದೆ. ಅಲ್ಲದೇ ತಾಲೂಕು ಹಂತದ ಅಧಿಕಾರಿಗಳನ್ನೊಳಗೊಂಡ ತ್ರಿಸದಸ್ಯ ಸಮಿತಿ ರಚಿಸಿ ಎಲ್ಲಾ ಸಿಆರ್‌ಪಿ ವಲಯಗಳನ್ನು ಸಮಾನಾಗಿ ಹಂಚಿ ಮೇಲುಸ್ತುವಾರಿ ಪರಿಶೀಲನಾ ಕಾರ್ಯ ನಡೆಸಲಾಗುತ್ತಿದೆ. ಶಿಥಿಲಾವಸ್ಥೆ ಕಟ್ಟಡಕ್ಕೆ ಕೆಂಪು ಶಾಯಿಯಿಂದ ರೆಡ್ ಝೋನ್ ಎಂದು ನಮೂದಿಸಿ ಮಕ್ಕಳಿಗೆ ತಿಳಿ ಹೇಳಲಾಗುತ್ತಿದೆ. ಅಂತಹ ಕಟ್ಟದಲ್ಲಿ ಮಕ್ಕಳಿಗೆ ಕುಳಿತುಕೊಳ್ಳಲು ಅವಕಾಶ ನೀಡುತ್ತಿಲ್ಲ. ಹೀಗಾಗಿ ಯಾವುದೇ ಅಪ ಪ್ರಚಾರಕ್ಕೆ ಮಣೆ ಹಾಕದಿರಲು ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.

## ಮಹಿಳೆ ಕಾಣೆ: ಪತ್ತೆಗಾಗಿ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜುಲೈ.2 – ಬೀದರನ ದೀನ ದಯಾಳ ನಗರದ ನಿವಾಸಿಯಾದ ಶಿವಾನಿ ದಿಲೀಪ (19) ಇವರು ದಿನಾಂಕ: 10–07–2025 ರಂದು ಮನೆಯಿಂದ ಹೊರಗಡೆ ಹೋಗಿ ಮರಳಿ ಮನೆಗೆ ಬಾರದೇ ಕಾಣೆಯಾಗಿರುತ್ತಾಳೆ. ಕಾಣೆಯಾದ ಮಹಿಳೆಯು ತೆಳ್ಳನೆ ಮುಖಾ ಕಪ್ಪು ಗೋಧಿ ಬಣ್ಣ ಹಲ್ಲುಗಳು ಸ್ವಲ್ಪ ಮುಂದೆ ಇರುತ್ತವೆ.

ತಲೆಯಲ್ಲಿ ಕೂದಲು ಸಣ್ಣಗಾಗಿರುವ ಇವಳು ಮರಾಠಿ ಹಾಗೂ ಹಿಂದಿ ಭಾಷೆಯಲ್ಲಿ ಮಾತನಾಡುತ್ತಾಳೆ. ಕಾಣೆಯಾದ ಸಮಯದಲ್ಲಿ ಮೈಮೇಲೆ ಆರೆಂಜ ಕಲರ ಚೂಡಿದಾರ ಪೈಜಾಮ ಧರಿಸಿರುತ್ತಾಳೆ.

ಈ ಕಾಣೆಯಾದ ಮಹಿಳೆಯ ಬಗ್ಗೆ ಯಾರಿಗಾದರೂ ಮಾಹಿತಿ ಸಿಕ್ಕಲ್ಲಿ ಬೀದರ ಕಂಟ್ರೋಲ್ ರೂಂ. 9480803400,

ಬೀದರ ಪೊಲೀಸ್ ಉಪಾಧೀಕ್ಷಕರ ಮೊಬೈಲ್ ಸಂಖ್ಯೆ: 08482–226705, ಬೀದರ ಮಾರ್ಕೆಟ ವೃತ್ತದ ಪೊಲೀಸ್ ನಿರೀಕ್ಷಕರ ಮೊಬೈಲ್ ಸಂಖ್ಯೆ: 9480803431,

## ನಾಗರ ಪಂಚಮಿಯ ದಿನದಂದು ಬೆಟ್ಟದ ಮೇಲೆ ಚೇಳಿನ ಜಾತ್ರೆ (ಕೊಂಡಮೇಶ್ವರಿ)ಗ್ರಾಮ ದೇವಿಯ ಮಹಿಮೆ



ಮಲ್ಲಮ್ಮ ನುಡಿ ವಾರ್ತೆ

ಗುರಮಿಟಕಲ್ : ತಾಲೂಕಿನ ಯಾದಗಿರಿ ಜಿಲ್ಲೆಯ ಕಂದಕೂರ ಗ್ರಾಮದಲ್ಲಿ ನಾಗರ ಪಂಚಮಿಯ ದಿನದಂದು ಹಬ್ಬ ಈ ಭಾಗದಲ್ಲಿ ಒಂದು ವಿಶೇಷಪವಾಡವಾದ ಚೇಳಿನ ಜಾತ್ರೆ. (ಕೊಂಡಮ್ಮಾಯಿ)ಪೂಜೆ ಸಲ್ಲಿಸಿ ಹಾಲೆರೆಯುವರು.ಈ ದೇವಸ್ಥಾನ ಅಂದು ಬೆಳಿಗ್ಗೆ ಕೊಂಡಮಹೇಶ್ವರಿ ಮೂರ್ತಿಗೆ ಊರಿನ ಗ್ರಾಮಸ್ಥರು ವಿಶೇಷ ಪೂಜೆ ಅಭಿಷೇಕ ನೈವೇದ್ಯ ಅರ್ಪಿಸಿ ನಂತರ ಬಂದ ಭಕ್ತಾದಿಗಳಿಗೆ ದೇವಸ್ಥಾನದ ವತಿಯಿಂದ ಪ್ರಸಾದ ವ್ಯವಸ್ಥೆ ಮಾಡಿರುವರು.

ಬೆಟ್ಟದಲ್ಲಿ ಎಲ್ಲಿ ಎಲ್ಲಿ ಹುಡುಕಿದರೂ ಯಾವ ಕಲ್ಲು ತೆಗೆದರೂ ಚೇಳು ಹೊರಬರುವದು ಯಾವುದೇ ಭಯವಿಲ್ಲದೆ ಮಕ್ಕಳು, ಯುವಕರು, ಯುವತಿಯರು, ವೃದ್ದರು ಯಾವ ಭಯ ಇಲ್ಲದೆ ಚೇಳು ಹಿಡಿದು ಆಟವಾಡುವರು.

ಮೈಮೇಲೆ ಕೈಮೇಲೆ ಹಾಕಿಕೊಂಡು ನಾಲಿಗೆ ಮೇಲೆ ಇಟ್ಟುಕೊಂಡು ಸಂಭ್ರಮಿಸುವರು. ಕೆಲ ಮಕ್ಕಳಂತು ಚೇಳುಗಳಿಂದಲೇ ಹಾರ ಮಾಡಿ ಕೊಳ್ಳುವರು.

ದೇವಿಯ ದರ್ಶನಕ್ಕಾಗಿ ಬೇರೆ ಬೇರೆ ಕಡೆಯಿಂದ ತೆಲಂಗಾಣ, ಆಂಧ್ರ, ಮಹಾರಾಷ್ಟ್ರ ಹಾಗೂ ಬೀದರ, ಕಲಬುರಗಿ, ರಾಯಚೂರ, ಯಾದಗಿರಿ ಶಹಾಪುರ , ಸುರಪುರ, ಗುರುಮಠಕಲ್ ಸುತ್ತ ಮುತ್ತಲಿನ ಗ್ರಾಮಸ್ಥರು ಅನೇಕ ಗ್ರಾಮಗಳಿಂದ ಸಾವಿರಾರು ಸಂಖ್ಯೆಯಲ್ಲಿ ಭಕ್ತರು ಆಗಮಿಸಿ ಸಾಲಿನಲ್ಲಿ ನಿಂತು ದರ್ಶನಪಡೆದರು.

## ಗೃಹ ಆರೋಗ್ಯ ಯೋಜನೆಯ ಉದ್ಘಾಟನೆ ಮತ್ತು ಆಶಾ ಕೈಪಿಡಿ ಬಿಡುಗಡೆ ಕಾರ್ಯಕ್ರಮಕ್ಕೆ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸರ್ವೇಕ್ಷಣಾಧಿಕಾರಿಗಳ ಘಟಕ, ಎನ್.ಸಿ.ಡಿ. ಕೋಶದ ಸಂಯುಕ್ತ ಆಶ್ರಯದಲ್ಲಿ ಅಸಾಂಕ್ರಮಿಕ ರೋಗಗಳ ನಿತಂತ್ರಣ ಹಾಗೂ ನಿರ್ವಹಣೆ ಮಹತ್ವಾಂಕ್ಷಿ ಕಾರ್ಯಕ್ರಮವಾದ ಗೃಹ ಆರೋಗ್ಯ ಯೋಜನೆಯ ಆಶಾ ಕೈಪಿಡಿ ಉದ್ಘಾಟನಾ ಕಾರ್ಯಕ್ರಮಕ್ಕೆ ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ಎಸ್. ತಂಗಡಗಿ ಅವರು ಮಂಗಳವಾರ ಚಾಲನೆ ನೀಡಿದರು. ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಕೊಪ್ಪಳ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ, ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ, ಜಿಲ್ಲಾ ಪಂಚಾಯತ್ ಮುಖ್ಯಕಾಯನಿರ್ವಾಹಕ ಅಧಿಕಾರಿ ವರ್ಣಿತ ನೇಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ಧಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಉಪವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ ಮಾಲಗಿತ್ತಿ, ಕೃಷಿ ಇಲಾಖೆ ಜಂಟಿ ನಿರ್ದೇಶಕ ರುದ್ರೇಶಪ್ಪ ಟಿ.ಎಸ್., ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ರೆಡ್ಡಿ ಶ್ರೀನಿವಾಸ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು, ಡಾ. ಲಿಂಗರಾಜ ಟಿ. ಅವರು ಗೃಹ ಆರೋಗ್ಯ ಯೋಜನೆಯ ಕುರಿತು ಮಾಹಿತಿ ನೀಡಿ, ಈ ಯೋಜನೆಯ ಉದ್ದೇಶ ಆರೋಗ್ಯ ಸೇವೆ ಮನೆ ಬಳಿಗೆ ನೀಡುವುದಾಗಿದೆ. ಗ್ರಾಮೀಣ ಪ್ರದೇಶಗಳಲ್ಲಿ 30+ ವಯಸ್ಸಿನ ಜನರಿಗೆ ಅಸಾಂಕ್ರಮಿಕ ರೋಗಗಳ ತಪಾಸಣೆ ನಿರ್ವಹಣೆ, ಆರೋಗ್ಯ ಕಾರ್ಯಕರ್ತರಿಂದ ಮನೆ ಮನೆ ಬೇಟಿ ಮೂಲಕ ಅಸಾಂಕ್ರಾಮಿಕ ರೋಗಗಳ ಬಗ್ಗೆ ಅರಿವು ಮೂಡಿಸುವುದಾಗಿದೆ. ಜೀವನ ಶೈಲಿ ಬದಲಾವಣೆಯನ್ನು ಪ್ರೋತ್ಸಾಹಿಸುವುದು ಹಾಗೂ ಅಸಾಂಕ್ರಾಮಿಕ ರೋಗಗಳ ನಿಯಂತ್ರಣ ಹಾಗೂ ಚಿಕಿತ್ಸೆಗಾಗಿ ಔಷಧಿಗಳ ಬಳಕೆ, ಅಸಾಂಕ್ರಾಮಿಕ ರೋಗಗಳ ಪ್ರಾರಂಬಿಕ ಹಂತದಲ್ಲೆ ಪತ್ತೆ ಹಚ್ಚಿ, ನಿರಂತರ ಉಚಿತ ತಪಾಸಣಾ ಹಾಗೂ ಚಿಕಿತ್ಸೆ ಮೂಲಕ ಅಡ್ಡ ಪರಿಣಾಮ ಮತ್ತು ಅಕಾಲಿಕ ಮರಣ ತಡೆಗಟ್ಟುವುದಾಗಿದೆ ಎಂದರು.

ಈ ಕಾರ್ಯಕ್ರಮದಡಿಯಲ್ಲಿ 14 ಅಸಾಂಕ್ರಮಿಕ ರೋಗಗಳಾದ ಸಕ್ಕರೆ ಕಾಯಿಲೆ, ಅಧಿಕ ರಕ್ತದೊತ್ತಡ, ಬಾಯಿ ಕಾನ್ಸರ್, ಸ್ತನ ಕಾನ್ಸರ್, ಗರ್ಭಕಂಠದ ಕಾನ್ಸರ್, ಡಯಾಬೆಟಿಕ್ ಫೂಟ್, ಮಾನಸಿಕ ಆರೋಗ್ಯ ಅಸ್ವಸ್ಥತೆಗಳು, ನರವೈಜ್ಞಾನಿಕ ಅಸ್ವಸ್ಥತೆಗಳು, ನಿದ್ರೆಯಲ್ಲಿ ಉಸಿರುಗಟ್ಟುವಿಕೆ, ದೀರ್ಘಕಾಲದ ಮೂತ್ರಿಂಡದ ಕಾಯಿಲೆ, ದೀರ್ಘಕಾಲದ ಶ್ವಾಸಕೋಶದ ಕಾಯಿಲೆ, ಲಿವರ್ ಕಾಯಿಲೆ, ರಕ್ತಹೀನತೆ ಈ ಎಲ್ಲಾ ಕಾಯಿಲೆಗಳ ಪ್ರಾಥಮಿಕ ತಪಾಸಣೆಯನ್ನು ಮಾಡಲಾಗುವುದು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ. ನಂದಕುಮಾರ ಎಚ್., ಜಿಲ್ಲಾ ಎನ್.ಸಿ.ಡಿ. ಕಾರ್ಯಕ್ರಮ ಸಂಯೋಜಕಿ ಡಾ. ಜಯಶ್ರೀ ಹಾಗೂ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳು ಮತ್ತು ಆರೋಗ್ಯ ಇಲಾಖೆ ಸಿಬ್ಬಂದಿಗಳು ಹಾಜರಿದ್ದರು.

## ಜೆಜೆಎಂ ಕಾಮಗಾರಿ ವೀಕ್ಷಿಸಿದ: ಸಿಇಓ ಡಾ. ಗಿರೀಶ್ ಬದೋಲೆ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಕಮಲನಗರ: ತಾಲೂಕಿನ ಠಾಣಾ ಕುಶನೂರ, ಚಾಂದೋರಿ, ಹಾಲಳ್ಳಿ, ಖೇಡ ಹೊಳಸಮುದ್ರ, ತೋರಣಾ ಹಾಗೂ ಮುಧೋಳ(ಬಿ) ಗ್ರಾಮಗಳಿಗೆ ಬೀದರ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಗಿರೀಶ್ ದಿಲೀಪ್ ಬದೋಲೆ ಮಂಗಳವಾರ ಭೇಟಿ ನೀಡಿ ಜೆಜೆಎಂ ಕಾಮಗಾರಿಯ ಪ್ರಗತಿ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು ಜೆಜೆಎಂ ಕಾಮಗಾರಿಯ ಮುಖ್ಯ ಉದ್ದೇಶ ಪ್ರತಿ ಗ್ರಾಮಕ್ಕೆ, ಮನೆ–ಮನೆಗೆ ಶುದ್ಧ ಕುಡಿಯುವ ನೀರು ಒದಗಿಸುವುದಾಗಿದೆ ಆದ್ದ–ರಿಂದ ಪ್ರತಿ ಮನೆಗಳಿಗೆ ಶುದ್ಧ ಕುಡಿಯುವ ನೀರು ಒದಗಿಸಬೇಕು. ವಾಟರ್ ಟ್ಯಾಂಕ್ ಗಳಿಗೆ ಫೀಲ್ಡ್ ಟೆಸ್ಟಿಂಗ್ ಕಿಟ್ (ಈಖಿಏ) ಅಳವಡಿಸಬೇಕು. ಹಾಗೂ ಎಲಲ್ಲಿ ನೀರು ಸರಬರಾಜಾಗುವ ಪೈಪ್ ಲೈನ್ ಇರುತ್ತೋ ಅಲ್ಲಿ ಸೋರಿಕೆ ಕುರಿತು ಪರಿಶೀಲನೆ ಮಾಡಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು. ಹಾಗೂ ಅಪೂರ್ಣ ಕಾಮಗಾರಿಗಳನ್ನು ಅತೀತುರ್ತಾಗಿ ಪೂರ್ಣಗೊಳಿಸಿ ಗ್ರಾಮಸ್ಥರಿಗೆ ನೀರಿನ ಸಮಸ್ಯೆಯಾಗದಂತೆ ನೋಡಿಕೊಳ್ಳಿ ಎಂದು ಸೂಚಿಸಿದರು.

ಈ ವೇಳೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯನಿರ್ವಾಹಕ ಇಂಜಿನಿಯರ್ ರಾಮಲಿಂಗ ಬಿರಾದಾರ್, ತಾಲ್ಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಹಣಮಂತರಾಯ ಕೌಟಗೆ, ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಅಧ್ಯಕ್ಷರು ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಜು.31 ರಂದು ಪ್ರಗತಿ ಪರಿಶೀಲನಾ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜುಲೈ.29– ಬೀದರ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಅಮೃತರಾವ ಚಿಮಕೋಡೆ ಅವರು ಜುಲೈ.31 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ರಾಜ್ಯ ಸರ್ಕಾರದ ಮಹತ್ವಕಾಂಕ್ಷಿ ಯೋಜನೆಗಳಾದ ಪಂಚ ಗ್ಯಾರಂಟಿ ಯೋಜನೆಗಳ ಕುರಿತು ಪ್ರಗತಿ ಪರಿಶೀಲನಾ ಸಭೆ ನಡೆಸಲಿದ್ದಾರೆ.

ಸದರಿ ಸಭೆಗೆ ಎಲ್ಲಾ ಅನುಷ್ಠಾನಾಧಿಕಾರಿಗಳು ಖುದ್ದಾಗಿ ಸಭೆಗೆ ಹಾಜರಾಗಬೇಕೆಂದು ಬೀದರ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಿಳಿಸಿದ್ದಾರೆ.

ತುಂಗಭದ್ರ ಜಲಾಶಯದಿಂದ ಒಂದು ಲಕ್ಷ ಕ್ಯೂಸೆಕ್ ನೀರು ಬಿಡುಗಡೆ

# ನದಿಪಾತ್ರದ ಜನರು ಎಚ್ಚರವಹಿಸುವಂತೆ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಸೂಚನೆ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.29-ತುಂಗಭದ್ರಾ ಜಲಾಶಯದಿಂದ ಒಂದು ಲಕ್ಷ ಕ್ಯೂಸೆಕ್ ನೀರನ್ನು ನದಿಗೆ ಹರಿಸಲಾಗಿದ್ದು, ಕಂಪ್ಲಿ ಗಂಗಾವತಿ ಮೇಲ್ಸೇತುವೆ ಮೇಲೆ ನೀರು ಹರಿಯುತ್ತಿರುವುದರಿಂದ ಮುಂಜಾಗ್ರತೆಗಾಗಿ ವಾಹನಗಳ ಸಂಚಾರ ಸ್ಥಗಿತ ಮತ್ತು ನದಿ ಭಾಗದಲ್ಲಿ ತೊಂದರೆಯಾಗದಂತೆ ತುರ್ತು ಪರಿಸ್ಥಿತಿಗೆ ಬೋಟ್‌ಗಳ ವ್ಯವಸ್ಥೆಯನ್ನು ಮಾಡಲು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಕೆಸ್ವಾನ್ ವಿಡಿಯೋ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಮಂಗಳವಾರ ನಡೆದ ವಿಡಿಯೋ ಸಂವಾದ ಸಭೆಯಲ್ಲಿ ಅವರು ಮಾತನಾಡಿದರು.

ರಾಜ್ಯದಲ್ಲಿ ಮುಂಗಾರು ಮಳೆ ಮತ್ತೆ ಚುರುಕಾಗಿದ್ದು, ಜಲಾಶಯಗಳಲ್ಲಿ ನೀರಿನ ಮಟ್ಟ ಮತ್ತಷ್ಟು ಹೆಚ್ಚಳವಾಗಿದ್ದು, ತುಂಗಭದ್ರಾ ಜಲಾಶಯ ಭರ್ತಿಯಾಗಿದೆ. ಹೆಚ್ಚುವರಿ ನೀರನ್ನು ನದಿಗೆ ಬಿಡಲಾಗುತ್ತಿದೆ. ಜಲಾಶಯಗಳ ನೀರಿನ ಮಟ್ಟ, ಒಳ ಹರಿವು, ಹೊರ ಹರಿವು ಹೆಚ್ಚಾಗಿದ್ದು ಜಲಾಶಯದಲ್ಲಿ 105.788 ಟಿ.ಎಂ.ಸಿ ನೀರಿನ ಸಂಗ್ರಹಣಾ ಸಾಮರ್ಥ್ಯ ಹೊಂದಿದ್ದು, ಈಗಾಗಲೇ 80.001 ಟಿ.ಎಂ.ಸಿ ಭರ್ತಿಯಾಗಿದೆ. ಜಲಾಶಯದಿಂದ ಒಂದು ಲಕ್ಷ ಕ್ಯೂಸೆಕ್ ನೀರನ್ನು ನದಿಗೆ ಬಿಡಲಾಗಿದ್ದು, ಕಂಪ್ಲಿ ಗಂಗಾವತಿ ಮೇಲ್ಸೇತುವೆ ಮುಳುಗಡೆಯಾಗಿದೆ. ಸೇತುವೆ ಮೇಲೆ ವಾಹನ ಸಂಚಾರವನ್ನು ಸ್ಥಗಿತ ಮಾಡಲಾಗಿದೆ. ಕಂಪ್ಲಿ ತಾಲ್ಲೂಕಿನ ತಹಶೀಲ್ದಾರರು, ಆರ್‌ಐ ಅಧಿಕಾರಿಗಳು ದೈನಂದಿನ ನೀರಿನ ಮಟ್ಟವನ್ನು ತಿಳಿದು ನದಿ ಪಾತ್ರದಲ್ಲಿರುವ ಸಾರ್ವಜನಿಕರಲ್ಲಿ ಎಚ್ಚರಿಕೆಯನ್ನು ನೀಡಬೇಕು ಎಂದು ತಿಳಿಸಿದರು.

ನದಿ ಪಾತ್ರದಲ್ಲಿರುವ ಜನರಲ್ಲಿ ಆರೋಗ್ಯ, ಊಟದ ವ್ಯವಸ್ಥೆ, ಮೂಲ ಸೌಕರ್ಯವನ್ನು ಕಲ್ಪಿಸಬೇಕು. ಜಿಲ್ಲೆಯಲ್ಲಿ ಹೆಚ್ಚು ಮಳೆಯಿಂದ ಶಾಲೆಗಳ ಮೇಲ್ಛಾವಣಿ ಹಾನಿಯಾಗಿದ್ದರೆ ಅದನ್ನು ಸರಿಪಡಿಸಿ ಮಾಹಿತಿ ನೀಡಬೇಕು. ಕಂಪ್ಲಿ ತಾಲ್ಲೂಕಿನಲ್ಲಿ ಒಂದು ವಾರದಿಂದ ಮಳೆ ಸುರಿತ್ತಿರುವುದರಿಂದ ಇಟಗಿ ಗ್ರಾಮದ ಹಳ್ಳದ ಮೇಲ್ಸೇತುವೆ ನೀರು ಹರಿಯುತ್ತಿದ್ದು, ಜನರಿಗೆ ಎಚ್ಚರಿಕೆಯನ್ನು ನೀಡಲು ಅಧಿಕಾರಿಗಳಿಗೆ ತಿಳಿಸಿದರು.

ಕೇಂದ್ರಸರ್ಕಾರದಿಂದ ರಸಗೊಬ್ಬರ ಹಂಚಿಕೆ ಮತ್ತು ಸರಬರಾಜು ಪ್ರಕ್ರಿಯೆ ಆರಂಭವಾಗಿದ್ದು, ಇದರಿಂದಾಗಿ ರಾಜ್ಯದಲ್ಲಿ ಯೂರಿಯಾ ರಸಗೊಬ್ಬರದ ಪ್ರಾರಂಭಿಕ ದಾಸ್ತಾನನ್ನು ಪರಿಗಣಿಸಿ, ಯೂರಿಯಾ ರಸಗೊಬ್ಬರದ ಕಡಿಮೆ ಹಂಚಿಕೆ ಮಾಡಿರುವುದು ಕೊರತೆಗೆ ಮೂಲ ಕಾರಣವಾಗಿದೆ. ರಸಗೊಬ್ಬರದ ಬಗ್ಗೆ ಸ್ಥಳೀಯ ರೈತರಿಂದ ಮಾಹಿತಿಯನ್ನು ತಿಳಿದುಕೊಳ್ಳಬೇಕು. ತಾಲ್ಲೂಕುವಾರು ತಹಶೀಲ್ದಾರರು ಮತ್ತು ರೈತ ಸಂಪರ್ಕ ಕೇಂದ್ರ ಅಧಿಕಾರಿಗಳು ರೈತರಿಗೆ ಹೋಲ್ ಸೇಲ್, ರಿಟೇಲ್ ಅಂಗಡಿಗಳಿಂದ ತೊಂದ–ರೆಯಾದರೆ ಕ್ರಮವಹಿಸಬೇಕು ಎಂದರು. ಈ ಸಂದರ್ಭದಲ್ಲಿ ಸಹಾಯಕ ಆಯುಕ್ತ ಪಿ.ಪ್ರಮೋದ್ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ತಾಲ್ಲೂಕು ಮಟ್ಟ ಅಧಿಕಾರಿಗಳು ಇತರರು ಉಪಸ್ಥಿತರಿದರು.

# ಮೆದುಳಿನ ಆರೋಗ್ಯದ ಬಗ್ಗೆ ಪ್ರತಿಯೊಬ್ಬರೂ ಕಾಳಜಿ ವಹಿಸಿ: ಡಾ.ಬಸರೆಡ್ಡಿ .ಎನ್




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.29–ಮಾನವನ ದೇಹದ ಪ್ರಮುಖ ಅಂಗ ಮೆದುಳಾಗಿದೆ. ಎಲ್ಲರೂ ಮೆದುಳಿನ ಆರೋಗ್ಯದ ಬಗ್ಗೆ ಕಾಳಜಿ ವಹಿಸಬೇಕು ಎಂದು ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ. ಎನ್.ಬಸರೆಡ್ಡಿ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕರ್ನಾಟಕ ಮೆದುಳಿನ ಆರೋಗ್ಯ ಉಪಕ್ರಮ, ಜಿಲ್ಲಾ ಆಸ್ಪತ್ರೆಯ ಮೆದುಳಿನ ಆರೋಗ್ಯ ಚಿಕಿತ್ಸಾ ಕೇಂದ್ರ ಇವರ ಸಂಯುಕ್ತಾಶ್ರಯದಲ್ಲಿ ನಗರದ ಜಿಲ್ಲಾ ಆಸ್ಪತ್ರೆಯ ಮೆದುಳಿನ ಆರೋಗ್ಯ ಚಿಕಿತ್ಸಾ ಕೇಂದ್ರದ ಮುಂಭಾಗದ ಆವರಣದಲ್ಲಿ ಮಂಗಳವಾರ ಆಯೋಜಿಸಿದ್ದ "ಎಲ್ಲಾ ವಯಸ್ಸಿನವರಿಗೂ ಮೆದುಳಿನ ಆರೋಗ್ಯ" ಎಂಬ ಘೋಷವಾಕ್ಯದಡಿ "ವಿಶ್ವ ಮೆದುಳು ದಿನಾಚರಣೆ–2025" ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಮೆದುಳು ದೇಹದ ಅತ್ಯಂತ ಪ್ರಮುಖ ಅಂಗವಾಗಿದೆ. ಮೆದುಳು ಕಾರ್ಯ ನಿರ್ವಹಿಸದಿದ್ದಲ್ಲಿ ಮನುಷ್ಯರು ಪರಾವಲಂಬಿಯಾಗಿ ಬೇರೆಯವರಿಗೆ ಹೊರೆಯಾಗ ಬೆಣಟಿಜಜಿಜಿಟಿಜಜೀಕಾಗುತ್ತದೆ ಎಂದರು.

ನರರೋಗ ಸಂಬಂಧಿಸಿದ ಆರೋಗ್ಯ ಕಾಯಿಲೆಗಳು ಹೆಚ್ಚುತ್ತಿರುವುದರಿಂದ ಸರ್ಕಾರವು ಯೋಜನೆ ಕೈಗೆತ್ತಿ–ಕೊಂಡಿದೆ. ತಲೆನೋವು, ಪಾರ್ಶ್ವವಾಯು, ಮೂರ್ಛೆರೋಗ, ಪಾರ್ಕಿನ್ ಸನ್ ಕಾಯಿಲೆ ಮತ್ತು ಮರೆವಿನ ಕಾಯಿಲೆಗಳು ಕಂಡು ಬಂದಲ್ಲಿ ತಕ್ಷಣ ವೈದ್ಯರಿಗೆ ಬಳಿ ತಪಾಸಣೆ ಒಳಪಟ್ಟು ಉಚಿತ ಪರೀಕ್ಷೆ ಮಾಡಿಸಿಕೊಳ್ಳಿ ಎಂದು ಸಲಹೆ ನೀಡಿದರು.

ಜಿಲ್ಲೆಯಲ್ಲಿ ಮೆದುಳು ಆರೋಗ್ಯ ಕಾರ್ಯಕ್ರಮದಡಿ 2024ರಿಂದ ಜೂನ್ 2025ನೇ ಸಾಲಿನವರೆಗೂ 19,000 ಫಲಾನುಭವಿಗಳು ಮೆದುಳು ಆರೋಗ್ಯ ಚಿಕಿತ್ಸಾಲಯದಲ್ಲಿ ಉಚಿತ ಚಿಕಿತ್ಸೆ ಪಡೆದಿದ್ದಾರೆ ಎಂದು ವಿವರಿಸಿದರು. ಮೆದುಳಿನ ಆರೋಗ್ಯ ಚಿಕಿತ್ಸೆ ನೀಡುವಲ್ಲಿ ಬೇರೆ ಜಿಲ್ಲೆಗಳಿಗಿಂತ ನಮ್ಮ ಬಳ್ಳಾರಿ ಪ್ರಥಮ ಸ್ಥಾನದಲ್ಲಿರುವುದು ಹೆಮ್ಮೆಯ ವಿಷಯವಾಗಿದೆ. ಮೆದುಳು ಆರೋಗ್ಯ ಕಾರ್ಯಕ್ರಮದಡಿ ಮೆದುಳು ಮತ್ತು ನರ ಸಂಬಂಧಿತ ರೋಗಿಗಳಿಗೆ ನಿತ್ಯ ಚಿಕಿತ್ಸೆ ಒದಗಿಸಿ ಔಷಧಗಳನ್ನು ನೀಡಲಾಗುತ್ತಿದೆ. ಮೆದುಳನ್ನು ಆರೋಗ್ಯವಾಗಿಡಲು ಸರಳ ದೈನಂದಿನ ಅಭ್ಯಾಸ ಜತೆಯಲ್ಲಿಯೇ ಜೀವನ ಶೈಲಿ ಆಯ್ಕೆ ಬಹಳ ಮುಖ್ಯವಾಗಿದೆ ಎಂದು ಹೇಳಿದರು.

ನಿತ್ಯ ಒತ್ತಡದ ಕೆಲಸದ ನಡುವೆಯೂ ಎಂಟು ತಾಸು ನಿದ್ದೆ ಮಾಡಬೇಕು. ಮಾನಸಿಕ ಸದೃಢಗೊಳ್ಳಲು ಒತ್ತಡ ನಿಯಂತ್ರಿಸಿ ಧೂಮಪಾನ ಮತ್ತು ಮದ್ಯಪಾನ ತ್ಯಜಿಸಬೇಕು ಎಂದು ಹೇಳಿದರು.

ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಅನುಷ್ಠಾನ ಅಧಿಕಾರಿ ಹಾಗೂ ಜಿಲ್ಲಾ ಕುಷ್ಠರೋಗ ನಿರ್ಮೂಲನಾ ಅಧಿಕಾರಿ ಡಾ.ವೀರೇಂದ್ರ ಕುಮಾರ್ ಕೆ.ಜಿ ಅವರು ಪ್ರಾಸ್ತವಿಕವಾಗಿ ಮಾತನಾಡಿ, ಮೆದುಳು ಆರೋಗ್ಯವಾಗಿರಲು ನಮ್ಮ ದೇಹವು ದೈಹಿಕ ಮತ್ತು ಮಾನಸಿಕ ಸದೃಡವಾಗಿರಬೇಕು. ಮೆದುಳಿನ ಆರೋಗ್ಯದ ಬಗ್ಗೆ ನಿರ್ಲಕ್ಷ ವಹಿಸದೆ ಕಾಳಜಿ ವಹಿಸಬೇಕು. ಮೆದುಳಿನ ಆರೋಗ್ಯದ ಜವಾಬ್ದಾರಿಯ ಬಗ್ಗೆ ಎಲ್ಲಾ ಸರಕಾರಿ ಸಂಸ್ಥೆಗಳು ಆರೋಗ್ಯ ವೃತ್ತಿಪರರು, ಆರೈ–ಕೆದಾರರು, ನಾಗರಿಕರು ಎಲ್ಲರೂ ಸೇರಿ ಜಾಗೃತಿ ಮೂಡಿಸುವ ಸಲುವಾಗಿ ವಿಶ್ವ ಮೆದುಳು ದಿನವನ್ನು ಆಚರಿಸಲಾಗುತ್ತದೆ ಎಂದರು.

ಇದಕ್ಕೂ ಮುನ್ನ ಗಣ್ಯರೆಲ್ಲರೂ ಸೇರಿ ಕಾರ್ಯಕ್ರಮ ಉದ್ಘಾಟಿಸಿದರು.

ಇದೇ ಸಂದರ್ಭದಲ್ಲಿ ಮೆದುಳು ಆರೋಗ್ಯ ಚಿಕಿತ್ಸಾ ಕೇಂದ್ರದಿಂದ ಆಯೋಜಿಸಿದ್ದ "ಮೆದುಳು ಚುರುಕುಗೊಳಿಸುವ ಚಟುವಟಿಕೆ" ಸ್ಪರ್ಧೆಯ ವಿಜೇತರಿಗೆ ಬಹುಮಾನ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಇಂದ್ರಾಣಿ.ವಿ., ಜಿಲ್ಲಾ ಆಸ್ಪತ್ರೆಯ ಸ್ಥಾನಿಕ ವೈದ್ಯಾಧಿಕಾರಿ ಡಾ.ವಿಶ್ವನಾಥ್.ಕೆ., ಜಿಲ್ಲಾ ಆಸ್ಪತ್ರೆಯ ವಿಭಾಗೀಯ ಮುಖ್ಯಸ್ಥರು ಹಾಗೂ ತಜ್ಞ ವೈದ್ಯ ಡಾ.ಶ್ರೀಧರ್ ಎಮ್.ಆರ್., ಮೆದುಳಿನ ಆರೋಗ್ಯ ಚಿಕಿತ್ಸಾ ಕೇಂದ್ರದ ನೋಡಲ್ ಅಧಿಕಾರಿ ಹಾಗೂ ತಜ್ಞ ವೈದ್ಯ ಡಾ.ರಾಕೇಶ್, ಜಿಲ್ಲಾ ಆಸ್ಪತ್ರೆಯ ಆಡಳಿತ ಸಹಾಯಕ ಅಧಿಕಾರಿಗಳಾದ ದುರುಗಪ್ಪ.ಟಿ., ರಜೀಯಾ ಬೇಗಂ, ಕರ್ನಾಟಕ ಮೆದುಳಿನ ಆರೋಗ್ಯ ಉಪಕ್ರಮ ಕಾರ್ಯಕ್ರಮದ ಜಿಲ್ಲಾ ಕಾರ್ಯಕ್ರಮ ಸಂಯೋಜಕ ಸಣ್ಣಕೇಶವ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಖುರ್ಷಿದ್ ಬೇಗಮ್ ಸೇರಿದಂತೆ ಮೆದುಳಿನ ಆರೋಗ್ಯ ಚಿಕಿತ್ಸಾ ಕೇಂದ್ರದ ಸಿಬ್ಬಂದಿ ವರ್ಗ, ವೈದ್ಯಕೀಯ ವಿದ್ಯಾರ್ಥಿಗಳು, ಸಾರ್ವಜನಿಕರು ಹಾಗೂ ಇತರರು ಉಪಸ್ಥಿತರಿದ್ದರು.

# ಆರೋಗ್ಯವಾಗಿರಲು ಶುದ್ಧ ನೀರನ್ನೇ ಕುಡಿಯಿರಿ: ಡಾ. ಯಲ್ಲಾ ರಮೇಶ್ ಬಾಬು



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.29–ನಮ್ಮ ದೇಹಕ್ಕೆ ನೀರು ಅವಶ್ಯಕವಾಗಿದ್ದು, ಆರೋಗ್ಯವಾಗಿರಲು ಶುದ್ಧ ನೀರನ್ನು ಕುಡಿಯಬೇಕು. ಯಾವುದೇ ಕಾರಣಕ್ಕೂ ನದಿಯಲ್ಲಿನ ನೀರನ್ನು ಕುಡಿಯಲು ಬಳಸಬಾರದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಯಲ್ಲಾ ರಮೇಶ್‌ಬಾಬು ಅವರು ಹೇಳಿದರು. ತುಂಗಭದ್ರಾ ಜಲಾಶಯದಿಂದ ನದಿಗೆ ಹೆಚ್ಚುವರಿ ನೀರು ಬಿಟ್ಟಿರುವ ಹಿನ್ನೆಲೆಯಲ್ಲಿ ಸಿರುಗುಪ್ಪ ತಾಲೂಕಿನ ಹಚೋಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದ ವ್ಯಾಪ್ತಿಗೆ ಒಳಪಡುವ ಚಿಕ್ಕಬಳ್ಳಾರಿ, ಹಳೆ ಶ್ರೀಧರಗಡ್ಡೆ ಹಾಗೂ ಹಚ್ಚೋಳಿ ಗ್ರಾಮಗಳಿಗೆ ಭೇಟಿ ನೀಡಿ ಅಲ್ಲಿನ ಜನರೊಂದಿಗೆ ಮುಂಜಾಗ್ರತಾ ಕ್ರಮಗಳ ಬಗ್ಗೆ ಚರ್ಚಿಸಿ ಮಾತನಾಡಿದರು.

ನದಿಯ ನೀರು ಕುಡಿಯುವುದರಿಂದ ವಾಂತಿ–ಭೇದಿ, ಶೀತ ಜ್ವರ ಹಾಗೂ ಬ್ಯಾಕ್ಟೀರಿಯಾ ಸೋಂಕಿನ ಕಾಯಿಲೆಗಳು ಬರುವ ಸಾಧ್ಯತೆ ಇರುತ್ತದೆ. ನೀರಿನ ಹರಿಯುವ ಮಟ್ಟ ಹೆಚ್ಚಾಗಿ ಹಾವು, ಚೇಳು ಇತರೆ ವಿಷಜಂತುಗಳು ಜನವಾಸ ಪ್ರದೇಶಕ್ಕೆ ಬರುವ ಸಂಭವವಿದೆ. ನೀರಿನ ಹರಿವಿನಿಂದ ಅಪಾಯ ಸಂಭವಿಸುವ ಸಂದರ್ಭದಲ್ಲಿ ಸುರಕ್ಷಿತೆಗಾಗಿ ಎತ್ತರದ ಪ್ರದೇಶಗಳನ್ನು ಆಯ್ದುಕೊಳ್ಳಿ ಎಂದು ಗ್ರಾಮದ ಜನರಿಗೆ ಹೇಳಿದರು. ಬಳಿಕ ಹಚ್ಚೊಳ್ಳಿಯ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ತಾಲ್ಲೂಕು ಆರೋಗ್ಯ ಅಧಿಕಾರಿಗಳೊಂದಿಗೆ ಚರ್ಚಿಸಿ, ನದಿ ಪಾತ್ರದ ಪ್ರದೇಶದ ಜನರಿಗೆ ಬೇಕಾಗುವಂತಹ ಔಷಧಿಗಳು, ಇಂಜೆಕ್ಷನ್‌ಗಳು, ಹಾವು ನಂಜು ನಿರೋಧಕ ಲಸಿಕೆಗಳು, ಓ.ಆರ್.ಎಸ್ ಪಾಕೆಟ್ಸ್, ನೆಗಡಿ ಕೆಮ್ಮು ಜ್ವರದ ಮಾತ್ರೆಗಳು, ಐ ವಿ ಫ್ಲೂಡ್‌ಗಳು, ಹ್ಯಾಲೋಜನ್ ಮಾತ್ರೆಗಳು, ಬ್ಲೀಚಿಂಗ್ ಪೌಡರ್ ಇತರೆ ಚಿಕಿತ್ಸಾ ಸೇವಾ ಸೌಲಭ್ಯಗಳು ಸಾಕಷ್ಟು ಪ್ರಮಾಣದಲ್ಲಿ ಮುಂಚೂಣಿಯಾಗಿ ಸಂಗ್ರಹಿಸಿ ಎಚ್ಚರಿಕೆ ವಹಿಸಬೇಕು ಹಾಗೂ ಅಪಾಯಕಾರಿ ಪ್ರದೇಶಗಳಲ್ಲಿನ ಜನಾರೋಗ್ಯ ಸಮೀಕ್ಷೆ ಪ್ರತಿದಿನ ನಡೆಸಲು ಮತ್ತು ಸಾಂಕ್ರಾಮಿಕ ರೋಗಗಳು ಹರಡದಂತೆ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕೆಂದು ಆರೋಗ್ಯ ಸಿಬ್ಬಂದಿಗಳಿಗೆ ಸೂಚನೆ ನೀಡಿದರು.

ಸಮುದಾಯದಲ್ಲಿ ಗೃಹ ಆರೋಗ್ಯ ಕಾರ್ಯಕ್ರಮ, ಗರ್ಭಿಣಿ, ಗಂಡಾಂತರ ಗರ್ಭಿಣಿಯರ ಕಾಳಜಿ, ಸುಸೂತ್ರ ಹೆರಿಗೆ ಸೌಲಭ್ಯ, ತಾಯಿ ಮಗುವಿನ ಆರೈಕೆ ಕುರಿತಂತೆ ಆರೋಗ್ಯ ಪರ ಕ್ರಮಗಳನ್ನು ಅನುಸರಿಸಬೇಕು ಎಂದು ಸಿಬ್ಬಂದಿಗೆ ತಿಳಿಸಿದರು.

ಈ ಸಂದರ್ಭದಲ್ಲಿ ಆರೋಗ್ಯ ಮೇಲ್ವಿಚಾರಕ ಟಿ. ವಿರೂಪಾಕ್ಷಪ್ಪ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ರವಿಕುಮಾರ್, ಪ್ರಾಥಮಿಕ ಸುರಕ್ಷತಾ ಅಧಿಕಾರಿಗಳು, ಆರೋಗ್ಯ ನಿರೀಕ್ಷಣಾಧಿಕಾರಿಗಳು, ಶುಶ್ರೂಷಣಾಧಿಕಾರಿಗಳು ಸೇರಿದಂತೆ ಪ್ರಯೋಗಶಾಲ ತಂತ್ರಜ್ಞರು, ಔಷಧ ತಜ್ಞರು ಹಾಗೂ ಆಶಾ ಕಾರ್ಯಕರ್ತೆ–ಯರು, ಸಾರ್ವಜನಿಕರು ಉಪಸ್ಥಿತರಿದ್ದರು.

# ವರ್ಷದ ಕನ್ನಡಿಗ ಪ್ರಶಸ್ತಿಗೆ ಪಾತ್ರರಾದ ಸುರೇಶ ಬಳೂಟಗಿ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲೆ ಕುಕನೂರ ತಾಲೂಕಿನ ಕಕ್ಕಿಹಳ್ಳಿ ಗ್ರಾಮದ ಸಮಾಜಸೇವಕ ಹಾಗೂ ಗೋರಸೇನಾ ರಾಜ್ಯ ಪ್ರಧಾನ ಕಾರ್ಯದರ್ಶಿ ಸುರೇಶ ಬಳೂಟಗಿ ಅವರಿಗೆ ವರ್ಷದ ಅತ್ಯುತ್ತಮ ಕನ್ನಡಿಗ 2025 ಪ್ರಶಸ್ತಿ ನೀಡಿ ಗೌರವಿಸಲಾಗಿದೆ.

ಬೆಂಗಳೂರಿನ ಅಂಬಾರಿ ಕ್ರಿಯೇಶನ್ಸ್ ಅವರು ಪ್ರತಿ ವರ್ಷ ಕೊಡಲ್ಪಡುವ ವರ್ಷದ ಅತ್ಯುತ್ತಮ ಕನ್ನಡಿಗ 2025ರ ಪ್ರಶಸ್ತಿಯನ್ನು ಬಂಜಾರ ಸಮಾಜದ ಪ್ರಮುಖ, ಸಮಾಜಮುಖಿ ಕಾರ್ಯಗಳಲ್ಲಿ ತನ್ನನ್ನು ತಾನು ಗುರುತಿಸಿಕೊಂಡಿರುವ ಸುರೇಶ ಬಳೂಟಗಿ ಅವರಿಗೆ ಭಾನುವಾರ ದಿವಸ ಬೆಂಗಳೂರು ನಗರದಲ್ಲಿರುವ ರಾಜರಾಜೇಶ್ವರಿ ನಗರದ ಬಾಲಕೃಷ್ಣ ಬಯಲು ರಂಗಮಂದಿರದಲ್ಲಿ ನಡೆದ ಸಮಾರಂಭದಲ್ಲಿ ವರ್ಷದ ಅತ್ಯುತ್ತಮ ಕನ್ನಡಿಗೆ 2025 ಪ್ರಶಸ್ತಿ ಪ್ರಧಾನ ಮಾಡಿ ಗೌರವಿಸಲಾಯಿತು.

ಗ್ರಾಮದ ಯುವ ಸಮಾಜಸೇವಕ ಸುರೇಶ್ ಬಳಟೂಗಿಗೆ ಅತ್ಯುತ್ತಮ ವರ್ಷದ ಕನ್ನಡಿಗ ಪ್ರಶಸ್ತಿ ಲಭಿಸಿದ್ದಕ್ಕೆ ಕಕ್ಕಿಹಳ್ಳಿ ಗ್ರಾಮದ ಜನ ಸಿಹಿ ವಿತರಣೆ ಮಾಡಿ ಸಂಭ್ರಮಾಚರಣೆ ಮಾಡಿದರು.

# ಆ.01 ರಂದು ಶಾಸ್ತ್ರೀಯ ನೃತ್ಯ ಕಲಿಕಾ ತರಬೇತಿ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.29–ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಬಳ್ಳಾರಿ ಇವರ ಸಂಯುಕ್ತಾಶ್ರಯದಲ್ಲಿ ಪರಿಶಿಷ್ಟ ಪಂಗಡದ ವಿದ್ಯಾರ್ಥಿನಿಯರಿಗೆ "ಶಾಸ್ತ್ರೀಯ ನೃತ್ಯ" ಕಲಿಕಾ ತರಬೇತಿ ಕಾರ್ಯಕ್ರಮವನ್ನು ಆ.01 ರಂದು ಸಂಜೆ 06 ಗಂಟೆಗೆ ನಗರದ ಪರಿಶಿಷ್ಟ ವರ್ಗಗಳ ಸರ್ಕಾರಿ ಮೆಟ್ರಿಕ್ ನಂತರ ಬಾಲಕಿಯರ ವಸತಿ ನಿಲಯದಲ್ಲಿ ಆಯೋಜಿಸಲಾಗಿದೆ.

ಕಲಬುರಗಿ ವಲಯದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕ ಬಸವರಾಜ ಹೂಗಾರ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಪಿ.ರಾಜು ಅವರು ಅಧ್ಯಕ್ಷತೆ ವಹಿಸುವರು.

ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಗಾದಿಲಿಂಗಪ್ಪ, ನೃತ್ಯ ತರಬೇತಿ ಕಲಾವಿದರಾದ ಡಿ.ಇಂದ್ರಾಣಿ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರವೇಶಕ್ಕೆ ಅರ್ಜಿ ಸಲ್ಲಿಕೆ: ಅವಧಿ ವಿಸ್ತರಣೆ

ರಾಯಚೂರು ಜುಲೈ 29–: ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯಿಂದ 2025–26ನೇ ಸಾಲಿನಲ್ಲಿ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿ ಪ್ರಥಮ ಸೆಮಿಸ್ಟರ್, ಲ್ಯಾಟರಲ್ ಎಂಟ್ರಿ 3ನೇ ಸೆಮಿಸ್ಟರ್ ಡಿಪ್ಲೋಮಾಗೆ ವೃತ್ತಿಪರ ಅಭ್ಯರ್ಥಿಗಳ ಲ್ಯಾಟರಲ್ ಎಂಟ್ರಿ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಕೆಯ ಅವಧಿಯನ್ನು ಆಗಸ್ಟ್ 11ರವರೆಗೆ ವಿಸ್ತರಿಸಲಾಗಿದೆ.

ಅರ್ಹ ವಿದ್ಯಾರ್ಥಿಗಳು ಸಂಸ್ಥೆಯ ಪ್ರಾಚಾರ್ಯರಿಗೆ ಅರ್ಜಿ ಸಲ್ಲಿಸಿ ಪ್ರವೇಶ ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಚೇರಿ ಸಮಯದಲ್ಲಿ ಸಂಸ್ಥೆಯ ಪ್ರಾಂಶುಪಾಲರನ್ನು ಸಂಪರ್ಕಿಸುವಂತೆ ರಾಯಚೂರಿನ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆ.02 ರಂದು "ಹಾಡಿರೇ ರಾಗಗಳ–ತೂಗಿರೇ ದೀಪಗಳ" ಸಂಗೀತ ಗಾಯನ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.29–ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಪರಿಶಿಷ್ಟಜಾತಿ ಉಪಯೋಜನೆಯಡಿ "ಹಾಡಿರೇ ರಾಗಗಳ–ತೂಗಿರೇ ದೀಪಗಳ" ಸಂಗೀತ ಗಾಯನ ಕಾರ್ಯಕ್ರಮವನ್ನು ಆ.02 ರಂದು ಸಂಜೆ 06 ಗಂಟೆಗೆ ನಗರದ ಡಾ.ರಾಜ್‌ಕುಮಾರ್ ರಸ್ತೆಯಲ್ಲಿರುವ ಸಾಂಸ್ಕೃತಿಕ ಸಮುಚ್ಚಯದ ನಾಡೋಜ ಡಾ.ಸುಭದ್ರಮ್ಮ ಮನ್ಸೂರ್ ಬಯಲು ರಂಗಮಂದಿರದಲ್ಲಿ ಆಯೋಜಿಸಲಾಗಿದೆ.

ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಉಸ್ತುವಾರಿ ಸಚಿವ ಬಿ.ಝಡ್.ಜಮೀರ್ ಅಹ್ಮದ್ ಖಾನ್ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಅಧ್ಯಕ್ಷತೆ ವಹಿಸುವರು.

ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಹಾಗೂ ಶಾಸಕ ಜೆ.ಎನ್ ಗಣೇಶ್, ಸಂಸದರಾದ ಈ.ತುಕಾರಾಂ, ಕೆ.ರಾಜಶೇಖರ ಬಸವರಾಜ ಹಿಟ್ನಾಳ್, ಡಾ.ಸೈಯದ್ ನಾಸೀರ್ ಹುಸೇನ್, ಶಾಸಕ ಬಿ.ನಾಗೇಂದ್ರ, ವಿಧಾನಪರಿಷತ್ ಶಾಸಕ ಡಾ.ಚಂದ್ರಶೇಖರ್ ಬಿ.ಪಾಟೀಲ, ಶಾಸಕರಾದ ಬಿ.ಎಂ.ನಾಗರಾಜ, ಈ.ಅನ್ನಪೂರ್ಣ, ವಿಧಾನಪರಿಷತ್ ಶಾಸಕರಾದ ಶಶೀಲ್ ನಮೋಶಿ, ವೈ.ಎಂ.ಸತೀಶ್, ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ, ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್.ಆಂಜನೇಯಲು, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

**ಸಂಗೀತ ಗಾಯನ:**

ಬಳ್ಳಾರಿಯ ಎಸ್.ಎಂ ಹುಲುಗಪ್ಪ ಅವರ ತಂಡದಿಂದ ಜಾನಪದ ಗೀತೆಗಳು, ಸಿರುಗುಪ್ಪದ ಅಂಬಣ್ಣ ದಳವಾಯಿ ಅವರಿಂದ ಸುಗಮ ಸಂಗೀತ, ಬಳ್ಳಾರಿಯ ಕೆ.ಜಡೇಶ್ ಅವರಿಂದ ಭಾವ ಗೀತೆಗಳು, ಸಿರುಗುಪ್ಪ ತಾಲ್ಲೂಕಿನ ಉತ್ತನೂರಿನ ರಾಮಪ್ಪ ಅವರಿಂದ ರಂಗಗೀತೆಗಳು, ಕುರುಗೋಡು ತಾಲ್ಲೂಕಿನ ಕಲ್ಲುಕಂಬದ ಬಿ.ಆನಂದ ಅವರಿಂದ ಕ್ರಾಂತಿ ಗೀತೆಗಳು, ಸಂಗನಕಲ್ಲಿನ ಉಷಾ ಅವರಿಂದ ವಚನ ಗೀತೆಗಳು, ರ‍್ರಗುಡಿಯ ಸುಂಕಪ್ಪ ಹೆಚ್.ಜಿ ಅವರಿಂದ ಹೋರಾಟ ಗೀತೆಗಳು, ಇಬ್ರಾಹಿಂಪುರದ ಹೆಚ್.ರ‍್ರಿಸ್ವಾಮಿ ಅವರಿಂದ ಕ್ರಾಂತಿ ಗೀತೆಗಳು, ಕುರುಗೋಡಿನ ಕೆ.ಹನುಮಂತಪ್ಪ ಜೋಗಿ ಅವರಿಂದ ಕಿನ್ನರಿ ಜೋಗಿ ಪದಗಳು, ಕಂಪ್ಲಿ ತಾಲ್ಲೂಕಿನ ಮೆಟ್ರಿಯ ಸಿ.ಡಿ.ಮೌನೇಶ್ ಅವರಿಂದ ತತ್ವಪದ ಮತ್ತು ದಾಸರ ಪದಗಳು, ಸಂಡೂರು ತಾಲ್ಲೂಕಿನ ಭುಜಂಗನಗರದ ತಾಯಪ್ಪ ಅವರಿಂದ ಹಿಂದುಸ್ತಾನಿ ಶಾಸ್ತ್ರೀಯ ಸಂಗೀತ, ಸಂಗನಕಲ್ಲಿನ ಮಾರೆಮ್ಮ ಅವರಿಂದ ಸಂಪ್ರದಾಯ ಗೀತೆಗಳು, ಸಿರುಗುಪ್ಪ ತಾಲ್ಲೂಕಿನ ಅರಳಿಗನೂರಿನ ನೀಲಗಂಗಮ್ಮ ಅವರಿಂದ ಶೋಭಾನೆ ಪದಗಳು ಸೇರಿದಂತೆ ವಿವಿಧ ಸಂಗೀತ ಗಾಯನ ಇರಲಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ. ನಾಗರಾಜ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆರೋಗ್ಯವಾಗಿರಲು ಶುದ್ಧ ನೀರನ್ನೇ ಕುಡಿಯಿರಿ: ಡಾ. ಯಲ್ಲಾ ರಮೇಶ್ ಬಾಬು



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.29–ನಮ್ಮ ದೇಹಕ್ಕೆ ನೀರು ಅವಶ್ಯಕವಾಗಿದ್ದು, ಆರೋಗ್ಯವಾಗಿರಲು ಶುದ್ಧ ನೀರನ್ನು ಕುಡಿಯಬೇಕು. ಯಾವುದೇ ಕಾರಣಕ್ಕೂ ನದಿಯಲ್ಲಿನ ನೀರನ್ನು ಕುಡಿಯಲು ಬಳಸಬಾರದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಯಲ್ಲಾ ರಮೇಶ್‌ಬಾಬು ಅವರು ಹೇಳಿದರು.

ತುಂಗಭದ್ರಾ ಜಲಾಶಯದಿಂದ ನದಿಗೆ ಹೆಚ್ಚುವರಿ ನೀರು ಬಿಟ್ಟಿರುವ ಹಿನ್ನೆಲೆಯಲ್ಲಿ ಸಿರುಗುಪ್ಪ ತಾಲೂಕಿನ ಹಚೋಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದ ವ್ಯಾಪ್ತಿಗೆ ಒಳಪಡುವ ಚಿಕ್ಕಬಳ್ಳಾರಿ, ಹಳೆ ಶ್ರೀಧರಗಡ್ಡೆ ಹಾಗೂ ಹಚ್ಚೋಳಿ ಗ್ರಾಮಗಳಿಗೆ ಭೇಟಿ ನೀಡಿ ಅಲ್ಲಿನ ಜನರೊಂದಿಗೆ ಮುಂಜಾಗ್ರತಾ ಕ್ರಮಗಳ ಬಗ್ಗೆ ಚರ್ಚಿಸಿ ಮಾತನಾಡಿದರು.

ನದಿಯ ನೀರು ಕುಡಿಯುವುದರಿಂದ ವಾಂತಿ–ಭೇದಿ, ಶೀತ ಜ್ವರ ಹಾಗೂ ಬ್ಯಾಕ್ಟೀರಿಯಾ ಸೋಂಕಿನ ಕಾಯಿಲೆಗಳು ಬರುವ ಸಾಧ್ಯತೆ ಇರುತ್ತದೆ. ನೀರಿನ ಹರಿಯುವ ಮಟ್ಟ ಹೆಚ್ಚಾಗಿ ಹಾವು, ಚೇಳು ಇತರೆ ವಿಷ ಜಂತುಗಳು ಜನವಾಸ ಪ್ರದೇಶಕ್ಕೆ ಬರುವ ಸಂಭವವಿದೆ. ನೀರಿನ ಹರಿವಿನಿಂದ ಅಪಾಯ ಸಂಭವಿಸುವ ಸಂದರ್ಭದಲ್ಲಿ ಸುರಕ್ಷಿತೆಗಾಗಿ ಎತ್ತರದ ಪ್ರದೇಶಗಳನ್ನು ಆಯ್ದುಕೊಳ್ಳಿ ಎಂದು ಗ್ರಾಮದ ಜನರಿಗೆ ಹೇಳಿದರು.

ಬಳಿಕ ಹಚ್ಚೊಳ್ಳಿಯ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ತಾಲ್ಲೂಕು ಆರೋಗ್ಯ ಅಧಿಕಾರಿಗಳೊಂದಿಗೆ ಚರ್ಚಿಸಿ, ನದಿ ಪಾತ್ರದ ಪ್ರದೇಶದ ಜನರಿಗೆ ಬೇಕಾಗುವಂತಹ ಔಷಧಿಗಳು, ಇಂಜೆಕ್ಷನ್‌ಗಳು, ಹಾವು ನಂಜು ನಿರೋಧಕ ಲಸಿಕೆಗಳು, ಓ.ಆರ್.ಎಸ್ ಪಾಕೆಟ್ಸ್, ನೆಗಡಿ ಕೆಮ್ಮು ಜ್ವರದ ಮಾತ್ರೆಗಳು, ಐ ವಿ ಫ್ಲೂಡ್‌ಗಳು, ಹ್ಯಾಲೋಜನ್ ಮಾತ್ರೆಗಳು, ಬ್ಲೀಚಿಂಗ್ ಪೌಡರ್ ಇತರೆ ಚಿಕಿತ್ಸಾ ಸೇವಾ ಸೌಲಭ್ಯಗಳು ಸಾಕಷ್ಟು ಪ್ರಮಾಣದಲ್ಲಿ ಮುಂಚೂಣಿಯಾಗಿ ಸಂಗ್ರಹಿಸಿ ಎಚ್ಚರಿಕೆ ವಹಿಸಬೇಕು ಹಾಗೂ ಅಪಾಯಕಾರಿ ಪ್ರದೇಶಗಳಲ್ಲಿನ ಜನಾರೋಗ್ಯ ಸಮೀಕ್ಷೆ ಪ್ರತಿದಿನ ನಡೆಸಲು ಮತ್ತು ಸಾಂಕ್ರಾಮಿಕ ರೋಗಗಳು ಹರಡದಂತೆ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕೆಂದು ಆರೋಗ್ಯ ಸಿಬ್ಬಂದಿಗಳಿಗೆ ಸೂಚನೆ ನೀಡಿದರು.

ಸಮುದಾಯದಲ್ಲಿ ಗೃಹ ಆರೋಗ್ಯ ಕಾರ್ಯಕ್ರಮ, ಗರ್ಭಿಣಿ, ಗಂಡಾಂತರ ಗರ್ಭಿಣಿಯರ ಕಾಳಜಿ, ಸುಸೂತ್ರ ಹೆರಿಗೆ ಸೌಲಭ್ಯ, ತಾಯಿ ಮಗುವಿನ ಆರೈಕೆ ಕುರಿತಂತೆ ಆರೋಗ್ಯ ಪರ ಕ್ರಮಗಳನ್ನು ಅನುಸರಿಸಬೇಕು ಎಂದು ಸಿಬ್ಬಂದಿಗೆ ತಿಳಿಸಿದರು.

ಈ ಸಂದರ್ಭದಲ್ಲಿ ಆರೋಗ್ಯ ಮೇಲ್ವಿಚಾರಕ ಟಿ. ವಿರೂಪಾಕ್ಷಪ್ಪ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ರವಿಕುಮಾರ್, ಪ್ರಾಥಮಿಕ ಸುರಕ್ಷತಾ ಅಧಿಕಾರಿಗಳು, ಆರೋಗ್ಯ ನಿರೀಕ್ಷಣಾಧಿಕಾರಿಗಳು, ಶುಶ್ರೂಷಣಾಧಿಕಾರಿಗಳು ಸೇರಿದಂತೆ ಪ್ರಯೋಗಶಾಲ ತಂತ್ರಜ್ಞರು, ಔಷಧ ತಜ್ಞರು ಹಾಗೂ ಆಶಾ ಕಾರ್ಯಕರ್ತೆಯರು, ಸಾರ್ವಜನಿಕರು ಉಪಸ್ಥಿತರಿದ್ದರು.

## ತೋಟಗಾರಿಕೆಯಲ್ಲಿ ಮೌಲ್ಯ ಸರಪಳಿ: ಅಭಿವೃದ್ಧಿ ಕುರಿತು ಡಿಸಿ ಸಂಗಪ್ಪ ಜೊತೆ ಚರ್ಚೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.29–ಜಿಲ್ಲೆಯ ಸಮಗ್ರತೋಟಗಾರಿಕೆ ಅಭಿವೃದ್ದಿಗೆ ಸಂಬಂಧಿಸಿದ ಶೈತ್ಯಾಗಾರ ನಿರ್ಮಾಣ, ತೋಟಗಾರಿಕೆ ಉತ್ಪನ್ನಗಳ ಸಂಸ್ಕರಣೆ ಹಾಗೂ ಉತ್ಪನ್ನಗಳ ಪ್ಯಾಕಿಂಗ್ ಮತ್ತು ಶೇಖರಣೆ ಕುರಿತು ಏಶಿಯನ್ ಡೆವಲಪಮೆಂಟ್ ಬ್ಯಾಂಕ್(ಎಡಿಬಿ) ತಂಡ ಜಿಲ್ಲಾಧಿಕಾರಿ ಸಂಗಪ್ಪ ಅವರ ಜೊತೆ ಸೋಮವಾರ ಚರ್ಚೆ ನಡೆಸಿತು.

ಜಿಲ್ಲೆಯಲ್ಲಿ ಪ್ರಸ್ತುತ 6 ಶೈತ್ಯಾಗಾರಗಳಿದ್ದು,ಅವುಗಳಸಾಮರ್ಥ್ಯ ಜಿಲ್ಲೆಯಲ್ಲಿಉತ್ಪಾದನೆಯಾಗುತ್ತಿರುವ ಹಣ್ಣು ಮತ್ತು ತರಕಾರಿಗಳನ್ನು ಶೇಖರಿಸಿಡಲು ಸಾಧ್ಯವಾಗುತ್ತಿಲ್ಲ. ಈಹಿನ್ನೆಲೆಯಲ್ಲಿಶೈತ್ಯಾಗಾರಗಳನ್ನು ಪಿಪಿಪಿ ಮಾದರಿಯಲ್ಲಿ ನಿರ್ಮಾಣ ಮಾಡುವಕುರಿತು ಚರ್ಚಿಸಲಾಯಿತು.

ಹೋಬಳಿ ಮತ್ತು ಗ್ರಾಮ ಮಟ್ಟದಲ್ಲಿ ತೋಟಗಾರಿ–ಕೆ ಉತ್ಪನ್ನಗಳಿಗೆ ಈಗಾಗಲೇ ಮಹಾತ್ವಾಗಾಂಧಿ ಉದ್ಯೋಗ ಖಾತರಿಯೋಜನೆಯಡಿಲಭ್ಯವಿರುವ ಸಣ್ಣಗಾತ್ರದ ಗೋದಾಮಗಳನ್ನು ನಿರ್ಮಿಸಬೇಕಿದೆ. ಜಿಲ್ಲೆಯ ರೈತ ಉತ್ಪಾದಕ ಸಂಘಗಳಿಗೆ ಬೇಕಾಗುವ ಮೂಲ ಸೌಕರ್ಯ ಕಾರ್ಯಕ್ಷಮತೆ ಹಾಗೂ ಉತ್ಪನ್ನಗಳ ಲಭ್ಯತೆ, ಬೇಡಿಕೆ ಮತ್ತು ಪೂರೈಕೆ ಅನುಸಾರ ಸಂಬಂಧಪಟ್ಟ ಬೆಳೆಗಾರರ ಜೊತೆ ಸಮನ್ವಯ ಸಾಧಿಸಬೇಕು.

ತೋಟಗಾರಿಕೆ ಉತ್ಪನ್ನಗಳ ಮಾರಾಟ ಮತ್ತು ಖರೀದಿದಾರರ ಸಮ್ಮೇಳನವನ್ನು ರಾಜ್ಯಮಟ್ಟದಲ್ಲಿ ಏರ್ಪಡಿಸುವವಿಷಯಕ್ಕೆಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳು ಮಾತನಾಡಿ, ಈಗಾಗಲೇ ಜಿಲ್ಲೆಯಲ್ಲಿ ಸಮ್ಮೇಳನ ಮತ್ತು ಸಂವಾದ ಕಾರ್ಯಕ್ರಮ ಯಶಸ್ವಿಯಾಗಿದೆ. ರೈತರಿಂದ ಹಾಗೂ ಎಫ್‌ಪಿಓಗಳಿಂದ ಉತ್ತಮ ಪ್ರತಿಕ್ರಿಯೆ ಬಂದಿದೆ ಎಂದು ಎಡಿಬಿ ಪ್ರತಿನಿಧಿಗಳಿಗೆ ಮನವರಿಕೆ ಮಾಡಿದರು.

ಹವಾಮಾನ,ನೈಸರ್ಗಿಕವಿಕೋಪಗಳ ವಿವರಗಳನ್ನು ಹೆಚ್ಚಿನ ರೀತಿಯಲ್ಲಿ ಲಭ್ಯವಾಗುವಂತೆ ಸಾಮಾಜಿಕ ಜಾಲತಾಣಗಳಾದ ರೇಡಿಯೋ ಟಾಕ್,ಮೊಬೈಲ್ ಆ್ಯಪ್ ಅಭಿವೃದ್ದಿ ಪಡಿಸುವುದು, ತೋಟಗಾರಿಕೆ ಉತ್ಪನ್ನಗಳ ಮೌಲ್ಯವರ್ಧನೆ ಹಾಗೂ ಸಂಸ್ಕರಣೆ, ದ್ರಾಕ್ಷಿ ಮತ್ತು ದಾಳಿಂಬೆ ಬೆಳೆಗೆ ವಿಶೇಷ ಪ್ಯಾಕೇಜ ಗುರುತಿಸುವುದು,ಉತ್ಪನ್ನಗಳಸಂಸ್ಕರಣೆಗೆ ಬೇಕಾಗುವ ಯಂತ್ರೋಪಕರಣಗಳು ದುಬಾರಿಯಾಗಿದ್ದು, ಅವುಗಳನ್ನು ಎಫ್‌ಪಿಓ ಮುಖಾಂತರ ಖರೀದಿಸುವ ಕೆಲಸವಾಗಬೇಕು ಎಂದು ಸಭೆಯಲ್ಲಿ ಕೇಳಲಾಯಿತು.

ತೋಟಗಾರಿಕೆ ಉತ್ಪನ್ನಗಳ ಮಾರುಕಟ್ಟೆಯನ್ನುಉತ್ತಮಗೊಳಿಸಲು ಹೋಬಳಿ ಮತ್ತು ತಾಲೂಕಾ ಮಟ್ಟದಲ್ಲಿ ಕಲೆಕ್ಷನ್ ಸೆಂಟರ್ ಮತ್ತು ಆಕ್ಷನ್ ಸೆಂಟರ್‌ಗಳ ಸ್ಥಾಪನೆ,ಕ್ಲೀನ್ ಪ್ಲಾಂಟ್ ಪ್ರೋಗ್ರಾಮ್ ಅಡಿಯಲ್ಲಿ ಉತ್ತಮ ಗುಣಮಟ್ಟದ ದಾಳಿಂಬೆ, ದ್ರಾಕ್ಷಿ, ಮಾವು ಹಾಗೂ ನಿಂಬೆ ಸಸಿಗಳನ್ನು ಉತ್ಪಾದಿಸಲು ಸರ್ಕಾರಿ ಹಾಗೂ ಖಾಸಗಿ ನರ್ಸರಿಗಳಿಗೆ ಎಸ್.ಓಪಿ ಹಾಗೂ ವೈಜ್ಞಾನಿಕವಾಗಿ ಉತ್ಪಾದಿಸುವ ಅಂಶಗಳ ಕುರಿತು ತಂಡ ಚರ್ಚೆ ನಡೆಸಿತು.

ಎಡಿಬಿ ತಂಡದಲ್ಲಿ ಅಗ್ರಿಕಲ್ಚರ ಆಂಡ್ ನ್ಯಾಚುರಲ್ ರೆಸೋರ್ಸ ಸ್ಪೆಷಾಲಿಸ್ಟರಾಘವೇಂದ್ರನಡುವಿನಮನಿ, ಅಗ್ರಿಬ್ಯೂಜಿನೆಸ್ ಎಕ್ಸಪರ್ಟ ಮೇಘಾ ಪಾಂಡೆ, ರೂರಲ್ ಫೈನಾನ್ಸಿಂಗ್ ಎಕ್ಸಪರ್ಟ ಅಲೋಕಕುಮಾರಸಿಂಗ್, ತೋಟಗಾರಿಕೆ ಉಪನಿರ್ದೇಶಕ ರವೀಂದ್ರ ಹಕಾಟಿ ಇದ್ದರು.

ಜಿಲ್ಲೆಯ ನಾಲ್ವರು ಪತ್ರಕರ್ತರಿಗೆ ಪ್ರಶಸ್ತಿ ಪ್ರದಾನ

## ನಾಳೆ ಬಾಗಲಕೋಟೆಯಲ್ಲಿ ಜಿಲ್ಲಾಮಟ್ಟದ ಪತ್ರಿಕಾ ದಿನಾಚರಣೆ






ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.29–ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಯೋಗದಲ್ಲಿ ಜು.31 ರಂದು ನಗರದಲ್ಲಿ ಜಿಲ್ಲಾ ಮಟ್ಟದ ಪತ್ರಿಕಾ ದಿನಾಚರಣೆ ಜರುಗಲಿದೆ.

ಅಂದಿನ ಕಾರ್ಯಕ್ರಮದಲ್ಲಿ ನಾಲ್ವರು ಹಿರಿಯ ಪತ್ರಕರ್ತರ ಸ್ಮರಣಾರ್ಥ ಕೊಡಮಾಡುವ 4 ಪ್ರಶಸ್ತಿಗಳಿಗೆ ಜಿಲ್ಲೆಯ ನಾಲ್ವರು ಪತ್ರಕರ್ತರನ್ನುಆಯ್ಕೆಮಾಡಲಾಗಿದೆ.

ಹಿರಿಯ ಪತ್ರಕರ್ತರಿಗೆ ನೀಡಲಾಗುವ ದಿ.ಶರಣಬಸವರಾಜ ಜಿಗಜಿನ್ನಿ ಪ್ರಶಸ್ತಿಗೆ ಮಲ್ಲಿಕಾರ್ಜುನ ರಾಜನಾಳ, ದಿ.ಶ್ರೀಶೈಲ ಅಂಗಡಿ ಅವರ ಹೆಸರಿನಲ್ಲಿ ನೀಡುವ ಅತ್ಯುತ್ತಮ ಗ್ರಾಮೀಣ ಪತ್ರಕರ್ತ ಪ್ರಶಸ್ತಿಗೆ ಪ್ರಕಾಶ ಗುಳೇದಗುಡ್ಡ, ದಿ.ರಾಮ ಮನಗೂಳಿ ಸ್ಮರಣಾರ್ಥ ನೀಡುವ ಉತ್ತಮ ವರದಿಗಾರ ಪ್ರಶಸ್ತಿಗೆ ರವಿರಾಜ ಗಲಗಲಿ ಹಾಗೂ ದಿ.ಎನ್.ಎಚ್.ಶಾಲಗಾರ ಹೆಸರಿನಲ್ಲಿ ಕೊಡುವ ಸಮಾಜವೀರ ಪ್ರಶಸ್ತಿಗೆ ಎಂ.ಎಚ್.ನದಾಫ ಅವರನ್ನು ಆಯ್ಕೆ ಮಾಡಲಾಗಿದೆ.

ಗುರುವಾರ ಮುಂಜಾನೆ 10–30 ಗಂಟೆಗೆ ಜಿಲ್ಲಾ ಪಂಚಾಯತಿ ನೂತನ ಸಭಾಭವನದಲ್ಲಿ ನಡೆಯುವ ಸಮಾರಂಭದಲ್ಲಿ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವ್ಹಿ.ಪ್ರಭಾಕರ ಪ್ರಶಸ್ತಿ ಪ್ರದಾನ ಮಾಡುವರು. ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಕಾರ್ಯಕ್ರಮ ಉದ್ಘಾಟಿಸಲಿದ್ದು, ಶಾಸಕರುಗಳಾದ ಎಚ್.ವಾಯ್.ಮೇಟಿ, ಪಿ.ಎಚ್.ಪೂಜಾರ, ಸುನೀಲಗೌಡ ಪಾಟೀಲ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಆನಂದ ದಲಭಂಜನ ಅಧ್ಯಕ್ಷತೆ ವಹಿಸಲಿದ್ದು, ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರ ಆಶಯ ನುಡಿ ಹೇಳುವರು. ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ, ಉಪಾಧ್ಯಕ್ಷ ಪುಂಡಲೀಕ ಬಾಳೋಜಿ, ಜಿಲ್ಲಾಧಿಕಾರಿ ಸಂಗಪ್ಪ, ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯೆಲ್, ಜಿಪಂ ಸಿಇಓ ಶಶಿಧರ ಕುರೇರ, ಕಾನಿಪ ರಾಜ್ಯ ಕಾರ್ಯಕಾರಣಿ ಸದಸ್ಯ ಮಹೇಶ ಅಂಗಡಿ, ವಾರ್ತಾ ಇಲಾಖೆಯ ಸಹಾಯಕ ನಿರ್ದೇಶಕಿ ಕಸ್ತೂರಿ ಪಾಟೀಲ, ಕಾನಿಪ ಪ್ರಧಾನ ಕಾರ್ಯದರ್ಶಿ ಶಂಕರ ಕಲ್ಯಾಣಿ ಉಪಸ್ಥಿತರಿರುವರು.

## ಕರ್ನಾಟಕ ಪ್ರಾಂತ ರೈತ ಸಂಘ ಗ್ರಾಮ ಘಟಕದ ಪ್ರಥಮ ಸಮ್ಮೇಳನ

ಮಲ್ಲಮ್ಮ ನುಡಿ ವಾರ್ತೆ

ಶಹಪುರ್ ಸಮ್ಮೇಳನ ಬಾವುಟವನ್ನು ಗ್ರಾಮದ ಹಿರಿಯರಾದ ರಾಯಪ್ಪ ಜಿರಲೆ ಮತ್ತು ಹುಲಿಗಪ್ಪ ದೊಡ್ಮನಿ ನೆರವೇರಿಸಿದರು.ಈ ಸಮ್ಮೇಳನದ ಉದ್ಘಾಟನಾ ಸಮಾರಂಭದ ಅಧ್ಯಕ್ಷತೆಯನ್ನುಮಲ್ಲಮ್ಮ ದೊಡ್ಡಮನಿ ವಹಿಸಿದ್ದರು. ಸಮ್ಮೇಳನವನ್ನು ಉದ್ಘಾಟಿಸಿ ಮಾತನಾಡಿದ ಪ್ರಾಂತ ರೈತ ಸಂಘದ ತಾಲೂಕ ಕಾರ್ಯದರ್ಶಿ , ಭೀಮರಾಯ ಪೂಜಾರಿ. ಭೂಮಿ ನಿವೇಶನ ಬ್ಯಾಂಕ್ ಸಾಲಕ್ಕಾಗಿ ಮತ್ತು ಎಲ್ಲಾ ರೈತರಿಗೆ ರಸಗೊಬ್ಬರ ಕ್ರಿಮಿನಾಶಕಗಳು ಎಮ್ ಆರ್ ಪಿ ಬೆಲೆಯಲ್ಲಿ ರೈತರಿಗೆ ಸಿಗುವಂತಾಗಬೇಕು. ರೈತರ ಬೆಳೆಗಳಾದ ಹತ್ತಿ ಬತ್ತ ಮೆಣಸಿನ ಕಾಯಿ ಶೇಂಗಾ ತೊಗರಿ ಸಜ್ಜಿ ಜೋಳ ಮುಂತಾದ ಬೆಳೆಗಳಿಗೆ ಬೆಂಬಲ ಬೆಲೆ ಕೊಡಬೇಕು. ರೈತರ ಬೆಳೆಗಳಿಗೆ ಡಾಕ್ಟರ್ ಸ್ವಾಮಿನಾಥನ ವರದಿಯಂತೆ ಎಂಎಸ್‌ಪಿ ಖಾತ್ರಿ, ಜಾರಿಯಾಗಬೇಕು. ಎಲ್ಲ ಗ್ರಾಮಗಳಲ್ಲಿ ಶುದ್ಧ ಕುಡಿಯುವ ನೀರು ಒಳಚರಂಡಿ ಸಿಸಿ ರಸ್ತೆ ಮಹಿಳೆಯರಿಗೆ ಸಂಚಾಲಯದ ವ್ಯವಸ್ಥೆ ಸಿಗಬೇಕು. ಸಮಾನ ಕೆಲಸಕ್ಕೆ ಸಮಾನ ವೇತನ ಜಾರಿಗಾಗಿ ಮತ್ತು ಯೋಜನೆ ಬಂದ ಮಹಾತ್ಮ ಗಾಂಧಿ ನರೇಗಾ ಯೋಜನೆ ಕೆಲಸ ಸಮರ್ಪಕವಾಗಿ ಜಾರಿಯಾಗಬೇಕು. ವಲಸೆ ತಡೆಗಟ್ಟಲು ಒತ್ತಾಯಿಸಿ ರೈತ ಕೃಷಿ ಕೂಲಿಕಾರರಿಗೆ ಕಲ್ಯಾಣ ಮಂಡಳಿ ಸ್ಥಾಪಿಸಬೇಕು.

ಈ ಸಮ್ಮೇಳನದಲ್ಲಿ ತಾಲೂಕ ಅಧ್ಯಕ್ಷರಾದ ಭೀಮಣ್ಣ ಟಪ್ಪೇದಾರ್ ತಾಲೂಕಯುವರೈತಮುಖಂಡರಾದ ಭಾಗಣ್ಣ ಪೂಜಾರಿ ರಸ್ತಾಪುರ್. ನಂತರ ಗ್ರಾಮ ಘಟಕ ರಚನೆ ಮಾಡಲಾಯಿತು ಗೌರವ ಅಧ್ಯಕ್ಷರಾಗಿ :– ಭಾರತಿ ಶಿವಪ್ಪ. ಅಧ್ಯಕ್ಷರಾಗಿ :– ವಿಜಯಕುಮಾರ್ ದೊಡ್ಡಮನಿ. ನಾಗಣ್ಣ ಕರಿಕಿ ಮತ್ತು ಮಲ್ಲಮ್ಮ ಬನ್ನಟ್ಟಿ.ಭಾಗಣ್ಣ ಪೊಲೀಸ್ ಬಿರಾದಾರ ಹಳ್ಳೆಮ್ಮ ದೊರನಹಳ್ಳಿ. ಲಕ್ಷ್ಮಿ ಗಡಿಮನಿ. ಗ್ರಾಮ ಘಟಕದ ಸದಸ್ಯರಾದ ತಿಪ್ಪಣ್ಣ ಗಡ್ಡೆಮನಿ ಮರಿಲಿಂಗಪ್ಪ ಮಲಾರ್ ಅವರನ್ನು ಆಯ್ಕೆ ಮಾಡಲಾಯಿತು.

## ಜೆಜೆಎಂ ಕಾಮಗಾರಿ ಪರಿಶೀಲಿಸಿದ ಸಿಇಓ ಕುರೇರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.29–ಜಿಲ್ಲೆಯ ಹುನಗುಂದ ಹಾಗೂ ಇಲಕಲ್ಲ ತಾಲೂಕಿನ ವ್ಯಾಪ್ತಿಯಲ್ಲಿ ಅನುಷ್ಠಾನಗೊಳ್ಳುತ್ತಿರುವ ಜಲ ಜೀವನ ಮಿಷನ್ ಯೋಜನೆಯ ಕಾಮಗಾರಿಗಳನ್ನು ಜಿಲ್ಲಾ ಪಂಚಾಯತ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಮಂಗಳವಾರ ಪರಿಶೀಲನೆ ನಡೆಸಿದರು.

ಅಂಬಲಿಕೊಪ್ಪ, ಬಸವನಾಳ, ಮೂಗನೂರ, ಇನಾಂಬೂದಿಹಾಳ, ತುಂಬ, ರಕ್ಕಸಗಿ ಹಾಗೂ ಸೂಳೇಭಾವಿ ಗ್ರಾಮಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಗ್ರಾಮೀಣ ಕುಡಿಯುವ ನೀರಿನ ಯೋಜನೆಯಡಿ ನಡೆಯುತ್ತಿರುವ ಜಲಜೀವನ ಮಿಷನ್ ಕಾಮಗಾರಿಗಳನ್ನು ಪರಿಶೀಲಿಸಿ, ಸ್ಥಳೀಯ ಗ್ರಾಮ ಪಂಚಾಯತ್ ಸದಸ್ಯರು ಹಾಗೂ ಗ್ರಾಮಸ್ಥರೊಂದಿಗೆ ಸಂವಾದ ನಡೆಸಿ, ಕುಡಿಯುವ ನೀರಿನ ಲಭ್ಯತೆ, ನಳದ ಸಂಪರ್ಕ ಹಾಗೂ ನೀರಿನ ಗುಣಮಟ್ಟದ ಬಗ್ಗೆ ಮಾಹಿತಿ ಪಡೆದರು.

ಕಾಮಗಾರಿಗಳ ಗುಣಮಟ್ಟ ಹಾಗೂ ಸಮಯಬದ್ಧ ಪೂರ್ಣತೆಗೆ ಆದ್ಯತೆ ನೀಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ನೀರಿನ ಪರೀಕ್ಷಾ ವ್ಯವಸ್ಥೆ ಜಾರಿಗೊಳಿಸುವತ್ತ ಗಮನಹರಿಸಬೇಕು. ತಾಂತ್ರಿಕ ಅಡಚಣೆಗಳನ್ನು ತಕ್ಷಣ ಪರಿಹರಿಸಿ ಎಲ್ಲಾ ಮನೆಗಳಿಗೆ ನಳಗಳ ಸಂಪರ್ಕ ಒದಗಿಸುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದರಲ್ಲದೇ, ಕಾಮಗಾರಿಗಳ ಪ್ರಗತಿಯ ಮೆಚ್ಚುಗೆ ವ್ಯಕ್ತಪಡಿಸಿ, ಗ್ರಾಮಸ್ಥರಲ್ಲಿ ನೀರಿನ ಸಂರಕ್ಷಣೆಯ ಕುರಿತು ಜಾಗೃತಿ ಮೂಡಿಸಲು ಸಲಹೆ ನೀಡಿದರು. ಕ್ಲೋರಿನೇಶನ್ ಮಾಡುವ ಮುಖಾಂತರ ಶುದ್ಧ ಕುಡಿಯುವ ನೀರನ್ನು ಒದಗಿಸಬೇಕು ಎಂದ ಸಿಇಓ, ಶುದ್ಧ ನೀರಿನ ತಪಾಸಣೆಗಾಗಿ ಲ್ಯಾಬೋರೇಟರಿ ಕಿಟ್‌ಗಳ ಲಭ್ಯತೆ, ಸಾರ್ವಜನಿಕ ಜಾಗೃತಿ ಅಭಿಯಾನಗಳು ಮತ್ತು ಗ್ರಾಪಂ ಮಟ್ಟದಲ್ಲಿ ಜಲ ಸಮಿತಿಗಳ ಸಕ್ರಿಯ ಭಾಗವಹಿಸುವಿಕೆ ಕುರಿತು ಪರಿಶೀಲನೆ ಮಾಡಿದರು. ಗ್ರಾಮೀಣ ಕುಡಿಯುವ ನೀರು ಹಾಗೂ ನೈರ್ಮಲ್ಯ ವಿಭಾಗ ಕಾರ್ಯನಿರ್ವಾಹಕ ಅಭಿಯಂತರ ಆಕಾಶ ವಂದೆ, ಹುನಗುಂದ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಶಾಖಾಧಿಕಾರಿಗಳು, ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಇದ್ದರು.

## ಸಾಧನೆಗೆ ಶಿಕ್ಷಣದ ಜೊತೆ ಕೌಶಲ್ಯ ಬೆಳೆಸಿಕೊಳ್ಳಿ : ಪಟ್ಟಣಶೆಟ್ಟಿ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.29–ವಿದ್ಯಾರ್ಥಿಗಳು ಕೇವಲ ಶಿಕ್ಷಣವಂತರಾಗದೇ ವಿವಿಧ ಕೌಶಲ್ಯಗಳನ್ನು ಮೈಗೂಡಿಸಿಕೊಂಡಾಗ ಜೀವನದಲ್ಲಿ ಯಶಸ್ಸು ಸಾಧಿಸಲು ಸಾಧ್ಯ ಎಂದು ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಉಪನಿರ್ದೇಶಕ ಶಿವಾನಂದ ಪಟ್ಟಣಶೆಟ್ಟಿ ಹೇಳಿದರು.

ನವನಗರದ ಮೊರಾರ್ಜಿ ಶಾಲೆಯಲ್ಲಿ ಜಿಲ್ಲಾ ದಲಿತ, ಜಿಲ್ಲಾ ಪಂಚಾಯತ್, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಸಹಯೋಗದೊಂದಿಗೆ ಅಲ್ಪಸಂಖ್ಯಾತರ ಬಹುವಲಯ ಅಭಿವೃದ್ಧಿ (ಎಂ.ಎಸ್.ಡಿ.ಪಿ) ಯೋಜನೆಯಡಿ 10 ದಿನಗಳ ಕಾಲ ಜರುಗಿದ ಮೃದು ಕೌಶಲ್ಯ ತರಬೇತಿ ಕಾರ್ಯಾಗಾರದ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಕೇವಲ ಪ್ರಮಾಣ ಪತ್ರ ಪಡೆಯಲು ಶಿಕ್ಷಣವಂತರಾಗದೇ ತಮ್ಮಲ್ಲಿರುವ ಅಗಾಧ ಪ್ರತಿಭೆ ಬಳಸಿಕೊಂಡು ವಿವಿಧ ಕೌಶಲ್ಯ ತರಬೇತಿ ಪಡೆದುಕೊಂಡಾಗ ಉದ್ಯೋಗಗಳು ಹುಡುಕಿಕೊಂಡು ಬರುತ್ತವೆ ಎಂದರು.

ಇತ್ತೀಚೆಗೆ ಹಲವಾರು ಕ್ಷೇತ್ರಗಳಲ್ಲಿ ಆಧುನಿಕ ತಂತ್ರಜ್ಞಾನದ ಬಳಕೆ ಹೆಚ್ಚಾಗಿದ್ದು, ಒಂದು ಸ್ಮಾರ್ಟ್ ಫೋನ್ ನಿಂದ ಇಂದು ಒಬ್ಬ ನೌಕರ ಸಂಪಾದಿಸುವಷ್ಟು ಹಣ ಪಡೆದುಕೊಳ್ಳಬಹುದಾಗಿದೆ. ಉದ್ಯೋಗಿಗಳು ದಂಪತಿ ಸಮೇತ ಕಾರ್ಯ ನಿರ್ವಹಿಸುತ್ತಿರುವುದರಿಂದ ಮನೆಯಲ್ಲಿ ಶುಭ ಕಾರ್ಯಗಳು ಬಂದಾಗ ವಿವಿಧ ಕೌಶಲ್ಯಗಳಾದ ಡೇಕೋರೇಶನ್,ಹೂಗುಚ್ಛ,ಸೌಂದರ್ಯ ವರ್ಧಕ, ಮೆಹಂದಿ, ನಿರೂಪಣೆ ಮುಂತಾದ ಕೌಶಲ್ಯ ತಮ್ಮಲ್ಲಿದ್ದಲ್ಲಿ ಇಂತಹ ಕಾರ್ಯಕ್ರಮಗಳಲ್ಲಿ ಅವುಗಳನ್ನು ಬಳಸಿಕೊಂಡು ಹಣ ಸಂಪಾದಿಸಬಹುದು. ವಿದ್ಯಾರ್ಥಿ ಜೀವನದಲ್ಲಿ ಸಿಕ್ಕಂತಹ ಅವಕಾಶವನ್ನು ಸದುಪಯೋಗ ಪಡೆದುಕೊಳ್ಳಬೇಕು ಎಂದು ಅವರು ಹೇಳಿದರು.

ಕೌಶಲ್ಯ ಅಭಿವೃದ್ಧಿ ಅಧಿಕಾರಿ ಡಾ.ಗುರುಪಾದಪ್ಪ ಹಿರೇಮಠ ಮಾತನಾಡಿ,ವಿದ್ಯಾರ್ಥಿನಿಯರು ಕೌಶಲ್ಯ ಪ್ರವೀಣರಾಗುವ ಜೊತೆಗೆ ಭಾಷಾ ಪ್ರಾವಿಣ್ಯತೆಯನ್ನು ಪಡೆಯಬೇಕು. ಮಾತೃಭಾಷೆ ಕನ್ನಡವಾಗಿರುವುದರಿಂದ ಅದರೊಂದಿಗೆ ಉದ್ಯೋಗಕ್ಕೆ ಅನುಕೂಲವಾಗುವಂತೆ ಇಂಗ್ಲೀಷ, ಹಿಂದಿ ಭಾಷೆಗಳ ಮೇಲೆ ಹಿಡಿತ ಇಟ್ಟುಕೊಳ್ಳಬೇಕು. ಇದರಿಂದ ಉದ್ಯೋಗದಲ್ಲಿ ಉನ್ನತಿ ಸಾಧಿಸಲು ಸಾಧ್ಯವಾಗುತ್ತದೆ ಎಂದರು.

ಇದೇ ಸಂದರ್ಭದಲ್ಲಿ ಮೃದು ಕೌಶಲ್ಯಕ್ಕೆ ಸಂಬಂಧಿಸಿದ ಸ್ಪರ್ಧೆಯಲ್ಲಿ ಪ್ರಥಮ, ದ್ವಿತೀಯ, ತೃತೀಯ ಪ್ರಶಸ್ತಿ ಪಡೆದ ವಿದ್ಯಾರ್ಥಿಗಳನ್ನು ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಪ್ರಾಚಾರ್ಯ ಮೊಹಮ್ಮದ್ ಗರಗ್ ಹಾಗೂ ತರಬೇತುದಾರರಾದ ಶ್ರೀನಿವಾಸ ಕುಲಕರ್ಣಿ, ರಾಧಾ ಪವಿತ್ರಾಮಠದ, ಪದವಿ ವಿಜ್ಞಾನ ವಿಭಾಗದಲ್ಲಿ ಸೌಜನ್ಯಾ ಜೋರಾಪೂರ, ಪದವಿ ವಾಣಿಜ್ಯ ವಿಭಾಗದಲ್ಲಿ ಸೀತಲ್ ಜಾಫ್‌ಗಲ್ ಹಾಗೂ ಅಂಬಿಕಾ ಮಾಳೇದ ಅವರಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು.

## ಮಟಕಾ, ಲಾಟರಿ ಹಾವಳಿ ತಡೆಗೆ ಕ್ರಮ : ಡಿಸಿ ಸಂಗಪ್ಪ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.29–ಜಿಲ್ಲೆಯಲ್ಲಿ ಯಾವುದೇ ರೀತಿಯಲ್ಲಿ ಅನಧಿಕೃತ ಲಾಟರಿ ಮತ್ತು ಮಟಕಾ ಪ್ರಕರಣಗಳು ನಡೆಯದಂತೆ ಕಟ್ಟುನಿಟ್ಟಿನ ಕ್ರಮಕೈಗೊಳ್ಳುವಂತೆ ಜಿಲ್ಲಾಧಿಕಾರಿ ಸಂಗಪ್ಪ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ನಡೆದ ಅನಧಿಕೃತ ಲಾಟರಿ ಹಾವಳಿಯನ್ನು ನಿಯಮಗಳ ಚೌಕಟ್ಟಿನಲ್ಲಿಯೇ ನಿಯಂತ್ರಿಸುವ ಪ್ಲೈಯಿಂಗ್ ಸ್ಕ್ವಾಡ್ ಪ್ರಥಮ ತ್ರೈಮಾಸಿಕ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಮಟ್ಕಾ ನಡೆಯದಂತೆ ದಾಳಿಗಳನ್ನು ತೀವ್ರಗೊಳಿಸಿ ಕ್ರಮಕೈಗೊಳ್ಳಲು ಸೂಚಿಸಿದರು. ಪ್ರತಿ ತಿಂಗಳು 5ನೇ ತಾರಿಖಿನೊಳಗೆ ಅನಧಿಕೃತ ಲಾಟರಿ ಮತ್ತು ಮಟ್ಕಾ ಹಾವಳಿ ಕುರಿತಾದ ಮಾಹಿತಿಯನ್ನು ನೀಡಲು ತಿಳಿಸಿದರು.

ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಪ್ರಸನ್ನ ದೇಸಾಯಿ ಮಾತನಾಡಿ, ಜಿಲ್ಲೆಯಲ್ಲಿ ಅನಧಿಕೃತ ಲಾಟರಿ ಪ್ರಕರಣಗಳು ದಾಖಲಾಗಿರುವದಿಲ್ಲ. ಆದರೆ ಮಟಕಾ ಪ್ರಕರಣಗಳು 46 ದಾಖಲಾಗಿದ್ದು, 51 ಆರೋಪಿಗಳ ಮೇಲೆ ಪ್ರಕರಣ ದಾಖಲಿಸಲಾಗಿದೆ. ಹಿಂದಿನ ತ್ರೈಮಾಸಿಕದಲ್ಲಿ 108 ಪ್ರಕರಣಗಳು ದಾಖಲಾಗಿದ್ದು, ಅದರಲ್ಲಿ 21 ಪ್ರಕರಣಗಳಿಗೆ ಶಿಕ್ಷೆ ಮತ್ತು ದಂಡ ನೀಡಲಾಗಿದೆ. ಇನ್ನು 76 ಪ್ರಕರಣಗಳು ನ್ಯಾಯಾಲಯದಲ್ಲಿ ಬಾಕಿ ಇರುವುದಾಗಿ ಸಭೆಗೆ ತಿಳಿಸಿದರು.

ಜಿಲ್ಲೆಯಲ್ಲಿ ಇಲ್ಲಿಯವರೆಗೆ ಯಾವುದೇ ರೀತಿಯ ಅನಧಿಕೃತ ಲಾಟರಿ ಪ್ರಕರಣಗಳು ದಾಖಲಾಗಿರುವುದಿಲ್ಲ ಎಂಬ ಮಾಹಿತಿಯನ್ನು ವಾಣಿಜ್ಯ ತೆರಿಗೆ ಇಲಾಖೆಯ ಜ್ಞಾನೇಶ ತಿಪ್ಪಣ್ಣವರ ಸಭೆಗೆ ತಿಳಿಸಿದರು. ಸಣ್ಣ ಉಳಿತಾಯ ಹಾಗೂ ಸದಸ್ಯ ಸಮಾಲೋಚಕ ಮಲ್ಲಿಕಾರ್ಜುನ ಕೋಡಿ ಇದ್ದರು.

ಪತ್ರಿಕಾಲಯ ನಿರ್ಮಾಣಕ್ಕೆ 10 ಲಕ್ಷ ಭರವಸೆ:

## ಪತ್ರಿಕಾ ರಂಗ ವಿಶ್ವಾಸ ಉಳಿಸಿಕೊಂಡಿದೆ: ಶಾಸಕ ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.29–ಶಾಸಕಾಂಗ, ಕಾರ್ಯಾಂಗ, ನ್ಯಾಯಾಂಗ ಜೊತೆ ಜೊತೆಗೆ ದೇಶದ ಅಭಿವೃದ್ಧಿ ಕಾರ್ಯದಲ್ಲಿ ಕೈಜೋಡಿಸಿರುವ ಪತ್ರಿಕಾರಂಗ ಇಂದಿಗೂ ತನ್ನ ವಿಶ್ವಾಸಾರ್ಹತೆ ಉಳಿಸಿಕೊಂಡು ಮುನ್ನಡೆದಿದೆ ಎಂದು ಬೀಳಗಿ ಶಾಸಕ ಜೆ.ಟಿ.ಪಾಟೀಲ ಹೇಳಿದರು.

ಕಾರ್ಯನಿತರ ಪತ್ರಕರ್ತರ ಸಂಘ ಬೆಂಗಳೂರ, ಜಿಲ್ಲಾ ಘಟಕ ಬಾಗಲಕೋಟೆ ಹಾಗೂ ಕಾರ್ಯನಿರತ ಪತ್ರಿಕಾ ಬಳಗ ಕಲಾದಗಿ ಇವರು ಸೋಮವಾರ ತಾಲೂಕಿನ ಕಲಾದಗಿ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಸಭಾಂಗಣದಲ್ಲಿ ಹಮ್ಮಿಕೊಂಡ ಪತ್ರಿಕಾ ದಿನಾಚರಣೆ ಹಾಗೂ ಪ್ರತಿಭಾ ಪುರಸ್ಕಾರ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಪತ್ರಿಕೋದ್ಯಮಕ್ಕೆ ಕಲಾದಗಿ ಭಾಗದ ಪತ್ರಕರ್ತರ ಕೊಡುಗೆ ಅಪಾರವಾಗಿದೆ. ಈ ಭಾಗದ ಅಭಿವೃದ್ಧಿ ಕೆಲಸಗಳಿಗೆ ಅವರು ಕನ್ನಡಿಯಾಗಿದ್ದಾರೆ. ಪ್ರತಿ–ಕಾಗೋಷ್ಠಿ, ಇನ್ನಿತರ ಪತ್ರಿಕಾ ಕಾರ್ಯಚಟುಟಿಕೆಗಳಿಗಾಗಿ ಪತ್ರಿಕಾ ಕಾರ್ಯಾಲಯ ಅವಶ್ಯವಿದೆ ಎಂದ ಜೆ.ಟಿ.ಪಾಟೀಲ, ಕಾರ್ಯಲಯ ನಿರ್ಮಾಣಕ್ಕೆ 10 ಲಕ್ಷ ರೂ, ಕೊಡುವುದಾಗಿ ಭರವಸೆ ನೀಡಿದರು.

ಪತ್ರಿಕಾರಂಗ ಉದ್ಯಮವಾಗಿ ಬದಲಾವಣೆಗೊಂಡಿದ್ದರೂ ಪತ್ರಿಕೆಗಳು ತಮ್ಮ ವಿಶ್ವಾಸಾರ್ಹತೆ ಉಳಿಸಿಕೊಂಡಿವೆ. ಜನರು ಹಾಗೂ ಸಮಾಜ ಬೆಳವಣಿಗೆಗೆ ಬೇಕಾಗುವಂತ ಸುದ್ದಿಗಳನ್ನು ನೀಡಲಿ ಎಂದು ಅವರು ಹೇಳಿದರು.

ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕಿನ ಅಧ್ಯಕ್ಷ ಅಜಯಕುಮಾರ ಸರನಾಯಕ ಮಾತನಾಡಿ, ಸ್ವಾತಂತ್ರ್ಯ ಹೋರಾಟ ಹಾಗೂ ದೇಶದ ಬೆಳವಣಿಗೆಯಲ್ಲಿ ಪತ್ರಿಕೆಗಳ ಪಾತ್ರ ಮುಖ್ಯವಾಗಿದೆ, ಇಂದು ಪತ್ರಿಕೆಗಳನ್ನು ಓದುವ ಅಭಿರುಚಿಯನ್ನು ಯುವ ಪೀಳಿಗೆ ಬೆಳಿಸಿಕೊಳ್ಳಬೇಕು ಎಂದರು.

ಉಪನ್ಯಾಸ ನೀಡಿದ ನವನಗರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕನ್ನಡ ಉಪನ್ಯಾಸಕ ಡಾ.ಚಂದ್ರಶೇಖರ ಕಾಳನ್ನವರ, ಕನ್ನಡ ಪತ್ರಿಕೆಗಳು ನಡೆದು ಬಂದ ದಾರಿ ಹಾಗೂ ಪತ್ರಿಕೆ ರೂಪಗೊಳ್ಳುವಲ್ಲಿರುವ ಸಾಕಷ್ಟು ಜನರ ಶ್ರಮದ ಬಗ್ಗೆ ತಿಳಿಸಿ, ವಿದ್ಯಾರ್ಥಿಗಳು ಮತ್ತು ಯುವ ಸಮೂಹ ಮೊಬೈಲ್ ದಾಸರಾಗದೇ ಪತ್ರಿಕೆ ಓದುವ ದಾಸರಾಗಬೇಕು ಎಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಆನಂದ ದಲಭಂಜನ, ಪತ್ರಿಕಾ ದಿನಾಚರಣೆ ಸಾರ್ವಜನಿಕವಾಗಿ ಆಚರಣೆಗೊಳ್ಳಬೇಕು. ಪತ್ರಕರ್ತರಿಗೆ ಸಾರ್ವಜನಿಕರ ನೈತಿಕ ಬೆಂಬಲ ಅಗತ್ಯ ಎಂದರು.

ಹಿರಿಯ ಪತ್ರಕರ್ತ ರಾಮ ಮನಗೂಳಿ ಪ್ರಶಸ್ತಿ ಪುರಸ್ಕೃತ ಪತ್ರಕರ್ತ ದ.ರಾ. ಪುರೋಹಿತ ಅವರಿಗೆ ಸನ್ಮಾನಿಸಿ ಗೌರವಿಸಲಾಯಿತು. ಎಸ್.ಎಸ್.ಎಲ್.ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಉತ್ತಮ ಅಂಕ ಪಡೆದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಗೌರವಿಸಿ ಸನ್ಮಾನಿಸಲಾಯಿತು.

ವೇದಿಕೆ ಮೇಲೆ ಬಾಗಲಕೋಟೆ ತಹಶೀಲ್ದಾರ ವಾಸುದೇವ ಸ್ವಾಮಿ, ಎಂ.ಬಿ.ಸೌದಾಗರ, ಸಂಗಣ್ಣ ಮುಧೋಳ, ನಾರಾಯಣ ಹಾದಿಮನಿ, ಶ್ರೀಮತಿ ಖಾತುನಬ ರೋಂ, ಬಶೆಟ್ಟಿ ಅಂಗಡಿ, ಬಸವರಾಜ ಸಂಶಿ, ಫಕೀರಪ್ಪ ಮಾದರ, ಮಂಜುನಾಥ ಬಿಲಕೇರಿ ಉಪಸ್ಥಿತರಿದ್ದರು. ದ.ರಾ.ಪುರೋಹಿತ ಪ್ರಾಸ್ತಾವಿಕವಾಗಿ ಮಾತನಾಡಿದರು. ಚಂದ್ರಶೇಖರ ಹಡಪದ ನಿರೂಪಿಸಿದರು, ಸಿಕಂದರ ಬಾವಾಖಾನ ವಂದಿಸಿದರು.

## ಸಮಾಜ ಸೇವೆಯಲ್ಲೂ ಬಸವೇಶ್ವರ ಬ್ಯಾಂಕಿನ ಪಾತ್ರ ದೊಡ್ಡದು




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.29–ನಗರದ ಬಸವೇಶ್ವರ ಸಹಕಾರಿ ಬ್ಯಾಂಕು ಆರ್ಥಿಕ ಕ್ಷೇತ್ರದ ಜೊತೆಗೆ ಸಾಮಾಜಿಕ ಸೇವೆಯಲ್ಲಿಯೂ ಮುಂಚೂಣಿಯಲ್ಲಿದೆ ಎಂದು ಚರಂತಿಮಠದ ಪೂಜ್ಯ ಪ್ರಭುಸ್ವಾಮೀಜಿ ಹೇಳಿದರು.

ಪೂಜ್ಯರು ರವಿವಾರ ಜರುಗಿದ ಬ್ಯಾಂಕಿನ ವಾರ್ಷಿಕ ಮಹಾಸಭೆಯ ಸಾನಿಧ್ಯವಹಿಸಿ ಮಾತನಾಡಿ, ಪ್ರತಿಭಾನ್ವಿತ ವಿದ್ಯಾರ್ಥಿಗಳು, ಸಾಧಕರು, ಕ್ರೀಡಾಪಟುಗಳು ಹೀಗೆ ಎಲ್ಲ ಕ್ಷೇತ್ರಗಳಲ್ಲೂ ಗುರುತಿಸಿಕೊಳ್ಳುವವರನ್ನು ಸನ್ಮಾನಿಸಿ ಗೌರವಿಸುವ ಸಮಾಜಮುಖಿ ಕಾರ್ಯ ಮಾಡುತ್ತಿರುವುದು ಶ್ಲಾಘನೀಯವಾಗಿದೆ ಎಂದರು. ಬ್ಯಾಂಕಿನ ಪ್ರಗತಿ ನೋಟವನ್ನು ಸಭೆಗೆ ವಿವರಿಸಿದ ಅಧ್ಯಕ್ಷ ಪ್ರಕಾಶ ತಪಶೆಟ್ಟಿ, ಬ್ಯಾಂಕು 987 ಕೋಟಿ ರೂ.ಗಳ ಠೇವು ಹೊಂದಿದ್ದು, 610 ಕೋಟಿ ರೂ. ಸಾಲ ವಿತರಣೆ ಮಾಡಿದೆ. ಕಳೆದ ಮಾರ್ಚ ಅಂತ್ಯಕ್ಕೆ 2.36 ಕೋಟಿ ರೂ.ಗಳ ನಿವ್ವಳ ಲಾಭ ಗಳಿಸಿದೆ ಎಂದು ಹೇಳಿದರು.

ಮುಖ್ಯ ಕಾರ್ಯನಿರ್ವಹಣಾಧಿಕಾರಿ ವಿವೇಕಾನಂದ ಕೇಮಾಳಿ, ಅಧಿಕಾರಿಗಳಾದ ಬಿ.ಎಸ್. ನಾವಲಗಿ, ಎಸ್.ಬಿ.ಬದಾಮಿ, ಎಮ್.ಎಸ್.ಗುಡಗುಂಟಿ,ವ್ಹಿ.ಎಮ್.ಹಿರೇಮಠ, ವೆಂಕಟೇಶ ರಾಠೋಡ, ಶ್ರೀಮತಿ ಬಿ.ಜಿ.ಹೊನವಾಡ, ಪಿ.ಎನ್.ಹಳ್ಳಿಕೇರಿ ಮಹಾಸಭೆಯಲ್ಲಿ ವಿಷಯಗಳನ್ನು ಮಂಡಿಸಿ ಒಪ್ಪಿಗೆ ಪಡೆದರು. ಕಾರ್ಯಕ್ರಮದಲ್ಲಿ ಬೆಳಗಾವಿ ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯದ ಗೌರವ ಡಾಕ್ಟರೇಟ ಪದವಿ ಪಡೆದಿರುವ ಪೂಜ್ಯ ಪ್ರಭುಸ್ವಾಮೀಜಿ ಅವರಿಗೆ ಗೌರವಾಭಿನಂದನೆ ಸಲ್ಲಿಸಲಾಯಿತಲ್ಲದೇ, ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ವೆಂಕಪ್ಪ ಸುಗತೇಕರ ಅವರನ್ನು ಸನ್ಮಾನಿಸಲಾಯಿತು.

ಬ್ಯಾಂಕಿನಲ್ಲಿ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಎಮ್.ವ್ಹಿ.ಹನಮಶೆಟ್ಟಿ, ಎಸ್.ಎಸ್.ಡಾವಣಗೇರಿ, ಎಮ್.ಎಸ್. ಮಸೂತಿ, ಎಮ್.ವ್ಹಿ.ಹುನಗುಂದ ಅವರನ್ನು ಸನ್ಮಾನಿಸಲಾಯಿತಲ್ಲದೇ, ವಿದ್ಯಾಚೇತನ ಯೋಜನೆ ಅಡಿಯಲ್ಲಿ ಜಿಲ್ಲೆಗೆ ಎಸ್.ಎಸ್.ಎಲ್.ಸಿಯಲ್ಲಿ ಪ್ರಥಮ ಸ್ಥಾನ ಪಡೆದಿರುವ ಶಫಾ ನಿಂಬಾಳಕರ ಹಾಗೂ ದ್ವಿತೀಯ ಸ್ಥಾನ ಪಡೆದಿರುವ ಅರುಣ ಬಡಿಗೇರ, ಪವನ ಕುಟಕನಕೇರಿ, ಸಿಂಚನಾ ಪರೂತ, ಲಕ್ಷ್ಮೀ ಹೆರಕಲ್ ಮತ್ತು ಪಿ.ಯು.ಸಿ ಕಲಾ ವಿಭಾಗದಲ್ಲಿ ಪ್ರಥಮ ಸ್ಥಾನ ಪಡೆದ ವಿಜಯಲಕ್ಷ್ಮೀ ಬಡಿಗೇರ, ವಿಜ್ಞಾನ ವಿಭಾಗದಲ್ಲಿ ಭೂಮಿಕಾ ಬಡಿಗೇರ, ವಾಣಿಜ್ಯ ವಿಭಾಗದಲ್ಲಿ ಮಧುಶ್ರೀ ಶೆಟ್ಟೆನ್ನವರ, ಪದವಿ ಕಲಾ ವಿಭಾಗದಲ್ಲಿ ಪವಿತ್ರಾಮಠದ, ಪದವಿ ವಿಜ್ಞಾನ ವಿಭಾಗದಲ್ಲಿ ಸೌಜನ್ಯಾ ಜೋರಾಪೂರ, ಪದವಿ ವಾಣಿಜ್ಯ ವಿಭಾಗದಲ್ಲಿ ಸೀತಲ್ ಜಾಫ್‌ಗಲ್ ಹಾಗೂ ಅಂಬಿಕಾ ಮಾಳೇದ ಅವರಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು.

ನಿರ್ದೇಶಕರಾದ ಎಮ್.ಜಿ.ವಾಲಿ, ಸಿ.ಟಿ.ಪಾಟೀಲ, ಎಚ್.ಎಸ್.ರಾಠೋಡ, ವ್ಹಿ.ವ್ಹಿ. ಶಿರಗಣ್ಣವರ, ಎಸ್.ಎಸ್.ಜಿಗಳೂರ, ಎಸ್.ಟಿ.ಬಳ್ಳಾರಿ, ಎಸ್.ಸಿ.ಆರಬ್ಬಿ, ಎಸ್.ಸಿ.ಆಡಿನ, ಎಸ್.ಎಸ್.ಅರಶಿನಗೋಡಿ, ಎಸ್.ಎಸ್. ಹೆರಕಲ್, ಡಿ.ಟಿ.ನಾಯಕ, ಎಸ್.ಎಮ್. ತಪಶೆಟ್ಟಿ, ಎಸ್.ಬಿ ಕಲಬುರ್ಗಿ, ಎಸ್. ಎಮ್.ಗುಡಗುಂಟಿ, ಜಿ.ಎಸ್.ನಾರಾ, ಎನ್. ಆರ್.ಕುಲಕರ್ಣಿ, ಎಮ್.ಬಿ. ಬಸವನಾಳ ಮತ್ತು ಬಿ.ಜಿ.ಅಂಗಡಿ, ವ್ಹಿ.ಸಿ.ಚೌಧರಿ, ಐ.ಎಸ್.ನಾವಲಗಿ ಉಪಸ್ಥಿತರಿದ್ದರು.

ಸಂಜಯ ನಡುವಿನಮನಿ, ಮಹಾಬಳೇಶ್ವರ ಗುಡಗುಂಟಿ ನಿರೂಪಿಸಿದರು. ರವಿಕುಮಾರ ಪಟ್ಟಣದ ವಂದಿಸಿದರು. ನಂತರ ದೂರದರ್ಶನ ಕಲಾವಿದ ಸಂತೋಷ ಗದ್ದನಕೇರಿ ಅವರಿಂದ ಸಂಗೀತ ಕಾರ್ಯಕ್ರಮ ಜರುಗಿತು.

# ಬಿಜೆಪಿ-ಕಾಂಗ್ರೆಸ್ ಕಾರ್ಯಕರ್ತರ ನಡುವೆ ಮಾತಿನ ಚಕಮಕಿ





ಹುಮನಾಬಾದ್ :ತಾಲ್ಲೂಕಿನ ಹಳ್ಳಿಖೇಡ್ ಬಿ. ಪಟ್ಟಣದಲ್ಲಿ ನಡೆದ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಶಾಸಕ ಡಾ.ಸಿದ್ದಲಿಂಗಪ್ಪ ಪಾಟೀಲ ಚಾಲನೆ ನೀಡಿದರು.

ಮಲ್ಲಮ್ಮ ನುಡಿ ವಾರ್ತೆ

ಬೀದರ.ಜು.29:ಹುಮನಾಬಾದ ತಾಲ್ಲೂಕಿನ ಹಳ್ಳಿಖೇಡ್ ಬಿ.ಪಟ್ಟಣದಲ್ಲಿ ಚತುಷ್ಪಥ ರಸ್ತೆ ಅಭಿವೃದ್ಧಿ ಕಾಮಗಾರಿ ಭೂಮಿಪೂಜೆ ಕಾರ್ಯಕ್ರಮದ ವೇದಿಕೆ ಭಾಷಣ ನಡೆಯುತ್ತಿದ್ದ ವೇಳೆ ಬಿಜೆಪಿ ಹಾಗೂ ಕಾಂಗ್ರೆಸ್ ಕಾರ್ಯಕರ್ತರ ನಡುವೆ ಮಾತಿನ ಚಕಮಕಿ ನಡೆದು ಕೆಲ ಹೊತ್ತು ಉದ್ವಿಗ್ನ ಪರಿಸ್ಥಿತಿ ನಿರ್ಮಾಣವಾಗಿತ್ತು.

ವಿಧಾನ ಪರಿಷತ್ ಸದಸ್ಯ ಡಾ.ಚಂದ್ರಶೇಖರ ಪಾಟೀಲ ಮಾತನಾಡುವ ವೇಳೆ ಬಿಜೆಪಿ ಕಾರ್ಯಕರ್ತನೊಬ್ಬ ಅವಾಚ್ಯ ಶಬ್ದಗಳಿಂದ ನಿಂದಿಸಿದ್ದಾನೆ ಎಂದು ಕಾಂಗ್ರೆಸ್ ಕಾರ್ಯಕರ್ತರು ಮತ್ತು ಬಿಜೆಪಿ ಕಾರ್ಯಕರ್ತರು ನಡುವೆ ಮಾತಿಗೆ ಮಾತು ಬೆಳೆದು ಕೈ ಕೈ ಮಿಲಾಯಿಸುವ ಹಂತಕ್ಕೆ ತಲುಪುತ್ತಿದ್ದಂತೆ ಶಾಸಕ ಡಾ.ಸಿದ್ದಲಿಂಗಪ್ಪ ಪಾಟೀಲ ಹಾಗೂ ವಿಧಾನ ಪರಿಷತ್ ಸದಸ್ಯ ಡಾ. ಚಂದ್ರಶೇಖರ ಪಾಟೀಲರು ಕಾರ್ಯಕರ್ತರಿಗೆ ಸಮಾಧಾನ ಪಡಿಸಲು ಪ್ರಯತ್ನಿಸುತ್ತಿದ್ದರೂ ಸಮಾಧಾನ ಗೊಳ್ಳಲಿಲ್ಲ. ನಂತರ ಸಿಪಿಐ ಗುರು ಪಾಟೀಲ ಅವರೇ ಸ್ವತ ಮೈಕ್ ಹಿಡಿದು ಸರ್ಕಾರಿ ಕಾರ್ಯಕ್ರಮ ನಡೆಯುತ್ತಿದೆ. ಹೀಗಾಗಿ ಎಲ್ಲರೂ ಶಾಂತವಾಗಿ ಇರಬೇಕು. ಇಲ್ಲದಿರೆ ಕಾನೂನು ಕ್ರಮ ಕೈಗೊಳ್ಳಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ನಂತರ ಎರಡು ಪಕ್ಷರ ಕಾರ್ಯಕರ್ತರು ಸಮಾಧಾನಗೊಂಡರು. ಯಥಾವತ್ತಾಗಿ ಕಾರ್ಯಕ್ರಮ ಜರುಗಿತು.

ಶಾಸಕ ಡಾ.ಸಿದ್ದಲಿಂಗಪ್ಪ ಪಾಟೀಲ ಮಾತನಾಡಿ, ಹಳ್ಳಿಖೇಡ್ ಬಿ. ಪಟ್ಟಣದ ಜನರ ಬಹುದಿನಗಳ ಬೇಡಿಕೆಯಂತೆ ನಾಗೇಶ್ವರ ದೇವಸ್ಥಾನದ ಕ್ರಾಸ್‌ನಿಂದ ಇಲ್ಲಿಯ ಬಸವೇಶ್ವರ ವೃತ್ತದವರೆಗೆ ಸುಮಾರು 4 ಕೋಟಿ ಅನುದಾನದಲ್ಲಿ ಚತುಷ್ಪಥ ರಸ್ತೆ ನಿರ್ಮಾಣ ಮಾಡಲಾಗುತ್ತಿದೆ. ರಸ್ತೆಯ ಮಧ್ಯದಲ್ಲಿ ವಿದ್ಯುತ್ ದೀಪ ಅಳವಡಿಕೆಗೆ ಕಲ್ಯಾಣ ಕರ್ನಾಟಕ ಅನುದಾನದಲ್ಲಿ ನೀಡಲಾಗುತ್ತಿದೆ' ಎಂದರು.

ವಿಧಾನ ಪರಿಷತ್ ಸದಸ್ಯ ಡಾ.ಚಂದ್ರಶೇಖರ ಪಾಟೀಲ ಮಾತನಾಡಿ,'?4 ಕೋಟಿ ಅನುದಾನದಲ್ಲಿ ರಸ್ತೆ ನಿರ್ಮಾಣ ಕಾಮಗಾರಿ ಗುಣಮಟ್ಟದಿಂದ ಇರಬೇಕು. ಇಲ್ಲಿಯ ಮುಖಂಡರು ಸಹ ಕಾಮಗಾರಿ ಪರಿಶೀಲನೆ ನಡೆಸಬೇಕು' ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪುರಸಭೆ ಅಧ್ಯಕ್ಷೆ ಜಗದೇವಿ ಶಂಕೆ, ಮುಖ್ಯಾಧಿಕಾರಿ ನಿಂಗಪ್ಪ, ಮಹಾಂತಯ್ಯ ತೀರ್ಥ, ಅಬ್ದುಲ್ ರಸಾಕ್, ಮಲ್ಲಿಕಾರ್ಜುನ ಪ್ರಭಾ, ನಾಗರಾಜ ಹಿಬಾರೆ, ನರಸಿಂಗ್, ರವಿಂದ್ರ, ಎಂ.ಡಿ. ಆರೀಫ್, ವೀರಶಟ್ಟಿ, ಸುನೀಲ, ರೇವಪ್ಪ, ರವಿ ಸೇರಿದಂತೆ ಇತರರು ಇದ್ದರು.

# ಆತ್ಮಹತ್ಯೆಗೆ ಸಿದ್ಧನಾದ ರೈತ: ಬಗೆಹರಿದ ಸಮಸ್ಯೆ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಜು.29:ಬಸವಕಲ್ಯಾಣ ಹೊಲಕ್ಕೆ ಹೋಗುವ ದಾರಿಯಲ್ಲಿನ ಅಡೆತಡೆ ತೆರವುಗೊಳಿಸದಿದ್ದರೆ ಆತ್ಮಹತ್ಯೆ ಮಾಡಿಕೊಳ್ಳುತ್ತೇನೆ ಎಂದು ತಾಲ್ಲೂಕಿನ ಕೊಹಿನೂರ ಗ್ರಾಮದ ರೈತ ಪ್ರಶಾಂತ ಲಕಮಾಜಿ ಸೋಮವಾರ ತಹಶೀಲ್ದಾರ್ ಕಚೇರಿ ಎದುರಲ್ಲಿ ಧರಣಿ ಕುಳಿತಿದ್ದರಿಂದ ಸಮಸ್ಯೆ ಬಗೆಹರಿದಿದೆ.

ಪ್ರಶಾಂತ ಲಕಮಾಜಿ ಕೈಯಲ್ಲಿ ಹಗ್ಗ ಹಿಡಿದುಕೊಂಡು ಬಂದು ತಹಶೀಲ್ದಾರ್ ಅವರಿಗೆ ಭೇಟಿಯಾದರು.

ಹೊಲಕ್ಕೆ ಹೋಗುವ ದಾರಿಯಲ್ಲಿ ಕೆಲವರು ಪೈಪ್‌ಲೈನ್ ಅಳವಡಿಸಿದ್ದು ಅದನ್ನು ತೆಗೆಯಲು ಅನೇಕ ವರ್ಷಗಳಿಂದ ಆಗ್ರಹಿಸುತ್ತಿದ್ದರೂ ಯಾರೂ ಕ್ರಮ ತೆಗೆದುಕೊಂಡಿಲ್ಲ. ಒಂದು ವೇಳೆ ಶೀಘ್ರ ಕೆಲಸ ಆಗದಿದ್ದರೆ ಇಲ್ಲೇ ನೇಣು ಬಿಗಿದುಕೊಳ್ಳುತ್ತೇನೆ ಎಂದು ಬೆದರಿಕೆಯೊಡ್ಡಿದರು.

ಈ ಕಾರಣ ಕಂದಾಯ ಇಲಾಖೆ ಸಿಬ್ಬಂದಿ ತಕ್ಷಣ ಸ್ಥಳಕ್ಕೆ ಹೋಗಿ ಪೈಪ್‌ಲೈನ್ ತೆರವುಗೊಳಿಸಿದ್ದಾರೆ. ಈ ಬಗ್ಗೆ ಫೋಟೊ ತೋರಿಸಿದಾಗಲೇ ರೈತ ಧರಣಿ ಅಂತ್ಯಗೊಳಿಸಿದ್ದಾನೆ. ಧರಣಿಯಲ್ಲಿ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಆನಂದ ಪಾಟೀಲ, ಮುಖಂಡ ಶಿವಾ ಕಲ್ಲೋಜಿ ಮತ್ತಿತರರು ಸಹ ಪಾಲ್ಗೊಂಡಿದ್ದರು.

# ನಿಪುಣ ಕರ್ನಾಟಕ ಯೋಜನೆ: ಉದ್ಯೋಗಾವಕಾಶದ ಅಂತರ ಗುರುತಿಸಲು ಆ. 9 ಮತ್ತು 10ಕ್ಕೆ ಮೌಲ್ಯಮಾಪನ ಪರೀಕ್ಷೆ:ಪ್ರಿಯಾಂಕ್ ಖರ್ಗೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.29: ರಾಜ್ಯದ ಟೈಯರ್ 2 ಮತ್ತು ಟೈಯರ್ 3 ನಗರಗಳಲ್ಲಿ ಪದವೀಧರರಲ್ಲಿ ಹೆಚ್ಚುತ್ತಿರುವ ಉದ್ಯೋಗಾವಕಾಶದ ಅಂತರವನ್ನು ಪರಿಹರಿಸಲು ಮಾಹಿತಿ ತಂತ್ರಜ್ಞಾನ ಹಾಗೂ ಜೈವಿಕ ತಂತ್ರಜ್ಞಾನ ಇಲಾಖೆ ಮತ್ತು ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದ ಮೂಲಕ ಪ್ರಮುಖವಾಗಿ ಮರುಕೌಶಲ್ಯ ಮತ್ತು ಕೌಶಲ್ಯಾಭಿವೃದ್ಧಿ ಕಾರ್ಯಕ್ರಮವಾದ 'ನಿಪುಣ ಕರ್ನಾಟಕ' ಅಡಿಯಲ್ಲಿ ಬರುವ ಆಗಸ್ಟ್ 9 ಮತ್ತು 10 ರಂದು ಕಲಬುರಗಿಯಲ್ಲಿ ಆನ್‌ಲೈನ್ ಮೂಲಕ ಸ್ಟೆಮ್ ಅಭ್ಯರ್ಥಿಗಳ ಮೌಲ್ಯಮಾಪನ ಪರೀಕ್ಷೆ ನಡೆಸಲಾಗುತ್ತಿದೆ ಎಂದು ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಐ.ಟಿ–ಬಿ.ಟಿ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ಮಂಗಳವಾರ ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಕಲಬುರಗಿ–ಶಹಾಬಾದ ರಸ್ತೆಯಲ್ಲಿರುವ ಶೆಟ್ಟಿ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಾಜಿ ಕಾಲೇಜಿನಲ್ಲಿ ಈ ಮೌಲ್ಯಮಾಪನ ಪರೀಕ್ಷೆ ನಡೆಯಲಿದೆ. ಕಳೆದ ಏಪ್ರಿಲ್ ಮಾಹೆಯಲ್ಲಿ ಕಲಬುರಗಿಯಲ್ಲಿ ನಡೆದ ಬೃಹತ್ ಉದ್ಯೋಗ ಮೇಳದಲ್ಲಿ ಭೌತಿಕವಾಗಿ ಹಾಜರಾದ 10 ಸಾವಿರ ಅಭ್ಯರ್ಥಿಗಳ ಪೈಕಿ ಆಯ್ದ 2,500 ವಿಜ್ಞಾನ, ತಂತ್ರಜ್ಞಾನ, ಎಂಜಿನಿಯರಿಂಗ್ ಮತ್ತು ಗಣಿತ ಪದವೀಧರರನ್ನು ಗುರಿಯಾಗಿಸಿ ಈ ಮೌಲ್ಯಾಮಾಪನ ನಡೆಸಲಾಗುತ್ತಿದೆ ಎಂದರು.

ಇಲ್ಲಿನ ವಿದ್ಯಾರ್ಥಿಗಳು ಅಂಕ ಗಳಿಕೆಯಲ್ಲಿ ಜಾಣರಿದ್ದಾರೆ, ಆದರೆ ಕೈಗಾರಿಕೆ, ಕಂಪನಿಗಳಿಗೆ ಬೇಡಿಕೆ ಅನುಗುಣವಾಗಿ ಅವರಲ್ಲಿ ಕೌಶಲ್ಯ ಇಲ್ಲ. ಕಲಬುರಗಿ ಉದ್ಯೋಗ ಮೇಳದ ಸಂದರ್ಭದಲ್ಲಿ ಹಾಜರಾದ ಅಭ್ಯರ್ಥಿಗಳ ಅಧ್ಯಯನ ಮಾಡಿದಾಗ ಶೇ.70 ವಿದ್ಯಾರ್ಥಿಗಳು ಅಪ್ಟಿಟ್ಯೂಡ್ ಟೆಸ್ಟ್ ಪಾಸಾಗಲು ಸಮರ್ಥರಿಲ್ಲ ಎಂಬ ಅಂಶ ಕಂಡುಬಂದಿದೆ. ಶೇ. 63ಕ್ಕಿಂತ ಹೆಚ್ಚಿನ ಅಭ್ಯರ್ಥಿಗಳಿಗೆ ಸಂವಹನ ಕೌಶಲ್ಯದ ಕೊರತೆ ಇದೆ. ಈ ಕೊರತೆಯನ್ನು ನೀಗಿಸಲೆಂದೆ ಈ ಮೌಲ್ಯಮಾಪನ ಮಾಡಲಾಗುತ್ತಿದೆ. ಮೌಲ್ಯಮಾಪನದ ನಂತರ ಅವರ ಕೌಶಲ್ಯ ಕೊರತೆಯನ್ನು ನೀಗಿಸಲು ಅಗತ್ಯ ಕೌಶಲ್ಯ ನೀಡಿ ಅವರನ್ನು ಉದ್ಯೋಗಕ್ಕೆ ಸಿದ್ಧರನ್ನಾಗಿ ಮಾಡುವುದು ನಮ್ಮ ಗುರಿಯಾಗಿದೆ. ಸಾಂಪ್ರದಾಯಿಕ ಕೌಶಲ್ಯ ಕಾರ್ಯಕ್ರಮಗಳಿಗಿಂತ ಭಿನ್ನವಾಗಿ ಪ್ರತಿಯೊಬ್ಬ ಅಭ್ಯರ್ಥಿಯ ಅರ್ಹತೆ, ಸಂವಹನ, ಡಿಜಿಟಲ್ ಸಾಕ್ಷರತೆ ಮತ್ತು ನಡವಳಿಕೆಯ ಸಿದ್ಧತೆಯನ್ನು ಗಮನದಲ್ಲಿಟ್ಟುಕೊಂಡು ಇಲ್ಲಿ 90 ನಿಮಿಷಗಳ ಕಾಲ ಮೌಲ್ಯಮಾಪನ ಮಾಡಲಾಗುತ್ತದೆ. ಅನ್‌ಸ್ಟಾಪ್ ಸಂಸ್ಥೆ ಇದರ ಜವಾಬ್ದಾರಿ ಹೊತ್ತಿಕೊಂಡಿದೆ ಎಂದರು.

ಈ ಉಪಕ್ರಮವು ವಿದ್ಯಾರ್ಥಿಗಳಿಗೆ ಫಲಿತಾಂಶಗಳನ್ನು ಸುಧಾರಿಸುವುದಲ್ಲದೆ, ಉದ್ಯೋಗದಾತರಿಗೆ ಉದ್ಯೋಗ–ಸಿದ್ಧ ಅಭ್ಯರ್ಥಿಗಳನ್ನು ಸಜ್ಜುಗೊಳಿಸುತ್ತದೆ ಮತ್ತು ಶಿಕ್ಷಣ ಸಂಸ್ಥೆಗಳು ನಿಜವಾದ ಉದ್ಯಮದ ಬೇಡಿಕೆಗಳೊಂದಿಗೆ ತರಬೇತಿಯನ್ನು ಹೊಂದಿಸಲು ಸಹಾಯ ಮಾಡುತ್ತದೆ. ಎಲ್ಲಕ್ಕಿಂತ ಹೆಚ್ಚಾಗಿ, ಇದು ಸಮಗ್ರ ಪ್ರತಿಭೆ ಹಾಗೂ ಅಭಿವೃದ್ಧಿಯನ್ನು ಬೆಂಬಲಿಸುತ್ತದೆ ಮತ್ತು ಶ್ರೇಣಿ 2 ಮತ್ತು ಶ್ರೇಣಿ 3 ನಗರಗಳಲ್ಲಿ ಉದ್ಯೋಗ–ಸಿದ್ಧತಾ ದಾರಿಗಳನ್ನು ಬಲಪಡಿಸುತ್ತದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ರಾಜ್ಯದ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಹಾಗೂ ಜೀವನೋಪಾಯ ಖಾತೆ ಸಚಿವ ಡಾ.ಶರಣಪ್ರಕಾಶ ಪಾಟೀಲ ಮತ್ತು ಸಂಸದ ರಾಧಾಕೃಷ್ಣ ದೊಡ್ಡಮನಿ ವಿಶೇಷ ಕಾಳಜಿಯಿಂದ ರಾಜ್ಯದಲ್ಲಿಯೇ ಪ್ರಾಯೋಗಿಕವಾಗಿ ಕಲಬುರಗಿ ಜಿಲ್ಲೆಯಲ್ಲಿ ಇದನ್ನು ಮೊದಲು ಅನುಷ್ಠಾನಕ್ಕೆ ತರಲಾಗುತ್ತಿದೆ. ಇಲ್ಲಿನ ಸಾಧಕ–ಭಾಧಕಗಳನ್ನು ನೋಡಿ ರಾಜ್ಯದ ಇತರೆ ಭಾಗದಲ್ಲಿಯೂ ಜಾರಿಗೆ ತರಲಾಗುವುದು ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದರು.

ಆಗಸ್ಟ್ 7 ರೊಳಗೆ ಅರ್ಜಿ ಸಲಿಸಲು ಅವಕಾಶ: ಮೌಲ್ಯಾಮಾಪನ ಪರೀಕ್ಷೆಯಲ್ಲಿ ಭಾಗವಹಿಸಲು ನೋಂದಣಿ ಪ್ರಕ್ರಿಯೇ ಇಂದಿನಿಂದಲೆ ಆರಂಭವಾಗಿದ್ದು, ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡುವ ಮೂಲಕ ಅಥವಾ https://unstop.com/o/xvCVUWP/?ref=KalaburgiAssessment. ಅಂತರ್ಜಾಲದ ಮೂಲಕ ಆಗಸ್ಟ್ 7ರ ರಾತ್ರಿ 11.59 ಗಂಟೆ ವರೆಗೂ ನೋಂದಣಿ ಮಾಡಿಕೊಳ್ಳಬಹುದಾಗಿದೆ. ಆಗಸ್ಟ್ 7 ಮತ್ತು 8 ರಂದು ಪ್ರವೇಶ ಪತ್ರವನ್ನು ಎಸ್.ಎಂ.ಎಸ್. ಅಥವಾ ಇಮೇಲ್ ಮೂಲಕ ಕಳುಹಿಸಲಾಗುತ್ತದೆ. ಆಗಸ್ಟ್ 9 ಮತ್ತು 10 ರಂದು ಕಲಬುರಗಿಯ ಶೆಟ್ಟಿ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಸಂಸ್ಥೆಯಲ್ಲಿ ಬೆಳಿಗ್ಗೆ 10 ರಿಂದ 11.30, ಮಧ್ಯಾಹ್ನ 12 ರಿಂದ 1.30, ಮಧ್ಯಾಹ್ನ 2.30 ರಿಂದ 4 ಹಾಗೂ ಸಂಜೆ 4.30 ರಿಂದ 6 ಗಂಟೆ ವರೆಗೆ ಪ್ರತಿ ಬ್ಯಾಚಿನಲ್ಲಿ 500 ರಂತೆ ತಲಾ 90 ನಿಮಿಷಗಳ ಅವಧಿಯ ಆನ್‌ಲೈನ್ ಟೆಸ್ಟ್ ನಡೆಯಲಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಮಾಹಿತಿ ನೀಡಿದರು. ಇದೇ ಸಂದರ್ಭದಲ್ಲಿ ಸಚಿವರು ಮತ್ತು ಶಾಸಕ ಗಣ್ಯರು ನೋಂದಣಿ ಅಭಿಯಾನದ ಅಂಗವಾಗಿ ಕ್ಯೂರ್ ಕೋಡ್ ಬಿಡುಗಡೆಗೊಳಿಸಿದರು. ಪತ್ರಿಕಾಗೋಷ್ಠಿಯಲ್ಲಿ ರಾಜ್ಯದ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಹಾಗೂ ಜೀವನೋಪಾಯ ಖಾತೆ ಸಚಿವ ಡಾ.ಶರಣಪ್ರಕಾಶ ಪಾಟೀಲ, ಶಾಸಕರಾದ ಅಲ್ಲಮಪ್ರಭು ಪಾಟೀಲ ಮತ್ತು ಎಂ.ವೈ.ಪಾಟೀಲ, ವಿಧಾನ ಪರಿಷತ್ ಶಾಸಕ ಜಗದೇವ ಗುತ್ತೇದಾರ, ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜಹರ್ ಆಲಂ ಖಾನ್, ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್, ನಗರ ಪೊಲೀಸ್ ಆಯುಕ್ತ ಡಾ.ಎಸ್.ಡಿ. ಶರಣಪ್ಪ, ಎಸ್.ಪಿ. ಅಡ್ಡೂರು ಶ್ರೀನಿವಾಸಲು, ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಜಿಲ್ಲಾ ಕೈಗಾರಿಕೆ ಕೇಂದ್ರದ ಜಂಟಿ ನಿರ್ದೇಶಕ ಅಬ್ದುಲ್ ಅಜೀಮ್, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ನಾಗುಬಾಯಿ ಇದ್ದರು.

# ಟ್ರಂಪ್ ಸುಳ್ಳುಗಾರ ಎಂದು ಮೋದಿ ಹೇಳಲಿ: ರಾಹುಲ್ ಗಾಂಧಿ ಸವಾಲ್



ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಜು.29: ಟ್ರಂಪ್ 29 ಬಾರಿ ಕದನ ವಿರಾಮ ಮಾಡಿಸಿದ್ದು ನಾನೇ ಎಂದು ಹೇಳುತ್ತಾರೆ. ಅದು ಸುಳ್ಳಾದರೆ, ಪ್ರಧಾನಿ ಮೋದಿಗೆ ಧೈರ್ಯ ಇದ್ದರೆ ಸದನದಲ್ಲಿ ಟ್ರಂಪ್ ಸುಳ್ಳುಗಾರ ಎಂದು ಹೇಳಲಿ. ಇಂದಿರಾಗಾಂಧಿಯವರ ಅರ್ಧದಷ್ಟು ಧೈರ್ಯ ಇದ್ದರೆ ಹೇಳಿ ಬಿಡಲಿ ಎಂದು ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಸವಾಲು ಹಾಕಿದ್ದಾರೆ.

ಅಪರೇಷನ್ ಸಿಂಧೂರದ ಬಗ್ಗೆ ಲೋಕಸಭೆಯಲ್ಲಿ ಚರ್ಚೆ ವೇಳೆ ಅವರು ಮಾತನಾಡಿದರು. ಈ ವೇಳೆ ಪಹಲ್ಗಾಮ್ ದಾಳಿ ಬಳಿಕ ಡೊನಾಲ್ಡ್ ಟ್ರಂಪ್ ಜೊತೆಗೆ ದಾಳಿಯ ಮಾಸ್ಟರ್ ಮೈಂಡ್ ಪಾಕ್ ಸೇನಾಧಿಕಾರಿ ಜನರಲ್ ಮುನೀರ್ ಔತಣಕೂಟಕ್ಕೆ ಹೋಗುತ್ತಾರೆ. ಆದರೆ ಪ್ರಧಾನಿ ನರೇಂದ್ರ ಮೋದಿ ಅಲ್ಲಿಗೆ ಹೋಗಲು ಸಾಧ್ಯವಾಗಲಿಲ್ಲ ಎಂದು ವ್ಯಂಗ್ಯವಾಡಿದ್ದಾರೆ.

ಸೇನೆಯನ್ನು ಬಳಕೆ ಮಾಡಲು ರಾಜಕೀಯ ದೃಢ ಸಂಕಲ್ಪ ಇರಬೇಕು. ಸೇನೆಗೆ ಪೂರ್ಣ ಪ್ರಮಾಣದ ಸ್ವಾತಂತ್ರ್ಯ ಕೊಡಬೇಕು. 1971ರ ಯುದ್ಧ ಮತ್ತು ಆಪರೇಷನ್ ಸಿಂಧೂರವನ್ನು ರಾಜನಾಥ್ ಸಿಂಗ್ ಹೋಲಿಕೆ ಮಾಡಿದರು. ಆದರೆ 1971 ರಲ್ಲಿ ರಾಜಕೀಯ ದೃಢ ಸಂಕಲ್ಪ ಇತ್ತು. ಜಾಗತಿಕವಾಗಿ ದೊಡ್ಡ ದೇಶಗಳು ಅಡ್ಡ ಬಂದವು. ಆದರೂ ಇಂದಿರಾಗಾಂಧಿ ಹೆದರದೇ ಸೇನೆಗೆ ಪೂರ್ಣ ಪ್ರಮಾಣದ ಸ್ವಾತಂತ್ರ್ಯ ನೀಡಿದ್ದರು. ಅಂದು ಪಾಕಿಸ್ತಾನದ ಒಂದು ಲಕ್ಷ ಸೈನಿಕರು ಶರಣಾದರು ಎಂದಿದ್ದಾರೆ. ಆಪರೇಷನ್ ಸಿಂಧೂರದ ವೇಳೆ, ಪಾಕಿಸ್ತಾನಕ್ಕೆ ದಾಳಿ ಮಾಡುತ್ತಿದ್ದೇವೆ ಎಂದು ಮಾಹಿತಿ ನೀಡಿದ್ದರು. ಇದನ್ನು ರಕ್ಷಣಾ ಸಚಿವರೇ ಹೇಳಿದ್ದಾರೆ. ಮಿಲಿಟರಿ ಸ್ಥಳಗಳ ಮೇಲೆ ದಾಳಿ ಮಾಡಲ್ಲ ಎಂದು ನಮ್ಮ ವಾಯುಸೇನೆಯನ್ನು ಕಳುಹಿಸಿದ್ದರು. ಇದರ ಅರ್ಥ ಏನು? ಸೇನೆಯನ್ನು ಕಟ್ಟಿಹಾಕಿದಂತೆ ಅಲ್ವೇ? ನೀವೂ ದಾಳಿಗೂ ಮುನ್ನವೇ ರಾಜಕೀಯ ದೃಢ ಸಂಕಲ್ಪ ತೋರಲೇ ಇಲ್ಲ. ನೀವು ಹೋರಾಟ ನಡೆಸಲು ಬಯಸುವುದಿಲ್ಲ. ನಿಮಗೆ ರಾಜಕೀಯ ಇಚ್ಛಾಶಕ್ತಿಯೇ ಇಲ್ಲ ಎಂದು ಕೇಂದ್ರದ ವಿರುದ್ಧ ಅಸಮಾಧಾನ ಹೊರಹಾಕಿದ್ದಾರೆ.

ಪಾಕಿಸ್ತಾನಕ್ಕೆ ಮಧ್ಯರಾತ್ರಿ ಫೋನ್ ಮಾಡಿ ಹೇಳುವ ಅಗತ್ಯ ಏನಿತ್ತು? ಇದು ಹೇಗಿದೆ ಎಂದರೆ ನಾನು ಒಂದು ಹೊಡೆಯುತ್ತೇನೆ. ನೀನು ವಾಪಸ್ ಹೊಡೆಯಬಾರದು ಎನ್ನುವಂತಿದೆ. ಪ್ರಧಾನಿ ಇಮೇಜ್ ಕಾಪಾಡಲು ಈ ಎಲ್ಲಾ ಪ್ರಯತ್ನ ಮಾಡಲಾಗಿದೆ. ಸೈನಿಕರು ಹುಲಿಗಳು, ನಾನು ಸೈನಿಕರನ್ನು ಭೇಟಿಯಾದಗ ಅವರ ಕೈ ಮುಟ್ಟುತ್ತೇನೆ. ಅವರು ದೇಶಕ್ಕಾಗಿ ಪ್ರಾಣ ತ್ಯಾಗಕ್ಕೂ ಸಿದ್ಧರಿರುತ್ತಾರೆ. ಅಂತಹ ಹುಲಿಗಳ ಕೈ ಕಟ್ಟಿಹಾಕದೇ, ಬಿಟ್ಟು ಬಿಡಬೇಕು ಎಂದಿದ್ದಾರೆ.

ಎಲ್ಲಾ ದೇಶಗಳು ಭಯೋತ್ಪಾದಕ ದಾಳಿ ವಿರೋಧಿಸಿವೆ ಎಂದು ರಕ್ಷಣಾ ಸಚಿವರು ಹೇಳಿದ್ದಾರೆ. ಇದು ನೂರಕ್ಕೆ ನೂರರಷ್ಟು ಸತ್ಯ. ಆದರೆ ಪಹಲ್ಗಾಮ್ ದಾಳಿ ಬಳಿಕ ಪಾಕಿಸ್ತಾನವನ್ನು ಯಾರು ಟೀಕಿಸಲಿಲ್ಲ. ಎಲ್ಲರೂ ಭಯೋತ್ಪಾದನೆ ವಿರೋಧ ಮಾಡಿದರು. ಒಂದೇ ಒಂದು ದೇಶ ಪಾಕಿಸ್ತಾನವನ್ನು ಟೀಕಿಸಲಿಲ್ಲ ಎಂದರು. ಪಹಲ್ಗಾಮ್ ದಾಳಿಯಾದಾಗ ನಾವು ವಿರೋಧ ಪಕ್ಷಗಳು ಒಟ್ಟಾಗಿ ಸರ್ಕಾರವನ್ನು ಬೆಂಬಲಿಸಿದ್ದೆವು. ದಾಳಿ ಬಳಿಕ ಕರ್ನಾಲ್‌ಗೆ ತೆರಳಿ ಅಲ್ಲಿ ಸೈನಿಕನ ಕುಟುಂಬವೊಂದನ್ನು ಭೇಟಿ ಮಾಡಿದ್ದೆ. ಅಲ್ಲಿಯೇ ಎರಡು ಗಂಟೆ ಕಳೆದೆ, ಅದು ನಮ್ಮದೇ ಮನೆ ಎನ್ನಿಸಿತ್ತು. ಆಗ ಆ ಮನೆಯಲ್ಲಿದ್ದ ಸಹೋದರಿ ?ನಾನು ಬಾಗಿಲು ನೋಡುತ್ತಿದ್ದೇನೆ ಎಂದೂ ಸಹೋದರ ಬರಲ್ಲ ಎಂದಳು ಎಂದು ಸೈನಿಕನ ಸಹೋದರಿಯ ಮಾತನ್ನು ನೆನಪಿಸಿಕೊಂಡಿದ್ದಾರೆ. ಅಲ್ಲದೇ, ಮಗನ ಮುಂದೆಯೇ ತಂದೆಯನ್ನು ಹತ್ಯೆ ಮಾಡಲಾಗಿದ್ದ ಉತ್ತರ ಪ್ರದೇಶದಲ್ಲಿ ಬೇರೆ ಕುಟುಂಬವೊಂದನ್ನು ಭೇಟಿಯಾಗಿದ್ದೆ ಎಂದು ಹೇಳಿಕೊಂಡರು.

# ಕೆ.ಕೆ.ಆರ್.ಡಿ.ಬಿ. ಮಂಡಳಿಯ 5,000 ಕೋಟಿ ರೂ. ಕ್ರಿಯಾ ಯೋಜನೆಗೆ ರಾಜ್ಯಪಾಲರ ಒಪ್ಪಿಗೆ:

## ಶಾಸಕರು ಆ. 15 ರೊಳಗೆ ಪ್ರಸ್ತಾವನೆ ಸಲ್ಲಿಸಬೇಕು:ಪ್ರಸಕ್ತ ವರ್ಷವೇ ಪೂರ್ತಿ ಹಣ ಖರ್ಚು ಮಾಡಲು ಸರ್ವ ಪ್ರಯತ್ನ:ಡಾ.ಅಜಯ್ ಸಿಂಗ್

ಕಲಬುರಗಿ,ಜು.29: ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಪ್ರಸಕ್ತ 2025–26ನೇ ಸಾಲಿನ 5,000 ಕೋಟಿ ರೂ. ಮೊತ್ತದ ಮೈಕ್ರೋ ಮತ್ತು ಮ್ಯಾಕ್ರೋ ಕ್ರಿಯಾ ಯೋಜನೆಗೆ ರಾಜ್ಯಪಾಲರು ಇತ್ತೀಚೆಗೆ ಅನುಮೋದನೆ ನೀಡಿದ್ದು, ಇದೇ ಆರ್ಥಿಕ ವರ್ಷಾಂತ್ಯಕ್ಕೆ ಸಂಪೂರ್ಣವಾಗಿ ಅನುದಾನ ಖರ್ಚು ಮಾಡಲು ಸರ್ವ ಪ್ರಯತ್ನ ಮಾಡಲಾಗುವುದು ಎಂದು ಕೆ.ಕೆ. ಆರ್.ಡಿ.ಬಿ.ಮಂಡಳಿ ಅಧ್ಯಕ್ಷ ಡಾ. ಅಜಯ್ ಧರ್ಮಸಿಂಗ್ ಹೇಳಿದರು.

ಮಂಗಳವಾರ ಕಲಬುರಗಿ ಐವಾನ್–ಎ–ಶಾಹಿ ಪ್ರದೇಶದಲ್ಲಿರುವ ಮಂಡಳಿ ಕಚೇರಿ ಸಭಾಂಗಣದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಪ್ರಸಕ್ತ ವರ್ಷ ರಾಜ್ಯಪಾಲರಿಂದ ಬೇಗನೆ ಕ್ರಿಯಾ ಯೋಜನೆಗೆ ಅನುಮೋದನೆ ನೀಡಿದ್ದು ಸಂತಸ ತಂದಿದೆ. ಪ್ರದೇಶದ ಶಾಸಕರು ಬರುವ ಆಗಸ್ಟ್ 15 ರೊಳಗೆ ಜಿಲ್ಲಾಧಿಕಾರಿಗಳ ಮೂಲಕ ಪ್ರಸ್ತಾವನೆ ಸಲ್ಲಿಸಿದಲ್ಲಿ ಇದೇ ವರ್ಷ ಸುಮಾರು 4,500 ಕೋಟಿ ರೂ.ಕ್ಕಿಂತ ಹೆಚ್ಚಿನ ಹಣ ಖರ್ಚು ಮಾಡುವ ಗುರಿ ಹೊಂದಲಾಗಿದೆ ಎಂದರು.

ಮಂಡಳಿಗೆ ನೀಡಿದ ಹಣ ಖರ್ಚು ಮಾಡಲ್ಲ ಎಂಬ ಅಪವಾದ ಇದೆ. ಆದರೆ ತಾವು ಅಧಿಕಾರ ವಹಿಸಿಕೊಂಡ ನಂತರ 2023–24ರಲ್ಲಿ ಡಿಸೆಂಬರ್ ಅಂತ್ಯಕ್ಕೆ ಕ್ರಿಯಾ ಯೋಜನೆಗೆ ಅನುಮೋದನೆ ದೊರೆತ ನಂತರ ಆ ವರ್ಷದಲ್ಲಿ ಮೊದಲ ಬಾರಿಗೆ 2,009 ಕೋಟಿ ರೂ. ಮತ್ತು 2024–25ರಲ್ಲಿ ಆಗಸ್ಟ್‌ನಲ್ಲಿ ಕ್ರಿಯಾ ಅನುಮೋದನೆ ದೊರೆತ ನಂತರ ಕಳೆದ ಮಾರ್ಚ್ ಅಂತ್ಯಕ್ಕೆ 3,158 ಕೋಟಿ ರೂ. ಸೇರಿ ಕಳೆದ ಎರಡು ವರ್ಷದಲ್ಲಿ ದಾಖಲೆ ಪ್ರಮಾಣದಲ್ಲಿ 5,167 ಕೋಟಿ ರೂ. ಹಣ ಪ್ರದೇಶದ ಅಭಿವೃದ್ಧಿಗೆ ವಿನಿಯೋಗಿಸಲಾಗಿದೆ ಎಂದರು.

ಪ್ರಸಕ್ತ 2025–26ನೇ ಸಾಲಿನಲ್ಲಿ ಕಲಬುರಗಿ ಮತ್ತು ಯಾದಗಿರಿಯಲ್ಲಿ ಸಣ್ಣ ಕೈಗಾರಿಕೆ ಸ್ಥಾಪನೆಗೆ ಪ್ರೋತ್ಸಾಹಿಸಲು ಮಂಡಳಿ ಮತ್ತು ಸಣ್ಣ ಕೈಗಾರಿಕೆ ಇಲಾಖೆಯಿಂದ 200 ಕೋಟಿ ರೂ. ವೆಚ್ಚದಲ್ಲಿ ಇಂಡಸ್ಟ್ರಿ ಹಬ್ ಮಾಡಲಾಗುವುದು. ಕಲ್ಯಾಣ ಭಾಗದಲ್ಲಿ ತಾಪಮಾನ ಹೆಚ್ಚಿರುವುದರಿಂದ ಸಮತೋಲನ ಕಾಪಾಡುವ ನಿಟ್ಟಿನಲ್ಲಿ ಅರಣ್ಯ ಇಲಾಖೆಯ ಸಹಯೋಗದೊಂದಿಗೆ "ಅರಣ್ಯ ಆವಿಷ್ಕಾರ" ಯೋಜನೆಯಡಿ 100 ಕೋಟಿ ರೂ. ವೆಚ್ಚದಲ್ಲಿ ಅರಣ್ಯೀಕರಣ ಮಾಡಲಾಗುವುದು. ಪ್ರದೇಶದ ಗ್ರಾಮೀಣ ಭಾಗದಲ್ಲಿ ಸಮುದಾಯ ಶೌಚಾಲಯ ಸ್ಥಾಪಿಸಲಾಗುವುದು ಎಂದರು.



ಮಂಡಳಿಯಿಂದ ಎಸ್.ಸಿ.ಪಿ–ಟಿ.ಎಸ್.ಪಿ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಸಮುದಾಯದ ಕಲ್ಯಾಣಕ್ಕೆ 1,500 ಕೋಟಿ ರೂ. ವಹಣ ಮೀಸಲಿರಿಸಿದೆ. ಅಲ್ಪಸಂಖ್ಯಾತ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸಹಯೊಗದೊಂದಿಗೆ ವಸತಿ ನಿಲಯ ಸ್ಥಾಪಿಸಲಾಗುತ್ತಿದೆ ಎಂದು ಪ್ರಸಕ್ತ ವರ್ಷದ ಮಂಡಳಿಯ ನೂತನ ಯೋಜನೆಗಳ ಕುರಿತು ಅಜಯ್ ಸಿಂಗ್ ಮಾಹಿತಿ ನೀಡಿದರು.

ಕಲ್ಯಾಣ ಪಥಕ್ಕೆ ಅನುದಾನ ಮುಂದುವರಿಕೆ: ಪ್ರದೇಶದಲ್ಲಿ ಗ್ರಾಮೀಣ ರಸ್ತೆ ಸುಧಾರಣೆಗೆ ಕಳೆದ ವರ್ಷ ಕಲ್ಯಾಣ ಪಥ ಯೋಜನೆಗೆ ಚಾಲನೆ ನೀಲಾಗಿದ್ದು, ಈ ವರ್ಷ ಸಹ ಯೋಜನೆ ಮುಂದುವರಿಕೆಗೆ 300 ಕೋಟಿ ರೂ. ಮಂಡಳಿಯಿಂದ ನೀಡಲಾಗುವುದು. ಪ್ರತಿ ಜಿಲ್ಲೆಯಲ್ಲಿ ಡೈಲಾಸಿಸ್ ಘಟಕ ಸ್ಥಾಪಿಸಲಾಗುವುದು. ಅಕ್ಷರ ಆವಿಷ್ಕಾರ ಯೋಜನೆಯಡಿ 50 ಕೆ.ಪಿ.ಎಸ್.ಪಬ್ಲಿಕ್ ಶಾಲೆ ಮಂಡಳಿಯಿಂದ ಸ್ಥಾಪಿಸಲಾಗುತ್ತಿದ್ದು, ಸುಮಾರು 150 ಶಾಲೆ ಶಿಕ್ಷಣ ಇಲಾಖೆಯಿಂದ ತೆರೆಯುವ ಆಶಾಭಾವನೆ ಹೊಂದಿದ್ದೇವೆ. ಇದರಿಂದ ಗ್ರಾಮೀಣ ಭಾಗದ ನಮ್ಮ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಒದಗಿಸಲು ಸಹಕಾರಿಯಾಗಲಿದೆ ಎಂದರು. ರೈತರ ಕಲ್ಯಾಣಕ್ಕೆ ಒತ್ತು: ಪ್ರಸ್ತುತ ವರ್ಷದಲ್ಲಿ ರೈತರ ಕಲ್ಯಾಣ ನಿಟ್ಟಿನಲ್ಲಿ ಸಣ್ಣ ನೀರಾವರಿ ಇಲಾಖೆ ಸಹಯೋಗದೊಂದಿಗೆ "ಜಲಭಾಗ್ಯ" ಯೋಜನೆ ಜಾರಿಗೊಳಿಸಲಾಗುತ್ತಿದೆ. ಮಂಡಳಿ ಮತ್ತು ಇಲಾಖೆ

ಈ ವರ್ಷ ತಲಾ 100 ಕೋಟಿ ರೂ. ಖರ್ಚು ಮಾಡಲಾಗುತ್ತದೆ. ಪ್ರದೇಶದಾದ್ಯಂತ 7 ಜಿಲ್ಲೆಗಳ 40 ಕ್ಷೇತ್ರದಾದ್ಯಂತ ಪಕ್ಷಬೇಧ ಹೊರತುಪಡಿಸಿ ಎರಡು ವರ್ಷದಲ್ಲಿ ಒಟ್ಟಾರೆ 400 ಕೋಟಿ ರೂ. ಅನುದಾನ ಖರ್ಚು ಮಾಡಲಾಗುವುದು. ಇದಲ್ಲದೆ ಪ್ರತಿ ಕ್ಷೇತ್ರದಲ್ಲಿ ತಲಾ 1.50 ಕೋಟಿ ರೂ. ವೆಚ್ಚದಲ್ಲಿ ರೈತರ ಗೋದಾಮು ಸಹ ನಿರ್ಮಿಸಲಾಗುತ್ತಿದೆ ಎಂದರು.

ಕರ್ನಾಟಕ ಸರ್ಕಾರ
**ಪುರಸಭೆ ಕಾರ್ಯಾಲಯ ಚಿಟಗುಪ್ಪ**

ಸಂ: ಪುಸಚಿ/ಕಾಮಗಾರಿ/ಸಿಆರ್– /2025–26 ದಿನಾಂಕ: 28.07.2025

**ಟೆಂಡರ್ ಪ್ರಕಟಣೆ**

1) ಕಾಮಗಾರಿ/ಸರಕು/ಸೇವೆಯ ವಿವರ: DMA/2025-26/OW/WORK_INDENT46292, DMA/2025-26/OW/WORK_INDENT46293, 2) ಕಾಮಗಾರಿ/ಸರಕು/ಸೇವೆಯ ಅಂದಾಜು ಮೊತ್ತ KPPPನಲ್ಲಿ ನಮೂದಿಸಿದಂತೆ 3) ಗುತ್ತಿಗೆದಾರರ ಅರ್ಹತೆ ವಿವರ: KPPPನಲ್ಲಿ ನಮೂದಿಸಿದಂತೆ, 4) ಟೆಂಡರ ಅರ್ಜಿಯ ಬೆಲೆ ಮತ್ತು ಇ.ಎಂ.ಡಿ. ಮೊತ್ತದ ವಿವರ: KPPPನಲ್ಲಿ ನಮೂದಿಸಿದಂತೆ, 5) ಟೆಂಡರ ಫಾರಂ ಪಡೆಯಲು ಅಂತಿಮ ದಿನಾಂಕ & ಭರ್ತಿ ಮಾಡಿ ಸಲ್ಲಿಸಲು: 06.08.2025 4:30PM, 6) ಟೆಂಡರ ತೆರೆಯುವ ದಿನಾಂಕ: 07.08.2025 5:00PM 7) ಹೆಚ್ಚಿನ ವಿವರಗಳಿಗೆ ಸಂಪರ್ಕಿಸಬೇಕಾದ ವಿಳಾಸ ಕಛೇರಿ ವಿಳಾಸ, ದೂರವಾಣಿ ಸಂಖ್ಯೆ: ಮುಖ್ಯಾಧಿಕಾರಿಗಳು, ಪುರಸಭೆ ಚಿಟಗುಪ್ಪ 08483–277536, Email : itstaff_ulb_chittguppa@yahoo.com, 8) ಅಂತರಜಾಲ ತಾಣದ ವಿಳಾಸ: www.kppp.karnataka.gov.in

ಸಹಿ/–ಮುಖ್ಯಾಧಿಕಾರಿ
ಪುರಸಭೆ ಚಿಟಗುಪ್ಪಾ

ವಾ.ಸಾ.ಸಂ.ಇ/ಬೀದರ/111/ಕೆ.ಎಸ್.ಎಂ.ಸಿ.&ಎ/2025–26

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.